ಸಂಪುಟ: 13 Volume | ಸಂಚಿಕೆ: 354 Issue | ಪುಟಗಳು 08 Pages | ಗುರುವಾರ 19 ಮಾರ್ಚ್ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ವಿವೇಕಿಯಾದವನು ಬೇರೆಯವರ ತಪ್ಪನ್ನು ಕಂಡು ತನ್ನಲ್ಲಿರುವ ತಪ್ಪನ್ನು ತಿದ್ದಿಕೊಳ್ಳುತ್ತಾನೆ.
–ಸ್ವಾಮಿ ವಿವೇಕಾನಂದ

## ಇಂದು ಕಚೇರಿಗೆ ಬಿಡುವು

ಈ ಉಗಾದಿ ಹಬ್ಬವು ಎಲ್ಲರ ಬಾಳಲ್ಲೂ ಕಹಿ ಮರೆಸಿ, ಸಿಹಿ ಸಿಂಚನಗೊಳಿಸಲಿ. ಹಬ್ಬದ ಪ್ರಯುಕ್ತ ಇಂದು (19.3.26) ಕಚೇರಿಗೆ ಬಿಡುವು. ಶುಕ್ರವಾರ ಕಾರ್ಯ ನಿರ್ವಹಣೆ ಇದ್ದು, ಶನಿವಾರ ಪತ್ರಿಕೆ ಎಂದಿನಂತೆ ಬೀದರ್ ನಿಂದ ಬೆಂಗಳೂರು ವರೆಗೆ ರಾಜ್ಯಾದ್ಯಂತ ಮಾರುಕಟ್ಟೆಯಲ್ಲಿ ಲಭ್ಯವಿರುತ್ತದೆ. ಹೊಸ ವರ್ಷ ಉಗಾದಿ ಪ್ರಯುಕ್ತ ನಮ್ಮೆಲ್ಲಾ ಓದುಗರಿಗೆ, ಜಾಹೀರಾತುದಾರರಿಗೆ, ಪತ್ರಿಕಾ ಬಳಗಕ್ಕೆ ಹಾರ್ದಿಕ ಶುಭಾಶಯ. –ಸಂಪಾದಕ



ವಿಕಾಸ ಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಜಮೀರ್ ಅಹಮದ್ ಖಾನ್ ಹಾಗೂ ಕೃಷ್ಣ ಬೈರೇಗೌಡ ಅವರು 12 ಕೋಗಿಲು ಬಡಾವಣೆ ಸಂತ್ರಸ್ತ ಕುಟುಂಬಗಳು ಸೇರಿದಂತೆ 30 ಮಂದಿಗೆ ರಾಜೀವ್ ಗಾಂಧಿ ವಸತಿ ನಿಗಮದ ವತಿಯಿಂದ ಹಕ್ಕು ಪತ್ರ ವಿತರಿಸಿದರು. ಇಲಾಖೆ ಕಾರ್ಯದರ್ಶಿ ಮೋಹನ್ ರಾಜ್, ರಾಜೀವ್ ಗಾಂಧಿ ವಸತಿ ನಿಗಮದ ಎಂಡಿ ಪರಶುರಾಮ್ ಶಿನ್ನಾಳ್ಕರ್, ಜಿ ಎಂ ಪರಶುರಾಮ್ ಗೌಡ ಉಪಸ್ಥಿತರಿದ್ದರು.

# ಬಣಗಳ ಭರ್ಜರಿ ಡಿನ್ನರ್

## ಮುಖ್ಯಮಂತ್ರಿ– ಡಿಸಿಎಂ ಬಣಗಳ ಪ್ರತ್ಯೇತ ಔತಣಕೂಟ | ಕಿರಿಯ–ಹಿರಿಯ ಶಾಸಕರಿಂದ ಸಚಿವ ಪದವಿ ಬೇಡಿಕೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಿಎಂ ಕುರ್ಚಿ ಕಾದಾಟದ ನಡುವೆ ಇದೀಗ ಸಂಪುಟ ಪುನಾರಚನೆಯ ವಿಷಯ ಜೋರಾಗಿದೆ.

ಅಧಿಕಾರ ಹಂಚಿಕೆಯ ಗೊಂದಲದ ನಡುವೆ ಸಚಿವ ಸಂಪುಟ ಪುನಾರಚನೆಗಾಗಿ ಶಾಸಕರ ಒತ್ತಡ ಹೆಚ್ಚುತ್ತಿದ್ದು, ಡಿನ್ನರ್‌ಪಾರ್ಟಿಗಳು, ಪ್ರತ್ಯೇಕ ಸಭೆಗಳು ನಡೆಯುತ್ತಿದ್ದು ಚರ್ಚೆಗೆ ಗ್ರಾಸವಾಗಿದೆ.

**ಗರಿಗೆದರಿದ ಚಟುವಟಿಕೆ:** ಡಿಸಿಎಂ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳುತ್ತಿದ್ದಂತೆಯೇ ರಾಜ್ಯದಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ನಿನ್ನೆ ರಾತ್ರಿ 40ಕ್ಕೂ ಹೆಚ್ಚು ಶಾಸಕರು ಔತಣ ಕೂಟ ನಡೆಸುವ ಮುನ್ನ ಅವರ ನಿಯೋಗದ ಪ್ರತಿನಿಧಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಸುದೀರ್ಘ ಮಾತುಕತೆ ನಡೆಸಿವೆ.

**ಮುಖ್ಯಮಂತ್ರಿಗೆ ಮನವಿ:** ಪ್ರಥಮ ಮತ್ತು ಎರಡನೇ ಬಾರಿ ಗೆದ್ದಿರುವ ಶಾಸಕರು, ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಔತಣ ಕೂಟ ನಡೆಸಿದ್ದು, ಕನಿಷ್ಠ 10 ಮಂದಿ ಕಿರಿಯರಿಗೆ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕೆಂದು ಸಿಎಂ ಅವರಿಗೆ ಮನವಿ ಮಾಡಿದ್ದಾರೆ. ಸಚಿವ ಸಂಪುಟ ಪುನರ್ರಚನೆ ಮಾಡಬೇಕು. ಹೊಸಬರಿಗೆ ಅವಕಾಶ ಕಲ್ಪಿಸಬೇಕೆಂದಿದ್ದಾರೆ. ಈ ನಡುವೆ ಸಿದ್ದರಾಮಯ್ಯ ಅವರು ಆಪ್ತ ಬಣದಲ್ಲಿರುವ ಸಚಿವರಿಗೆ ಪ್ರತ್ಯೇಕ ಪ್ರತ್ಯೇಕ ಪಾರ್ಟಿ ಮಾಡಿದ್ದಾರೆ.



### ಬಣಗಳ ಡಿನ್ನರ್ ಮೇಲಾಟ

ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷ ಪೂರೈಸಿದ್ದು, ಬಣ ರಾಜಕೀಯ ಹೊರತುಪಡಿಸಿ, ಕಾಂಗ್ರೆಸ್‌ನ ಎಲ್ಲಾ ಸಚಿವರಿಗೆ, ಶಾಸಕರಿಗೆ ವಿಶೇಷ ಭೋಜನಕೂಟ ಏರ್ಪಡಿಸಿದ್ದರು. ನಂತರದ ಬೆಳವಣಿಗೆಗಳಲ್ಲಿ ಮತ್ತೆ ಬಣಗಳ ಮೇಲಾಟ ಶುರುವಾಗಿದೆ. ನಾಯಕತ್ವದ ಗೊಂದಲ ಕ್ಲಿಯರ್ ಆಗದೆ, ಸಂಪುಟ ಪುನರ್‌ರಚನೆಯಾಗದು ಎಂದು ಡಿ.ಕೆ.ಶಿ ಪಟ್ಟು ಹಿಡಿದಿದ್ದು, ಸಂಪುಟ ಪುನರ್ರಚಿಸಿದರೆ ಕುರ್ಚಿಕದನ ಶಮನವಾಗಲಿದೆ ಎನ್ನುವುದು ಸಿಎಂ ಲೆಕ್ಕಾಚಾರ. ಸದ್ಯ ಯಾವುದೂ ಸಲೀಸಾಗಿಲ್ಲ.

### ಹಿರಿಯ ಶಾಸಕರಿಂದ ಬೇಡಿಕೆ

ಸಿಎಂ ಸಿದ್ದರಾಮಯ್ಯ ಅವರನ್ನು ವಿಧಾನಸಭೆ ಚೇಂಬರ್‌ನಲ್ಲಿ ಭೇಟಿಯಾದ ಹಿರಿಯ ಕಾಂಗ್ರೆಸ್ ಶಾಸಕರು ಸಂಪುಟ ಪುನಾರಚನೆ ವೇಳೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದ್ದಾರೆ. 16 ಹಿರಿಯ ಕಾಂಗ್ರೆಸ್ ಶಾಸಕರು ಸಿಎಂ ಭೇಟಿ ಮಾಡಿ ಸಚಿವ ಸ್ಥಾನ ನೀಡುವಂತೆ ಬೇಡಿಕೆ ಇಟ್ಟರು. ಮೂರು ನಾಲ್ಕು ಬಾರಿ ಗೆದ್ದ ಶಾಸಕರು ಸಿಎಂ ಭೇಟಿ ಮಾಡಿ ಚರ್ಚಿಸಿದ್ದಾರೆ. ಸಚಿವ ಸಂಪುಟ ಪುನಾರಚನೆ ವೇಳೆ ನಮ್ಮನ್ನು ಪರಿಗಣಿಸಿ. ಕ್ಯಾಬಿನೆಟ್ನಲ್ಲಿ ನಮಗೆ ಅವಕಾಶ ಮಾಡಿಕೊಡಿ ಎಂದು ವಿನಂತಿಸಿದ್ದಾರೆ.

### ಹೈಗೂ ಕಿರಿಯರ ಪತ್ರ

ಕಿರಿಯ ಕಾಂಗ್ರೆಸ್ ಶಾಸಕರು ಸಚಿವ ಸಂಪುಟ ಪುನಾರಚನೆ ವೇಳೆ ತಮಗೆ ಸಚಿವ ಸ್ಥಾನ ನೀಡುವಂತೆ ಕೋರಿ ಹೈಕಮಾಂಡ್‌ಗೆ ಪತ್ರ ಬರೆದಿದ್ದರು. ಇದೀಗ ಹಿರಿಯ ಶಾಸಕರು ಸಚಿವ ಸ್ಥಾನದ ಬೇಡಿಕೆ ಇಟ್ಟಿದ್ದಾರೆ. ಉಪ ಚುನಾವಣೆ ಮುಗಿದ ಬಳಿಕ ದೆಹಲಿಗೆ ಹೋಗಿ ಹೈಕಮಾಂಡ್ ಗಮನಕ್ಕೆ ತರುವುದಾಗಿ ಸಿಎಂ ಭರವಸೆ ನೀಡಿದ್ದಾರೆ. ನೀವು ಹೈಕಮಾಂಡ್ ನಾಯಕರ ಭೇಟಿ ಮಾಡಿ ಮನವಿ ಸಲ್ಲಿಸಿ ಎಂದು ಇದೇ ವೇಳೆ ಸಿಎಂ ಸಿದ್ದರಾಮಯ್ಯ ಸಲಹೆ ನೀಡಿದ್ದಾಗಿ ತಿಳಿದು ಬಂದಿದೆ.

### ಸಂಪುಟದಲ್ಲಿ ಬೇಕು ಅವಕಾಶ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಪುನಾರಚನೆ ಮಾಡುವಾಗ ಮೊದಲ ಮತ್ತು ಎರಡನೇ ಬಾರಿ ಶಾಸಕರಾದವರಿಗೆ ಸಚಿವ ಸ್ಥಾನ ನೀಡುವ ಬಗ್ಗೆ ಒತ್ತಡ ಹೇರುವ ಕುರಿತು ಕಾರ್ಯತಂತ್ರ ಹೆಣೆಯಲು ಸಭೆಯಲ್ಲಿ ಚರ್ಚಿಸಿದ್ದಾರೆ. ಇದೇ ಸಂದರ್ಭದಲ್ಲಿ ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ಮಧ್ಯಪ್ರವೇಶಕ್ಕೆ ಒತ್ತಾಯಿಸಲು ಕೈ ಶಾಸಕರು ಚರ್ಚಿಸಿದ್ದಾರೆ ಎಂದು ಮೂಲ ಖಚಿತ ಪಡಿಸಿದೆ.

# ನೆಲಕ್ಕುರುಳಿದ ಪಾರ್ಕಿಂಗ್ ಶೆಡ್..!

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನಗರದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲಿರುವ ಅಭ್ಯರ್ಥಿಗಳಿಗಾಗಿ ನಿರ್ಮಿಸಿರುವ ಪ್ರಬುದ್ಧ ಅಕಾಡೆಮಿಯ ಲಕ್ಷಾಂತರ ರೂ. ವೆಚ್ಚದ ಪಾರ್ಕಿಂಗ್ ಶೆಡ್ ಧರೆಗುರುಳಿದೆ.

ಲ್ಯಾಂಡ್ ಆರ್ಮಿಯಿಂದ ನಿರ್ಮಿಸಿರುವ ಶೆಡ್ ರಾತ್ರಿ ಸುರಿದ ಭಾರಿ ಮಳೆ, ಗಾಳಿಗೆ ಧರೆಗುರುಳಿದೆ. ಇದು ಕಳಪೆ ಕಾಮಗಾರಿಗೆ ಮತ್ತೊಂದು ಸಾಕ್ಷಿಯಾಗಿದೆ. ಅದೃಷ್ಟವಶಾತ್ ಶೆಡ್ ಕೆಳಗೆ ವಿದ್ಯಾರ್ಥಿಗಳು, ವಾಹನಗಳು ಇಲ್ಲದ್ದರಿಂದ ಯಾವುದೇ ಅನಾಹುತಗಳು ಸಂಭವಿಸಿಲ್ಲ.



### ಪರ್ಸಂಟೇಜ್ ಆಸೆಗಾಗಿ ಗುತ್ತಿಗೆ

ಇದೀಗ ಶೆಡ್ ಉರುಳಿ ಬಿದ್ದಿದ್ದು, ಇಡೀ ಕಾಮಗಾರಿಯ ಗುಣಮಟ್ಟದ ಬಗ್ಗೆ ಪ್ರಶ್ನೆಗಳು ಎದ್ದಿವೆ. ಜನಪ್ರತಿನಿಧಿಗಳಿಗೆ ಪರ್ಸಂಟೇಜ್ ಕೊಡುವ ಸಲುವಾಗಿ ಲ್ಯಾಂಡ್ ಆರ್ಮಿಗೆ ಕಾಮಗಾರಿ ಗುತ್ತಿಗೆ ನೀಡುತ್ತಿದ್ದಾರೆ ಎನ್ನುವ ಆರೋಪ ಇದೆ.

### 30 ಕೋಟಿಯ ಇಡೀ ಕಟ್ಟಡ ಕಳಪೆ

30 ಕೋಟಿಯ ಇಡೀ ಕಟ್ಟಡ ಕಳಪೆಯಾಗಿದ್ದು, ಪುನಃ ಪರಿಶೀಲನೆ ನಡೆಸಿ, ಗುಣಾತ್ಮಕ ಪರೀಕ್ಷೆ ನಡೆಸಬೇಕು ಎನ್ನುವ ಆಗ್ರಹ ಕೇಳಿ ಬಂದಿದೆ. ಜನೇವರಿಯಲ್ಲಿ ಉದ್ಘಾಟನೆಗೊಂಡ ಪ್ರಬುದ್ಧ ಅಕಾಡೆಮಿಯ ಕಟ್ಟಡದ ಛಾವಣಿ ಒಂದು ತಿಂಗಳೊಳಗೆ ಉದುರಿ ಬಿದ್ದಿತ್ತು. ಆಗ ಕೆಆರ್ ಡಿಐಎಲ್‌ನ ಎಇಇ ಸೌರಭ ಭೀಮನ್ ಅಮಾನತು ಮಾಡಲಾಗಿತ್ತು.









ಇಂದಿನಿಂದ ಎಸ್‌ಎಸ್‌ಎಲ್ಸಿ ಪರೀಕ್ಷೆ ಆರಂಭವಾಗುತ್ತಿದ್ದು, ಪರೀಕ್ಷೆ ಬರೆಯುತ್ತಿರುವ ಎಲ್ಲಾ ಮಕ್ಕಳಿಗೆ ನನ್ನ ಹೃದಯಪೂರ್ವಕ ಶುಭಾಶಯ: ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವ

# ರಾಜ್ಯ ಮಟ್ಟದ ಕರ್ನಾಟಕ ರತ್ನ ಡಾ.ಪುನೀತ್ ರಾಜಕುಮಾರ್' ಪ್ರಶಸ್ತಿ ಪ್ರದಾನ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕರ್ನಾಟಕ ರಕ್ಷಣಾ ವೇದಿಕೆ (ಕಾವಲು ಪಡೆ) ಬೀದರ್ ಜಿಲ್ಲಾ ಘಟಕ ಹಾಗೂ ರಾಜ್ಯ ಘಟಕದ ವತಿಯಿಂದ ಕಾಂಗ್ರೆಸ್ ಎಸ್‌ಸಿ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್ ಅವರಿಗೆ ರಾಜ್ಯ ಮಟ್ಟದ ಕರ್ನಾಟಕ ರತ್ನ ಡಾ. ಪುನೀತ್ ರಾಜಕುಮಾರ್" ಪ್ರಶಸ್ತಿ ಪ್ರದಾನಿಸಲಾಯಿತು.

ನಗರದಲ್ಲಿ ನಿನ್ನೆ ಆಯೋಜಿಸಲಾದ ಸಮಾರಂಭದಲ್ಲಿ, ಡಾ.ಪುನೀತ್ ರಾಜಕುಮಾರ್ ಅವರ 51ನೇ ಹುಟ್ಟುಹಬ್ಬದ ಅಂಗವಾಗಿ ಸಮಾಜ ಸೇವೆಯಲ್ಲಿ ಸಲ್ಲಿಸಿರುವ ಕೊಡುಗೆಯನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಲಾಯಿತು.

ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಸಾರ್ವಜನಿಕರ ವಿಶ್ವಾಸಗಳಿಸಿರುವ ಮಲ್ಲಿಕಾರ್ಜುನ್ ಅವರ ಸೇವೆಯನ್ನು ಸಂಘಟನೆಯ ಪದಾಧಿಕಾರಿಗಳು ಶ್ಲಾಘಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಹಲವು ಗಣ್ಯರು ಉಪಸ್ಥಿತರಿದ್ದರು.

ಪ್ರಶಸ್ತಿ ಸ್ವೀಕರಿಸಿದ ಮಲ್ಲಿಕಾರ್ಜುನ್ ಅವರು, ಈ ಗೌರವವನ್ನು ಇನ್ನಷ್ಟು ಸೇವಾ ಮನೋಭಾವದಿಂದ ಸಮಾಜದ ಒಳಿತಿಗಾಗಿ ಕೆಲಸ ಮಾಡಲು ಪ್ರೇರಣೆಯಾಗಿ ಸ್ವೀಕರಿಸುವುದಾಗಿ ತಿಳಿಸಿದರು.

# ಶಿವಾನುಭವ ಗೋಷ್ಠಿ: ಹರ ಮುನಿದರೂ ಗುರು ಕಾಯುವನು



• ಮಲ್ಲಮ್ಮ ನುಡಿ ವಾರ್ತೆ ಯಲಬುರ್ಗಾ

ಯುಗಾದಿ ಅಮಾವಾಸ್ಯೆ ಚತುರ್ದಶಿ ನಿಮಿತ್ತವಾಗಿ ತಾಲೂಕಿನ ದಮ್ಮೂರ ಗ್ರಾಮದಲ್ಲಿ ಮಾ.17 ರಂದು 384 ನೇ ಶಿವಾನುಭವ ಗೋಷ್ಠಿ ಜರುಗಿತು. ಹರ ಮುನಿದರು ಗುರು ಕಾಯುವನು, ಗುರುಮುನಿದರೆ ಯಾರು ಕಾಯುವವರು..? ಎಂಬುದು ಪರಮ ಸತ್ಯವಾದ ಉಕ್ತಿ, ದೇವರು ಕೋಪಿಸಿಕೊಂಡರು ಗುರುಗಳು ನಮ್ಮನ್ನು ರಕ್ಷಿಸುತ್ತಾರೆ ಎಂದು ಕೃಷಿ ಶ್ರೇಷ್ಠ ಪಂಡಿತ ವಿಜೇತರಾದ ಯರೆಹಂಚಿನಾಳದ ಶ್ರೀಮತಿ ಸವಿತಾ ನಾಗರಡ್ಡಿ ಅವರು ಮಾತನಾಡಿದರು.

ಶಿಕ್ಷಣದಿಂದ ಸ್ವಾಭಿಮಾನದ ಬದುಕು ಸಾಧ್ಯ

ಪ್ರತಿಯೊಬ್ಬರು ಶಿಕ್ಷಣ ಪಡೆದು ಕೊಳ್ಳಬೇಕು ಮಕ್ಕಳಿಗೆ ಒಳ್ಳೆ ಶಿಕ್ಷಣ ಮತ್ತು ಸಂಸ್ಕಾರ ಕೊಡಬೇಕು ಎಂದು ಗಜೇಂದ್ರಗಡದ ಉಪನ್ಯಾಸಕ ಶರಣು ಕಟ್ಟಿಮನಿ ಮಾತನಾಡಿ ,ಹರಮುನಿದರೆ ಗುರು ಕಾಯುವನು ಎಂಬ ಚಿಂತನ ಮಂಥನ ಗೋಷ್ಠಿಯಲ್ಲಿ ಮಾತನಾಡಿದರು. ಸಾವಯವ ಕೃಷಿಯಲ್ಲಿ ಯರೆಹಂಚಿ ಮಹಿಳೆ ಸವಿತಾ ನಾರಡ್ಡಿ ಅವರು ಅಪಾರವಾದ ಸಾದನೆಮಾಡಿ ,ಮೇಣಸಿನಕಾಯಿ ಬೆಳೆಗೆ ಒಂದು ಕ್ವಿಂಟಲ್ ಗೆ 73 ಸಾವಿರ ಪಡೆದುಕೊಂಡು ರಾಜ್ಯಕ್ಕೆ ಮಾದರಿಯಾಗಿದ್ದಾರೆ , ಅವರಂತೆ ಯುವ ಸಮುದಾಯದವರು ಕೃಷಿಯಲ್ಲಿ ಶ್ರಮವಹಿಸಿದಾಗ ಜಯಸಾದಿಸಲು ಸಾದ್ಯ ಎಂದು ರೈತ ಸಂಘದ ಉಪಾಧ್ಯಕ್ಷ ಅಂದಪ್ಪ ಕೊಳೂರು ಅವರು ಮಾತನಾಡಿದರು.ಈ ವೇಳೆ ಯರೇಹಂಚಿನಾಳ ಚಿತ್ರ ನಟಿ ಶಿವಮ್ಮ ಯರೆಹಂಚಿನಾಳ, ರಕ್ತ ಭಂಡಾರ ಕೇಂದ್ರದ ಸರೋಜಾ ಪತ್ತಾರ,ಸಮಾಜ ಸೇವಕರಾದ ಕಲ್ಲೂರಿನ ಮಂಜುನಾಥ ಕುರಿ,ರಾಂಪೂರಿನ ಕಳಕನಗೌಡ ಭೀ.ಪಾಟೀಲ್, ಮಾತನಾಡಿದರು. ಮಠದ ಒಡೆಯರಾದ ಹನುಮಂತಪ್ಪಜ್ಜ ಧರ್ಮರಮಠ, ಹಾಗು ಶರಣಯ್ಯ ಹಿರೇಮಠ ಸಾನಿಧ್ಯ ವಹಿಸಿದ್ದರು. ಪ್ರಾಸ್ತಾವಿಕವಾಗಿ ಗುರುಮೂರ್ತಿ ಬಡಿಗೇರ ಮಾತನಾಡಿದರು.

ಶ್ರೀ ಭೀಮಾಂಭಿಕಾದೇವಿ ಶಿವಾನುಭವ ಸೇವಾ ಸಮಿತಿ ಅದ್ಯಕ್ಷ ಶರಣಬಸಪ್ಪ ದಾನಕೈ ಅವರು ಅದ್ಯಕ್ಷತೆ ವಹಿಸಿ ಮಾತನಾಡಿ ಗುರುವಿಗೆ ಅಪಾರವಾದ ಶಕ್ತಿಯಿದೆ ,ಗುರುವಿನಿಂದ ಮುಖ್ಯ ಮಂತ್ರಿ ,ಪ್ರಧಾನ ಮಂತ್ರಿ ಆಗಲು ಸಾದ್ಯ ಗುರುವಿನಲ್ಲಿ ಬಾಗುವ ಸಂಸ್ಕೃತಿ ನಮ್ಮದಾಗಬೇಕು ಎಂದರು.ಈ ವೇಳೆ ವೀರಪ್ಪ ರಾವಣಕಿ,ರಿಜ್ವಾನ ಹಳ್ಳಿಕೇರಿ ಮುತ್ತಪ್ಪ ಕುರಿ,ಉಮೇಶ ನಾಗರಡ್ಡಿ, ಪ್ರಕಾಶ ರಾವಣಕಿ, ದ್ಯಾಮಕ್ಕ ಜರಕುಂಟಿ ಸೇರಿದಂತೆ ಇತರರು ಇದ್ದರು

# ಒಳ ಮೀಸಲಾತಿ ಹೆಸರಿನ ವರ್ಗೀಕರಣ ತಡೆದು ಹಳೆಯ ಪದ್ಧತಿಯಂತೆ ನಡೆಸಲು ಒತ್ತಾಯ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಒಳ ಮೀಸಲಾತಿ ಹೆಸರಿನಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ ನಡೆಯುತ್ತಿರುವ ಅನ್ಯಾಯ ವಿರೋಧಿಸಿ ಮಾ.18 ರಂದು ಬುಧವಾರ ಎಲ್ಲಾ ಪರಿಶಿಷ್ಟ ಜಾತಿಗಳ ಒಕ್ಕೂಟದ ವತಿಯಿಂದ ಪಟ್ಟಣದಲ್ಲಿ ಬ್ರಹತ್ ಪ್ರತಿಭಟನೆ ನಡೆಯಿತು.

ಕನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟದ ಜಿಲ್ಲಾಧ್ಯಕ್ಷ ಎಮ್.ಪಿ.ರಾಠೋಡ್ ಮತ್ತು ಕಾರ್ಯದರ್ಶಿ ಸುರೇಶ ಹುಬಳಿಕರ್ ನೇತೃತ್ವದಲ್ಲಿ ಪರಿಶಿಷ್ಟ ಜಾತಿಯ ಎಲ್ಲಾ ಒಳಪಂಗಡಳ ಸಾವಿರಾರು ಜನರು ಪ್ರತಿಭಟನೆಯಲ್ಲಿ ಭಾಗವಹಿಸಿದರು. ಪ್ರತಿಭಟನಾ ಮೆರವಣಿಗೆಯು ಪಟ್ಟಣದ ಪಾಪವ್ವಾ ಚೌಕ ಮೂಲಕ ಪಾಪವ್ವ ದೇವಿಯ ಪ್ರತಿಮೆಗೆ ಪೂಜೆ ಸಲ್ಲಿಸಿ ಪ್ರಾರಂಭಿಸಲಾಯಿತು. ಮೆರವಣಿಗೆಯು ಪಾಪವ್ವ ಚೌಕನಿಂದ ಮಹಾತ್ಮಾಗಾಂಧಿ ವೃತ್ತ, ಅಂಬೇಡ್ಕರ್ ವೃತ್ತದ ಮೂಲಕ ಸಾಗಿ ತಹಸೀಲ ಕಚೇರಿಯಲ್ಲಿ ಸಮಾವೇಶಗೊಂಡಿತು. ನಂತರ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ಮೂಲಕ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಭಟನಾಕಾರರು, ಕರ್ನಾಟಕದಲ್ಲಿಯ ಬಂಜಾರ, ಭೋವಿ, ಲಮಾಣಿ, ಕೊರಮ, ಕೊಂಚ, ಜಾಂಬವ, ವಡ್ಡರ, ಹೊಲೆಯ, ಛಲವಾದಿ, ಚರ್ಮಕಾರ ಸೇರಿದಂತೆ 101 ಸೂಕ್ಷ ಜಾತಿಗಳು ಪರಿಶಿಷ್ಠ ಜಾತಿಗಳ ಪಟ್ಟಿಯಲಿವೆ. ಆದರೆ ಕರ್ನಾಟಕ ರಾಜ್ಯದಲ್ಲಿ ಒಳಮೀಸಲಾತಿ ಹೆಸರಿನಲ್ಲಿ ಇತ್ತೀಚೆಗೆ ನಡೆದ ನೇಮಕಾತಿಗಳಲ್ಲಿ ಪರಿಶಿಷ್ಟ ಜಾತಿಗಳ ಪ್ರವರ್ಗ ಬಿ ಮತ್ತು ಪ್ರವರ್ಗ ಸಿ ಗುಂಪಿಗೆ ಶೂನ್ಯ ಹುದ್ದೆಗಳನ್ನು ಹಂಚಿಕೆ ಮಾಡಲಾಗಿದೆ. ಈ ಮೂಲಕ ಛಲವಾದಿ, ಬಂಜಾರ, ಭೋವಿ, ಕೊರಮ, ಕೊರಚ, ವಡ್ಡರ, ಕೊಂಚ, ಬುರುಬುರ ಪೋಚಮ್ಮ ಸೇರಿದಂತೆ 70ಕ್ಕೂ ಹೆಚ್ಚು ಜಾತಿಗಳಿಗೆ ಘೋರ ಅನ್ಯಾಯವಾಗಿದೆ. ಕಾರಣ ಸರ್ಕಾರ ಹಳೆಯ ಮೀಸಲಾತಿಯ ನಿಯಮದಂತೆ ಪ್ರತಿಶತ 50 ರ ಅನ್ವಯ ನೇಮಕಾತಿ ಮತ್ತು ಶೈಕ್ಷಣಿಕ ಪ್ರವೇಶ ಪ್ರಕ್ರಿಯಯನ್ನು ಮುಂದುವರಿಸಿ, ಇದಕ್ಕೆ ತ್ವರಿತವಾಗಿ ನೇಮಕಾತಿ ಅಧಿಸೂಚನೆ ಹೊರಡಿಸಬೇಕು. ಈ ಹಿಂದೆ ರಾಜ್ಯ ಸರ್ಕಾರ ಪ.ಜಾ ಮತ್ತು ಪ.ಪಂ ಗಳ ಮೀಸಲಾತಿಯನ್ನು ಹೆಚ್ಚಳ ಮಾಡಿರುವ ಆದೇಶವನ್ನು ಸಂವಿಧಾನದ 9ನೇ ಷೆಡ್ಯೂಲ್‌ನಲ್ಲಿ ಸೇರಿಸಲು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಲಿಕೊಡಲು ಪ್ರಧಾನಮಂತ್ರಿಗಳ ಹತ್ತಿರ ನಿಯೋಗ ಹೋಗಿ, ಕೇಂದ್ರದ ಮೇಲೆ ಒತ್ತಡ ಹೇರಬೇಕು. ಏಕಪಕ್ಷೀಯವಾಗಿ ಒಳಮೀಸಲಾತಿ ವರ್ಗೀಕರಣ ನಿರ್ಧಾರ ಮಾಡಬಾರದು. ಪರಿಶಿಷ್ಟ ಜ್ಯಾತಿ ಪ್ರವರ್ಗ ಎ, ಬಿ, ಸಿ ಎಂದು ನಮೂದಿಸಿದ ಜಾತಿ ಪ್ರಮಾಣಪತ್ರಗಳು ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಪ್ರದೇಶ ಬಂಜಾರಾ ಸೇವಾ ಸಂಘದ ಅದ್ಯಕ್ಷ ವಿಲಾಸ ರಾಠೋಡ, ಕರ್ನಾಟಕ ಪ್ರದೇಶ ಬಂಜಾರಾ ಸೇವಾ ಸಂಘದ ಜಿಲ್ಲಾ ಉಪಾಧ್ಯಕ್ಷ ಸುಭಾಷ ಚವ್ಹಾಣ, ಸಂಘದ ತಾಲೂಕು ಅಧ್ಯಕ್ಷ ಸೂಬಾಷ ಆಡೆ, ಭೋವಿ ವಡ್ಡರ ಸಮಾಜದ ಸಂಜೀವ ಸಿಂಧೆ, ರಾಜಕುಮಾರ ಸಿಂಧೆ, ವೆಂಕಟ ಸಿಂಧೆ, ದತ್ತು ಪವಾರ, ಪ್ರಕಾಶ ಸಂಪಂಗೆ, ಸುರೇಶ ಚವ್ಹಾಣ, ಚಂದು ಸಂಪಂಗೆ, ಸಂಜು ಸಿಂದೆ, ಪ್ರಮುಖರಾದ ಸಿದ್ದಪ್ಪ ಪೋಚಮ್ಮ, ಸಂತೋಷ ಮಾನೆ, ಪ್ರಕಾಶ ಯದವಾ, ಜಗನ್ನಾಥ ಸಂಪಂಗೆ, ಲಾಲು ರಾಮಲೆ, ರಂಗಲಾಲ ಜಾಧವ, ವಿಶ್ವನಾಥ ಸಂಪಂಗೆ, ನಾಗನಾಥ ಸಂಪಂಗೆ, ಸುನೀಲ ಬುಡ್ಡಣ್ಣ, ವಿಲಾಸ ರಾಠೋಡ, ಸುಭಾಷ ರಾಠೋಡ, ಮಾನಾಜಿ ಚವ್ಹಾಣ, ವಿಜಯಕುಮಾರ ಜಾಧವ, ಸಂತೋಷ ಮಾನೆ, ಮುಕೇಶ ಚವ್ಹಾಣ, ಬಸವರಾಜ ಸಂಪಂಗೆ, ವಿಶ್ವನಾಥ ಸಂಪಂಗೆ, ಸಂತೋಷ ಮಾನೆ, ಬಾಲಾಜಿ ಜಾಧವ, ದಿಲೀಪ ಜೈವಂತರಾವ ಸೇರಿದಂತೆ ಹಲವರು ಇದ್ದರು.

# ಅಂಧರ ಬಾಳಿಗೆ ಬೆಳಕಾದವರು ಪುಟ್ಟರಾಜ ಕವಿ ಗವಾಯಿಗಳು



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಅಂಧರ ಬಾಳಿಗೆ ಬೆಳಕದವರು ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳು ಎಂದು ರಾಜೀವ ಗಾಂಧಿ ಪ್ರಥಮ ದರ್ಜೆ ಕಾಲೇಜಿನ ಪ್ರೊ. ರುದ್ರೇಶ್ವರ್ ಸ್ವಾಮಿ ಗೋರ್ಟಾ ತಿಳಿಸಿದರು. ಇಲ್ಲಿನ ಬಿ. ಕೆ. ಡಿ. ಬಿ. ಸಭಾ ಮಂಟಪದಲ್ಲಿ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿ ಗಳವರ ಶಿಷ್ಯಂದಿರರ ಸಂಗೀತ ಕಲಾ ಬಳಗದ ವತಿಯಿಂದ ಗಾನಯೋಗಿ ಶಿವಯೋಗಿ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿ ಗಳವರ 112ನೇ ಜಯಂತಿ ಉತ್ಸವ ನಿಮಿತ್ಯ ಸಂಗೀತ ಸಮಾರಂಭದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು ಶಿಷ್ಯಂದೀರ್ ಬಳಗದಿಂದ ಇವ್ರಿಗಾದಷ್ಟು ತುಲಾಭಾರ ಮತ್ಯಾರಿಗೂ ಅಗಲಿಕಿಲ್ಲ. ಅಲ್ಲದೆ ಅನೇಕ ಪ್ರತಿಷ್ಠ ಪ್ರಶಸ್ತಿ ಪುರಸ್ಕಾರ ಗಳು ಇವರನ್ನು ಹುಡುಕುತ್ತಾ ಬಂದಿವೆ ಎಂದರು. ಸಮಾರಂಭದ ಅಧ್ಯಕ್ಷತೆ ಸರಕಾರಿ ನಿಲಾಂಬಿಕಾ ಬಾಲಕಿಯರ ಪ್ರಾಢಶಾಲೆಯ ಮುಖ್ಯಗುರುಗಳಾದ ಮನೋಹರ್ ಹೊಳಕರ್ ವಹಿಸಿ ಮಾತನಾಡಿ ಸಂಗೀತ ವು ಮನಸ್ಸಿಗೆ ಶಾಂತಿ ನೀಡುತ್ತದೆ. ಭುದ್ಧಿ ಶಕ್ತಿ ಸಹ ಚುರುಕು ಆಗುತ್ತದೆ ಎಂದರು. ಇನ್ನು ಹೆಚ್ಚಿನ ಆಸಕ್ತಿ ಸಂಗೀತ ಕ್ಕೆ ತೋರಬೇಕು ಎಂದರು. ಹಿರಿಯ ಕಲಾವಿದರಾದ ಧೂಳಪ್ಪ ಮುಡುಬಿ. ಅರ್ಜುನ ಶಿಂದೆ. ಪ್ರಾಚಾರ್ಯರಾದ ಪೂರ್ಣಸಿಂಗ್ ರಾಠೋಡ .ಪ್ರಾಸ್ತಾವಿಕ ಸಂಗೀತ ಕಲಾ ಬಳಗದ ಅಧ್ಯಕ್ಷರಾದ ರಾಜಕುಮಾರ ಹೂಗಾರ ಮಾತನಾಡಿದರು. ಕಲಾವಿದ ಶಾಂತಯ್ಯ ಮಠಪತಿ. ಪ್ರಾರ್ಥನೆ ಡಾ. ಪುಟ್ಟರಾಜ ಕವಿ ಗವಾಯಿಗಳ ಸಂಗೀತ ಪಾಠ ಶಾಲೆಯ ಮಕ್ಕಳಿಂದ ನಡೆಯಿತ್ತು. ನಂತರ ಸಂಗೀತ ಕಲಾವಿದರಾದ್ ಕು. ಪ್ರಗತಿ. ಎಸ್. ಹಿರೇಮಠ್. ಅಮೃತಾ ಗಣೇಶ. ರಾಜಕುಮಾರ ಹೂಗಾರ್. ಧೂಳಪ್ಪ ಮುಡಬಿ. ಸಂಗಯ್ಯ ಹಿರೇಮಠ್. ಕು. ಅರೋಹಿ. ಆಕಾಶ. ಪ್ರೇಮ. ಸಂಗಮೇಶ. ತಬಲಾ ಸಾಥ ದಲ್ಲಿ ರಾಮಚಂದ್ರ ಕಲ್ಲ ಹಿಪ್ಪರ್ಗಿ ಜನಾರ್ಧನ್ ವಾಘಮಾರೆ. ರಮೇಶ ಗರುಡಕರ್. ಶಿವರಾಜ್ ಖೇಲೆ. ಇನ್ನಿತರರು ಸೇವೆ ಸಲ್ಲಿಸಿದರು. ಪ್ರಸಾದ್ ಸೇವೆ ಸಂಗೀತ ಕಲಾವಿದ ನಿಂಗಯ್ಯಾ ಹಿರೇಮಠ ಸಲ್ಲಿಸಿ ದರು.

# ಜಯಂತಿ ಕಾರ್ಯಕ್ರಮ

ಬಳ್ಳಾರಿ,ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ, ಮತ್ತು ನೇಕಾರ ಸಮುದಾಯಗಳ ಒಕ್ಕೂಟ, ಬಳ್ಳಾರಿ ಇವರ ಸಂಯುಕ್ತಾಶ್ರದಲ್ಲಿ ಮಾ.23 ರಂದು ಬೆಳಿಗ್ಗೆ 09.30 ಗಂಟೆಗೆ ನಗರದ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಆದ್ಯ ವಚನಕಾರ ನೇಕಾರ ಸಂತ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮ ಏರ್ಪಡಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಇವರು ಕಾರ್ಯಕ್ರಮ ಉದ್ಘಾಟನೆ ನೆರವೇರಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದಲ್ಲಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ವಿವಿಧ ನಿಗಮ ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಗೌರವಾನ್ವಿತ ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗ ಮತ್ತು ವಿವಿಧ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿರುವರು

# ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349


## ಅಲಿಕಲ್ಲು ಮಳೆಯಿಂದ ಹಾನಿ, ರೈತರಿಗೆ ತಕ್ಷಣ ಪರಿಹಾರ ನೀಡಲಿ

ಇತ್ತೀಚೆಗೆ ಹಲವೆಡೆ ಸುರಿದ ಅಲಿಕಲ್ಲು ಮಳೆಯಿಂದ ತೆ-ೂಟಗಾರಿಕೆ ಬೆಳೆಗಳು ಸೇರಿದಂತೆ ವಿವಿಧ ಕೃಷಿ ಬೆಳೆಗಳು ಭಾರೀ ಹಾನಿಗೊಳಗಾಗಿವೆ. ವರ್ಷಪೂರ್ತಿ ಶ್ರಮಪಟ್ಟು ಬೆಳೆ ಬೆಳೆದ ರೈತರಿಗೆ ಈ ಅಕಾಲಿಕ ಪ್ರಕೃತಿ ವಿಕೋಪ ದೊಡ್ಡ ಆಘಾತವನ್ನುಂಟುಮಾಡಿದೆ. ದ್ರಾಕ್ಷಿ, ಮಾವು, ತರಕಾರಿ ಬೆಳೆಗಳು ಸೇರಿದಂತೆ ತೋಟಗಾರಿಕೆ ಕ್ಷೇತ್ರಕ್ಕೆ ಹೆಚ್ಚು ನಷ್ಟವಾಗಿರುವುದು ಕಂಡುಬರುತ್ತಿದೆ. ಇದರಿಂದ ರೈತರ ಆರ್ಥಿಕ ಸ್ಥಿತಿ ಮತ್ತಷ್ಟು ಸಂಕಷ್ಟಕ್ಕೆ ತಳ್ಳಲ್ಪಟ್ಟಿದೆ. ರೈತರು ಸಾಲ ಮಾಡಿ ಬೀಜ, ರಸಗೊಬ್ಬರ, ಔಷಧಿ ಖರೀದಿ ಮಾಡಿ ಬೆಳೆ ಬೆಳೆದಿದ್ದಾರೆ.

ಆದರೆ ಅಲಿಕಲ್ಲು ಮಳೆಯಿಂದ ಬೆಳೆಗಳು ನೆಲಸಮವಾಗಿರುವುದರಿಂದ ಅವರ ಶ್ರಮ ನೀರಿನಲ್ಲೇ ಕರಗಿದಂತಾಗಿದೆ. ತೋಟಗಾರಿಕೆ ಬೆಳೆಗಳು ಹಾನಿಯಾದರೆ ರೈತರಿಗೆ ದೊಡ್ಡ ನಷ್ಟ ಉಂಟಾಗುತ್ತದೆ, ಏಕೆಂದರೆ ಈ ಬೆಳೆಗಳಿಗೆ ಹೆಚ್ಚು ಖರ್ಚು ಮಾಡಬೇಕಾಗುತ್ತದೆ. ಆದ್ದರಿಂದ ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಿ ನಷ್ಟದ ಪ್ರಮಾಣವನ್ನು ಅಂದಾಜಿಸಬೇಕು. ತೋಟಗಾರಿಕೆ ಬೆಳೆಗಳಿಗೆ ವಿಶೇಷ ಪರಿಹಾರ ಘೋಷಣೆ ಮಾಡುವುದು ಅತ್ಯಗತ್ಯವಾಗಿದೆ. ರೈತರ ಸಂಕಷ್ಟವನ್ನು ಅರಿತು ಸರ್ಕಾರ ತಕ್ಷಣ ಆರ್ಥಿಕ ನೆರವು ನೀಡಿದರೆ ಮಾತ್ರ ರೈತರಿಗೆ ಸ್ವಲ್ಪ ಮಟ್ಟಿಗೆ ಧೈರ್ಯ ಸಿಗುತ್ತದೆ. ಪ್ರಕೃತಿ ವಿಕೋಪಗಳು ರೈತರ ಜೀವನವನ್ನು ಅನೇಕ ಬಾರಿ ಸಂಕಷ್ಟಕ್ಕೆ ದೂಡುತ್ತವೆ. ಇಂತಹ ಸಂದರ್ಭಗಳಲ್ಲಿ ಸರ್ಕಾರ ರೈತರ ನೆರವಿಗೆ ನಿಲ್ಲುವುದು ಅವರ ಕರ್ತವ್ಯವಾಗಿದೆ. ಆದ್ದರಿಂದ ಅಲಿಕಲ್ಲು ಮಳೆಯಿಂದ ಹಾನಿಯಾದ ತೋಟಗಾರಿಕೆ ಬೆಳೆಗಳು ಹಾಗೂ ಇತರೆ ಬೆಳೆಗಳಿಗೆ ಸರ್ಕಾರ ತಕ್ಷಣ ಸಮರ್ಪಕ ಪರಿಹಾರ ನೀಡಬೇಕು. ಇದರಿಂದ ರೈತರ ನಷ್ಟ ಸ್ವಲ್ಪ ಮಟ್ಟಿಗೆ ಕಡಿಮೆಯಾಗುವುದರ ಜೊತೆಗೆ ಕೃಷಿ ಕ್ಷೇತ್ರದ ಮೇಲಿನ ಅವರ ನಂಬಿಕೆ ಉಳಿಯುತ್ತದೆ.

# ರವಿ ಸ್ವಾಮಿಗೆ ಪುನೀತ್ ರಾಜಕುಮಾರ್ ಪ್ರಶಸ್ತಿ ಪ್ರದಾನ




• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ತಾಲೂಕಿನ ನಿರ್ಣಾ ಗ್ರಾಮದ ಹುಟ್ಟು ಹೋರಾಟಗಾರು, ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆ ಸೇರಿದಂತೆ ಸಾಮಾಜಿಕ ಕ್ಷೇತ್ರದಲ್ಲಿ ಹಲವಾರು ಹೋರಾಟಗಳು ಮಾಡುತ್ತ ಇಡೀ ರಾಜ್ಯಕ್ಕೆ ಮಾದರಿಯಾದ ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಅವರಿಗೆ, ಬೀದರ್ ನಗರದಲ್ಲಿ ಕರ್ನಾಟಕ ಸಾಂಸ್ಕೃತಿಕ ಸಭಾಂಗಣದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಕಾವಲು ಪಡೆ ಬೀದರ್ ಜಿಲ್ಲಾ ಹಾಗೂ ರಾಜ್ಯ ಘಟಕದ ವತಿಯಿಂದ ಆಯೋಜಿಸಿದ್ದ ಯುವ ರತ್ನ ಪವರ ಸ್ಟಾರ್ ಪುನೀತ್ ರಾಜಕುಮಾರ್ ಇವರ 51ನೇ ಜನ್ಮ ದಿನಾಚರಣೆಯಲ್ಲಿ 2026ನೇ ಸಾಲಿನ ರಾಜ್ಯ ಮಟ್ಟದ ಕರ್ನಾಟಕ ರತ್ನ ಡಾ. ಪುನೀತ್ ರಾಜಕುಮಾರ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಹವಾ ಮಲ್ಲಿನಾಥ ಮಹಾರಾಜರು ನಿರಗುಡಿ, ಕರ್ನಾಟಕ ರಕ್ಷಣಾ ವೇದಿಕೆ(ಕಾವಲು ಪಡೆ) ರಾಜ್ಯಾಧ್ಯಕ್ಷ ಡಾ. ಹೆಚ್, ಸುರೇಶ್, ರಾಜ್ಯ ಉಪಾಧ್ಯಕ್ಷ ಡಿ. ಎಂ. ಭಂಗುರೆ, ಜಿಲ್ಲಾಧ್ಯಕ್ಷ ಅವಿನಾಶ ಬುದರಕರ್ ಸೇರಿದಂತೆ ಅಪಾರ ಕನ್ನಡ ಅಭಿಮಾನಿಗಳು ಹಾಗೂ ಡಾ. ಪುನೀತ್ ರಾಜಕುಮಾರ್ ರವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಇಂದು ಸಂಗೋಳಗಿಯಲ್ಲಿ ಮಹಾಸೂಫಿ ಸಂತ ಖುತುಬಿ ಸಾಹೇಬ್ ಜಾತ್ರಾ ಮಹೋತ್ಸವ




• ಮಲ್ಲಮ್ಮ ನುಡಿ ವಾರ್ತೆ ಬೀದರ್

ತಾಲೂಕಿನ ಸಂಗೋಳಗಿಯಲ್ಲಿ ಮಹಾಸೂಫಿ ಸಂತ ಖುತುಬಿ ಸಾಹೇಬ್ ಜಾತ್ರಾ ಮಹೋತ್ಸವ ಗುರುವಾರ ಜರುಗಲಿದೆ.

ಸಂಜೆ 4ಕ್ಕೆ ಪಲ್ಲಕ್ಕಿ ಉತ್ಸವ ನಡೆಯಲಿದೆ. ನಂತರರಾತ್ರಿ 8 ಗಂಟೆಗೆ ಗ್ರಾಮದ ಗಾರ್ಡನ ಹತ್ತಿರ ಕಲಬುರಗಿಯ ನಾಟ್ಯ ಸಂಘದಿಂದ ನಾಟಕ ನಡೆಯಲಿದೆ, ಶುಕ್ರವಾರ ಮುಂಜಾನೆ 8 ಗಂಟೆಗೆ ಪ್ರತಿವರ್ಷದಂತೆ ಕುಸ್ತಿ ಪಂದ್ಯಾವಳಿಗಳು ನಡೆಯಲಿವೆ ಆದಕಾರಣ ಸುತ್ತಮುತ್ತಲಿನ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಸ್ಥಳೀಯರು ಕೋರಿದ್ದಾರೆ.

# ಮಹಿಳಾ ದಿನಾಚರಣೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃಧ್ಧಿ ಇಲಾಖೆ ಬೀದರ ಸಂಯುಕ್ತಾಶ್ರಯದಲ್ಲಿಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಜನವಾಡ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಅವರು ಸಸಿಗೆ ನೀರರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ, ವರದಕ್ಷಿಣೆ ಕಾಯ್ದೆ ಕುರಿತು ಮಾಹಿತಿ ನೀಡಿದರು.


ಮಹಿಳಾ ಮತ್ತು ಮಕ್ಕಳ ಅಭಿವೃಧ್ಧಿ ಇಲಾಖೆಯ

ಉಪ ನಿರ್ದೇಶಕ ಶ್ರೀಧರ ಎಮ್.ಎಸ್ ಅಧ್ಯಕ್ಷಿಯ ಭಾಷಣ ಮಾಡಿದರು. ಬೀದರ ವಕೀಲ ಮಂಗಲಾ ಹಿರೇಗೌಡ ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸವಲತ್ತುಗಳ ಕುರಿತು ಉಪನ್ಯಾಸ ನೀಡಿದರು. ಜಯಶ್ರೀ ಪಾಟೀಲ್ ಮಹಿಳಾ ದಿನಾಚರಣೆ ಕುರಿತು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ನಿರುಪಣಾ ಅಧಿಕಾರಿ ಶ್ರೀಕಾಂತ, ಮಹಿಳಾ ಮತ್ತು ಮಕ್ಕಳ ಅಭಿವೃಧ್ಧಿ ಇಲಾಖೆಯ ಶಿಶು ಅಭಿವೃಧ್ಧಿ ಯೋಜನಾಧಿಕಾರಿ ರೂಪಾ, ಎಸ್ ಕೋಟೆಗೌಡರ, ವಕೀಲ ಸಂಜಿವಕುಮಾರ, ಆಕಾಶ, ಗೌರಿ ಶಂಕರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃಧ್ಧಿ ಇಲಾಖೆ ಸಿಬ್ಬಂಧಿ ವರ್ಗದವರು ಸೇರಿದಂತೆ ಎಲ್ಲಾ ಅಂಗನವಾಡಿ ಕಾರ್ಯಕತೆ-ರ್ಯರು ಹಾಗೂ ಅಂಗನವಾಡಿ ಸಾಹಾಯಕಿಯರು ಉಪಸ್ಥಿತರಿದ್ದರು.

## ನೇಕಾರ ಸಮುದಾಯದಿಂದ ಸಚಿವ ಖಂಡ್ರೆಗೆ ಸನ್ಮಾನ

# ಭವನದ ಭೂಮಿ ಪೂಜೆಗೆ ಆಹ್ವಾನ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದಲ್ಲಿ ಮಾ.23ಕ್ಕೆ ನಡೆಯಲಿರುವ ಜೇಡರ ದಾಸಿಮಯ್ಯನವರ ದೇಗುಲ ಮತ್ತು ಭವನದ ಭೂಮಿ ಪೂಜೆ ಸೇರಿ ದಾಸಿಮಯ್ಯನವರ ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಆಹ್ವಾನಿಸಲಾಗಿದೆ.

ಪಟ್ಟಣದ ಜಿಲ್ಲಾ ಉಸ್ತುವಾರಿ ಸಚಿವರ ನಿವಾಸದಲ್ಲಿ ನೇಕಾರ(ಜಾಡರ್) ಸಮಾಜದ ಪ್ರಮುಖರು ಸಚಿವ ಈಶ್ವರ ಖಂಡ್ರೆ ಅವರನ್ನು ಭೇಟಿಯಾಗಿ ಸನ್ಮಾನಿಸಿ, ಆಹ್ವಾನ ನೀಡಿದರು.

ಪಟ್ಟಣದ ಹೊರವಲಯದ ಡೈಮಂಡ್ ಕಾಲೇಜು ಸಮೀಪದ ನಿವೇಶನೊಂದರಲ್ಲಿ ಸಮುದಾಯದ ಜನರು ಸೇರಿ ದಾಸಿಮಯ್ಯನವರ ದೇಗುಲ ಮತ್ತು ಭವನದ ಕಟ್ಟಡ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. ಜತೆಗೆ ಅಂದು ದಾಸಿಮಯ್ಯ ನವರ ಜಯಂತಿ ಕಾರ್ಯಕ್ರಮ ಆಚರಿಸಲು ನಿರ್ಧರಿಸಲಾಗಿದೆ.

ಈ ಸಮಾರಂಭಕ್ಕೆ ಆಗಮಿಸಲು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಒಪ್ಪಿಗೆ ನೀಡಿರುವುದು ಸಮುದಾಯದ ಜನರಿಗೆ ಸಂತಸ ತರಿಸಿದೆ. ಸಾರ್ವಜನಿಕರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಯಂತಿ, ಭವನದ ಭೂಮಿ ಪೂಜೆಗೆ ಮೆರಗು ತರಬೇಕು ಎಂದು ಪ್ರಮುಖರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನೇಕಾರ ಸಮಾಜದ ಅಧ್ಯಕ್ಷ ಸಂತೋಷ ಬಿಜಿ ಪಾಟೀಲ್, ತಾಲೂಕು ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ ಪ್ರಮುಖರಾದ ಬಾಬುರಾವ ಖ್ಯಾಡೆ, ಚಂದ್ರಕಾಂತ ಹಿಪ್ಪರಗೆ, ರೇವಣಸಿದ್ದ ಗೌಡನೂರ, ರಾಜಶೇಖರ ಪಾಟೀಲ್, ಸಚಿನ್ ಕಾಡಾದೆ, ರೇವಣಪ್ಪ ಜಾಡರ್, ಬಸವರಾಜ ಧೂಮ್ಮನಸುರೆ, ಓಂಪ್ರಕಾಶ ಪಾಟೀಲ್ ಸೇರಿದಂತೆ ಹಲವರು ಇದ್ದರು.

# ಬೆಂಬಲ ಬೆಲೆ ಯೋಜನೆಯಡಿ ಕಡಲೆ ಖರೀದಿ ಕೇಂದ್ರಕ್ಕೆ ಚಾಲನೆ




• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ (ಪಿ.ಕೆ.ಪಿ.ಎಸ್.) ವತಿಯಿಂದ ರೈತರ ಹಿತದೃಷ್ಟಿಯಿಂದ ಸರ್ಕಾರ ಘೋಷಿಸಿರುವ (ಓಂಈಇಆ) ಬೆಂಬಲ ಬೆಲೆ ಯೋಜನೆಯಡಿ, ಕಡಲೆ ಖರೀದಿ ಪ್ರಕ್ರಿಯೆಗೆ ಪಿ.ಕೆ.ಪಿ.ಎಸ್. ಅಧ್ಯಕ್ಷರಾದ ಗಂಗಾಧರ ಸೋಲಾಪುರೆ ಅವರು ಬುಧವಾರ ಅಧಿಕೃತವಾಗಿ ಚಾಲನೆ ನೀಡಿದರು.

ಖರೀದಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಗಂಗಾಧರ ಸೋಲಾಪುರೆ ಅವರು, "ರೈತರು ತಾವು ಬೆಳೆದ ಬೆಳೆಗೆ ಮಾರುಕಟ್ಟೆಯಲ್ಲಿ ಕಡಿಮೆ ಬೆಲೆ ಇರುವಾಗ ಆತಂಕಪಡುವ ಅಗತ್ಯವಿಲ್ಲ. ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆಯ ಪ್ರಯೋಜನವನ್ನು ರೈತರು

ಪಡೆದುಕೊಳ್ಳಬೇಕು. ಮಧ್ಯವರ್ತಿಗಳ ಹಾವಳಿಯಿಲ್ಲದೆ ನೇರವಾಗಿ ಸಂಘದ ಮೂಲಕ ಪಾರದರ್ಶಕವಾಗಿ ಖರೀದಿ ಮಾಡಲಾಗುವುದು," ಎಂದು ತಿಳಿಸಿದರು.

ಶಾಂತಪ್ಪ ಬಿರಾದಾರ ಕಾರ್ಯದರ್ಶಿಗಳು ಪಿ.ಕೆ.ಪಿ.ಎಸ್. ಕಮಲನಗರ ಅವರು ಮಾತನಾಡಿ, ರೈತರು ತಮ್ಮ ಪಹಣಿ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಖಾತೆ ವಿವರಗಳೊಂದಿಗೆ ಮುಂಚಿತವಾಗಿ ನೋಂದಣಿ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ.

ಪ್ರತಿ ಎಕರೆಗೆ 4 ಕ್ವಿಂಟಾಲ ಕಡಲೆ

ಖರೀದಿಸಿದ ಕಡಲೆಗೆ ಹಣವನ್ನು ನೇರವಾಗಿ ಕ್ವಿಂಟಾಲ್‌ಗೆ ₹5,875 ಹಣ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗುವುದು ಎಂದು ತಿಳಿಸಿದರು

.ರೈತರು ತಮ್ಮ ನೋಂದಣಿ ಹೆಸರು ಕ್ರಮ ವಾಗಿ ಕಡಲೆ ಮಾರಾಟ ಕೇಂದ್ರಕ್ಕೆ ತಂದು ಮಾರಾಟ ಮಾಡಿದರು.

# ನೀರು ಸರಬರಾಜಿನ ಬದಲಾವಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನಗರಕ್ಕೆ ನೀರು ಸರಬರಾಜು ಮಾಡುವ ನೀರಿನ ಮೂಲ ಕೆರೆ ಭೋಸಗಾ ಕೆರೆಯಲ್ಲಿ ನೀರು ಬತ್ತಿರುವುದರಿಂದ ನೀರಿನ ಕೊರತೆ ಉಂಟಾಗುತ್ತಿದ್ದು, ಆದ್ದರಿಂದ ಹಳೆ ಫಿಲ್ಟರ್ ಬೆಡ್ (ಔಟಜ ಈಟಣಜಡಿ ಃಜಜ) ಹಾಗೂ ಶೋರಗುಂಬಜ ನೀರು ಶುದ್ಧಿಕರಣ ಘಟಕದಿಂದ ಸರಬರಾಜು ಆಗುತ್ತಿರುವ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಲಾಗುತ್ತಿದ್ದು, ಕಲಬುರಗಿ ನಗರದ ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯೂಎಸ್‌ಎಂಪಿ– ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ. ಹಳೆ ಫಿಲ್ಟರ್ ಬೇಡ್ ನೀರು ಶುದ್ಧೀಕರಣ ಘಟಕದ ವ್ಯಾಪ್ತಿಯಲ್ಲಿ ಬರುವ ಮೇಲು ನೀರು ಸಂಗ್ರಹಗಾರಗಳಾದ ಶಹಾಬಾಜಾರ ಟ್ಯಾಂಕ್. ಹೆಚ್.ಎಸ್.ಆರ್ ಟ್ಯಾಂಕ್, ಶೇಖ ರೋಜಾ ಟ್ಯಾಂಕ್, ಬಡೆಪೂರ ಜಿಡಿಎ ಟ್ಯಾಂಕ್, ಡಿಸಿ ಟ್ಯಾಂಕ್, ಪೊಲೀಸ್ ಗ್ರೌಂಡ ಟ್ಯಾಂಕ್, ಡಿವಿಸಿ ಟ್ಯಾಂಕ್, ಮೊಮಿನಪೂರ ಟ್ಯಾಂಕ್, ಹಳೆ ಎಸ್‌ಪಿ ಕಛೇರಿ ಟ್ಯಾಂಕ್, ಟಿಪ್ಪಿ ಸ್ಟೇಷನ್ ಟ್ಯಾಂಕ್, ನಯಾಮೊಹಲ್ಲಾ ಟ್ಯಾಂಕ್ ಹಾಗೂ ಬಿಲಾಲಬಾದ ಟ್ಯಾಂಕ್‌ಗಳ ಮೂಲಕ 4 ದಿನಗಳಿಗೊಮ್ಮೆ ಬದಲಾಗಿ 5 ದಿನಗಳಿಗೊಮ್ಮೆ ನೀರು ಸರಬರಾಜು ಮಾಡಲಾಗುತ್ತದೆ. ನಗರದ 01,02,04,05,06,07,11,12,13,19,20,21,22,23,24,28,31,35, 46,49 ವಾರ್ಡುಗಳ ಪ್ರದೇಶಗಳಾದ ಆಶ್ರಯ ಕಾಲೋನಿ, ಶಿವಶಕ್ತಿ ನಗರ, ಸುರ್ವಣ ನಗರ, ಬಂಬು ಬಜಾರ್, ಶಹಾಬಜಾರ ತಾಂಡ, ಚನ್ನವೀರ ನಗರ, ತಾಜ ನಗರ, ರಾಜೀವ ಗಾಂಧಿ ನಗರ, ಅಪ್ಪಾರಾವ್ ಮೊನಹಳ್ಳಿ ನಗರ, ಗಾಂಧಿ ನಗರ, ಬ್ಯಾಂಕ್ ಕಾಲೋನಿ, ಮೋಮಿನಪೂರ ಮಿಜಗುರಿ, ಭರತ ಕಾಲೋನಿ, ಡೈರಿಮಿಲ್ಕ್, ಸಂಜೀವ ನಗರ, ನೆಹರು ಗಂಜ, ಖಾಜಾ ಕಾಲೋನಿ, ಸಂತ್ರಾಸವಾಡಿ, ಗಣೇಶ ಮಂದಿರ, ಶಿವಾಜಿ ನಗರ, ಭವಾನಿ ನಗರ, ನಂದಿ ಕಾಲೋನಿ, ಮುನಿಮ್ ಸಂಘ, ಚಪ್ಪರಬಂಧ ಗಲ್ಲಿ, ಕಾವೇರಿ ನಗರ, ಲಕ್ಷ್ಮಿ ನಗರ, ಭಾಗ್ಯ ನಗರ, ಓಮ್ ನಗರ, ಜ್ಞಾನಗಂಗಾ ಕಾಲೋನಿ, ವಿರೇಂದ್ರ ಪಾಟೀಲ್ ಬಡಾವಣೆ, ಸಿದ್ಧಗಂಗಾ ಕಾಲೋನಿ, ಭರತ ತಾಂಡ, ಗಾಜೀಪೂರ, ಹಟ್ಟಿಗಲ್ಲಿ, ಕುವೆಂಪು ನಗರ, ವಿರೇಶ ನಗರ, ಸುಂದರ ನಗರ, ಅಡವಿಕೇಟ್ ಕಾಲೋನಿ, ಗುಲಾಬವಾಡಿ, ಚಾಚಾ ಹೋಟಲ್, ಸಂದಲ ಗಲ್ಲಿ, ಚಟ್ಟೆವಾಡಿ, ಸರಫ ಬಜಾರ, ಚಪ್ಪಲ ಬಜಾರ, ಕರ್ಣವೀರ ಗಲ್ಲಿ, ಗದಗಿ ಮಠ, ಮರಗಮ್ಮ ದೇವಸ್ಥಾನ, ಮಿಲನ ಚೌಕ್, ಯತೀಮ ಖಾನಾ, ಪರಿವಾರ ಹೋಟಲ್, ತೊಟಪ್ಪ ಚಾಲ, ಪಿಡಬ್ಲ್ಯೂಡಿ ವಸತಿ ಗೃಹ, ನಾಯಾ ಮೋಹಲ್ಲಾ, ರೇವಣಸಿದ್ದೇಶ್ವರ ಕಾಲೋನಿ, ಟಿಪ್ಪಿ ಸ್ಟೇಷನ್ ಏರಿಯಾ, ರಾಮ ನಗರ, ಕಾಕಡೆ ಚೌಕ್, ಭೀಮ ನಗರ, ಕಮಲ ನಗರ, ಲಂಗರ ಹನುಮಾನ ಮಂದಿರ, ಜಲಾಲವಾಡಿ, ದರ್ಗಾ ಏರಿಯಾ, ಜಲೀಲ್ ಕಂಪೌಂಡ ಹಾಗೂ ಬಿಲಾಲಬಾದ ಪ್ರದೇಶಗಳಲ್ಲಿ ನೀರು ಸರಬರಾಜಿನ ದಿನದಲ್ಲಿ ಬದಲಾವಣೆ ಮಾಡಲಾಗಿದೆ.

# ನೊಂದ ಗ್ರಾಹಕರಿಗೆ ನ್ಯಾಯ ದೊರಕಿಸುವುದೆ ಸಮಾಜ ಸೇವಕರ ಕರ್ತವ್ಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಕಾನೂನು ಸೇವಾ ಪ್ರಾಧಿಕಾರದಿಂದ ಸಾಮಾನ್ಯ ಜನರಿಗೆ ಹಾಗೂ ಬಡವರಿಗೆ ದೊರೆಯುವ ಉಚಿತ ಕಾನೂನು ಸವಲತ್ತುಗಳ ಬಗ್ಗೆ ಮಾಹಿತಿ ನೀಡಿ, ನೊಂದ ಗ್ರಾಹಕರಿಗೆ ನ್ಯಾಯ ದೊರಕಿಸಿಕೊಡಲು ಸಮಾಜ ಸೇವಕರು ಮುಂದಾಗಬೇಕು ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀನಿವಾಸ್ ನವಲೆ ಅವರು ಹೇಳಿದರು.

ಬುಧವಾರದಂದು ಕಲಬುರಗಿಯ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯವಾದಿಗಳ ಸಂಘ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಮಹಾತ್ಮ ಗಾಂಧೀಜಿ ಗ್ರಾಹಕರ ಹಿತರಕ್ಷಣಾ ವೇದಿಕೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ 'ವಿಶ್ವ ಗ್ರಾಹಕರ ದಿನಾಚಾರಣೆ' ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿ ಮಾತನಾಸಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಖ್ಯಾತ ನ್ಯಾಯವಾದಿ ಹಾಗೂ ಗ್ರಾಹಕ ಪರ ಹೋರಾಟಗಾರರಾದ ವೈಜನಾಥ ಎಸ್. ಝಳಕಿ ಅವರು ಮಾತನಾಡಿ ನೊಂದ ಗ್ರಾಹಕರು ಯಾವುದೇ ಕಾರಣಕ್ಕೂ ನ್ಯಾಯ ಪಡೆಯಲು ಹಿಂಜರಿಯಬಾರದು. 2019ರ ಹೊಸ ಗ್ರಾಹಕರ ಹಿತರಕ್ಷಣೆ ಕಾಯ್ದೆಯು ಗ್ರಾಹಕರಿಗೆ ಅಮೂಲ್ಯವಾದ ಶಕ್ತಿಯನ್ನು ನೀಡಿದೆ. ವಿಮೆ, ಬ್ಯಾಂಕು, ವಾಹನ ಮಾರಾಟ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗ್ರಾಹಕರಿಗೆ ಆಗುವ ಅನ್ಯಾಯದ ವಿರುದ್ಧ ಹೋರಾಡಲು ಕಾನೂನಿನಲ್ಲಿ ದೊಡ್ಡ ಅವಕಾಶವಿದೆ ಎಂದರು.

ಗ್ರಾಹಕರು ತಾವು ಮಾಡುವ ವ್ಯವಹಾರಗಳ ಬಗ್ಗೆ ಸೂಕ್ತ ದಾಖಲೆಗಳನ್ನು ಹೊಂದಿರಬೇಕು ಎಂದು ಕಿವಿಮಾತು ಹೇಳಿದ ಅವರು ಜಾಗೃತ ಗ್ರಾಹಕರು ರಾಷ್ಟ್ರದ ಆರ್ಥಿಕ ಶಕ್ತಿಯ ಭದ್ರ ಬುನಾದಿ. ಯಾವುದೇ ವಸ್ತು ಅಥವಾ ಸೇವೆಯನ್ನು ಪಡೆಯುವಾಗ ಗುಣಮಟ್ಟದ ಬಗ್ಗೆ ಅರಿವಿರಲಿ ಮತ್ತು ಕಡ್ಡಾಯವಾಗಿ ರಶೀದಿ ಪಡೆಯುವುದನ್ನು ಮರೆಯಬೇಡಿ. ದಾಖಲೆಗಳಿದ್ದಲ್ಲಿ ಮಾತ್ರ ಜಿಲ್ಲಾ, ರಾಜ್ಯ ಅಥವಾ ರಾಷ್ಟ್ರೀಯ ಆಯೋಗಗಳಲ್ಲಿ ನ್ಯಾಯ ಪಡೆಯಲು ಸಾಧ್ಯ, ಎಂದು ಐತಿಹಾಸಿಕ ತೀರ್ಪುಗಳನ್ನು ಉಲ್ಲೇಖಿಸಿ ವಿವರಿಸಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಎಸ್.ವಿ. ಪಸಾರ್, ರೋಟರಿ ಕ್ಲಬ್ ಖಜಾಂಚಿ ಹಾಗೂ ನ್ಯಾಯವಾದಿ ಗುಂಡುರಾವ ಪದ್ಮಾಜಿ, ಪ್ರಾಧಿಕಾರದ ಸಿಬ್ಬಂದಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ತಾಂತ್ರಿಕ ಕೌಶಲಕ್ಕೆ ಹೆಚ್ಚು ಆದ್ಯತೆ ಕೊಡಿ: ಜಿಲ್ಲಾಧಿಕಾರಿ




• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ

ಉದ್ಯೋಗಾಕಾಂಕ್ಷಿಗಳು ತಮ್ಮ ಶಿಕ್ಷಣದ ಜತೆಗೆ ತಾಂತ್ರಿಕ ಕೌಶಲ್ಯಗಳಿಗೆ ಹೆಚ್ಚು ಆದ್ಯತೆ ನೀಡಬೇಕು ಎಂದು ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು. ಅವರು ಕೊಪ್ಪಳ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯ ಮಿಷನ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜು, ಕೊಪ್ಪಳ ಇವರುಗಳ ಸಂಯುಕ್ತಾಶ್ರಯದಲ್ಲಿ ಡಿಡಿಯು–ಜಿಕೆವೈ ಯೋಜನೆಯಡಿಯಲ್ಲಿ ಹಮ್ಮಿಕೊಂಡಿದ್ದ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದರು.

ಯಾರು ಹೆಚ್ಚು ಓದಿಕೊಂಡಿರುತ್ತಾರೆ ಅವರು ಮಾತ್ರ ಬುದ್ಧಿವಂತರು ಎಂದು ಒಂದು ಕಾಲದಲ್ಲಿ ಹೇಳಲಾಗುತ್ತಿತ್ತು. ಆದರೆ, ಈಗ ಅದು ಬದಲಾಗಿದೆ. ಇಂದಿನ ತಾಂತ್ರಿಕ ಯುಗದಲ್ಲಿ ವಿದ್ಯಾಭ್ಯಾಸ, ಜ್ಞಾನದ ಜೊತೆಗೆ ಕೌಶಲ್ಯ ಮತ್ತು ಮನೋಭಾವ ಬಹಳ ಮುಖ್ಯವಾಗಿದೆ. ಇವೆಲ್ಲ ಅರ್ಹತೆ ಹೊಂದಿರುವವರು ಕಾರ್ಖಾನೆಗಳಲ್ಲಿ, ಖಾಸಗಿ ಅಥವಾ ಸರ್ಕಾರಿ ವಲಯಗಳಲ್ಲಿ ಸುಲಭವಾಗಿ ಉದ್ಯೋಗ ಪಡೆದುಕೊಳ್ಳಲು ಸಾಧ್ಯವಾಗುತ್ತದೆ. ಇಂದಿನ ತಂತ್ರಜ್ಞಾನ ಯೋಗದಲ್ಲಿ ವಿದ್ಯಾಭ್ಯಾಸದ ಜೊತೆಗೆ ಕೌಶಲ್ಯ ತರಬೇತಿಗಳು ಅತ್ಯವಶ್ಯಕವಾಗಿರುವುದರಿಂದ ಸರ್ಕಾರಗಳು ಹಲವಾರು ಕೌಶಲ್ಯ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬರುತ್ತಿವೆ. ಕೌಶಲಾಭಿವೃದ್ಧಿ ತರಬೇತಿಯ ಸದ್ಬಳಕೆಯನ್ನು ಮಾಡಿಕೊಳ್ಳಲು ವಿದ್ಯಾರ್ಥಿಗಳು, ಯುವ ಜನತೆ ಮುಂದೆ ಬರಬೇಕೆಂದರು. ಭಾರತದ ಪದವಿ ಪೂರ್ಣಗೊಳಿಸಿದವರಲ್ಲಿ ಶೇ. 50ರಷ್ಟು ಜನರಿಗೆ ಮಾತ್ರ ಉದ್ಯೋಗ ಸಿಗುತ್ತಿದೆ. ಬಹಳಷ್ಟು ಜನ ನಿರುದ್ಯೋಗಿಗಳಾಗಿ ಉಳಿಯುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನ್ಯಾಷ್ನಲ್ ಸ್ಕಿಲ್ ಕ್ವಾಲಿಫಿಕೇಶನ್ ಫ್ರೇಮ್‌ವರ್ಕ್ (ಎನ್.ಎಸ್.ಕ್ಯೂ.ಎಫ್) ಮೂಲಕ ನ್ಯಾಷ್ನಲ್ ಸ್ಕಿಲ್ ಡೆವಲೆಪ್ಮೆಂಟ್ ಕೌನ್ಸಿಲ್ ರವರು ಸುಮಾರು 8 ಹಂತಗಳಲ್ಲಿ ವೃತ್ತಿಪರ ತರಬೇತಿಯನ್ನು ನೀಡುತ್ತಾರೆ. ಇದರಿಂದ ಶಾಲಾ ಶಿಕ್ಷಣದೊಂದಿಗೆ ತಾಂತ್ರಿಕ ಕೌಶಲ್ಯಗಳನ್ನು ಜೋಡಿಸಿ, ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಮತ್ತು ಕಲಿಕೆಯಲ್ಲಿ ನಮ್ಯತೆಯನ್ನು ಒದಗಿಸಲು ಸಹಾಯವಾಗುತ್ತದೆ. ಪದವಿ ಪೂರ್ಣಗೊಳಿಸಿದ ಅಭ್ಯರ್ಥಿಗಳು ಇದರಲ್ಲಿ ನೋಂದಾಯಿಸಿಕೊಂಡು ತರಬೇತಿ ಪಡೆದು ಪ್ರಮಾಣ ಪತ್ರ ಪಡೆದುಕೊಂಡಲ್ಲಿ ನಿಮಗೆ ಸುಲಭವಾಗಿ ಉದ್ಯೋಗವನ್ನು ಪಡೆದುಕೊಳ್ಳಲು ಅನುಕೂಲವಾಗುತ್ತದೆ. ನಮ್ಮ ಜಿಲ್ಲೆಯ ತಳಕಲ್‌ನಲ್ಲಿ ವಿಟಿಯು ಬಹು ಕೌಶಲ್ಯ ಕೇಂದ್ರವಿದ್ದು, ವಿವಿಧ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಭಿವೃದ್ಧಿ ಅಧಿಕಾರಿ ಕೆ.ಗವಿಶಂಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಇಂದು ಉದ್ಯೋಗ ಮೇಳದಲ್ಲಿ ಸುಮಾರು 61ಕ್ಕೂ ಅಧಿಕ ಕಂಪನಿಗಳು ಪಾಲ್ಗೊಂಡಿವೆ. ಉದ್ಯೋಗಕ್ಕಾಗಿ ಎರಡು ಸಾವಿರ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಂಡಿದ್ದು, ಸುಮಾರು 300ಕ್ಕೂ ಹೆಚ್ಚು ಉದ್ಯೋಗಾಕಾಂಗಶಿಗಳು ಭಾಗವಹಿಸಿದ್ದಾರೆ. ಯಾವುದೇ ವಿದ್ಯಾರ್ಹತೆ ಇರಲ್ಲಿ ಎಲ್ಲರೂ ತಮ್ಮ ಕೌಶಲ್ಯಾಧಾರಿತ ಸಂದರ್ಶನ ನೀಡಿ ಉದ್ಯೋಗ ಪಡೆದುಕೊಳ್ಳಬೇಕು. ಉದ್ಯೋಗಾಕಾಂಕ್ಷೆ ಹೊಂದಿರು ಯುವಕರು ಇಂತಹ ಮೇಳಗಳಲ್ಲಿ ಭಾಗವಹಿಸಿ, ಉದ್ಯೋಗದ ನೆರವು ಪಡೆದುಕೊಳ್ಳಬೇಕು. ಉದ್ಯೋಗಾಕಾಂಕ್ಷಿಗಳು, ಈ ಮೇಳದಲ್ಲಿ ಬಂದಿರುವ ಎಲ್ಲಾ ಕಂಪನಿಗಳಿಗೆ ಸಂದರ್ಶನ ನೀಡಿ, ನಿಮಗೆ ಸಮಂಜಸ ಎನಿಸುವ ಕಂಪನಿಯನ್ನು ಆಯ್ಕೆ ಮಾಡಿಕೊಂಡು, ಸಂದರ್ಶನ ನೀಡಬೇಕು. ಉದ್ಯೋಗಾಕಾಂಕ್ಷಿಗಳು ಸರ್ಕಾರ, ಜಿಲ್ಲಾಡಳಿತ ಮತ್ತು ವಿವಿಧ ಇಲಾಖೆಗಳ ಮೂಲಕ ಹಮ್ಮಿಕೊಳ್ಳುವ ಇಂತಹ ಮೇಳಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೊಪ್ಪಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ವಾಯ್.ಬಿ.ಅಂಗಡಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಕೊಪ್ಪಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಉಪನಿರ್ದೇಶಕ ಕಮಲರಾಜ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಮಂಜುಳಾ ಉಪ್ಪಾರ, ಕೌಶಲ್ಯ ಅಭಿವೃದ್ಧಿ ಅಧಿಕಾರಿ ಮಂಜುನಾಥ, ಸಿಬ್ಬಂದಿ ಮೌನೇಶ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿವಿಧ ಇಲಾಖೆಯ ಅಧಿಕಾರಿಗಳು, ಜಿಲ್ಲಾ ಜಿಟಿಟಿಸಿ ಮುಖ್ಯಸ್ಥರು, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕರು, ಆರ್–ಸೇಟಿಯ ನಿರ್ದೇಶಕರು, ಜಿಲ್ಲಾ ಹಾಗೂ ತಾಲೂಕ ಸಂಜೀವಿನಿ ಯೋಜನೆಯ ಸಿಬ್ಬಂದಿ, ನಲ್ಮ್ ಸಿಬ್ಬಂದಿ, ಸ್ಕೌಟ್ & ಗೈಡ್ ಹಾಗೂ ವಿವಿಧ ಕಂಪನಿಗಳ ಪ್ರತಿನಿಧಿಗಳು ಮತ್ತು ಉದ್ಯೋಗಾಕಾಂಕ್ಷಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ ಅರ್ಹ ಅಭ್ಯರ್ಥಿಗಳಿಗೆ ಜಾಬ್ ಆಫರ್ ಲೆಟರ್‌ಗಳನ್ನು ವಿತರಣೆ ಮಾಡಲಾಯಿತು. ಜಿ.ಪಂ ಎನ್. ಆರ್.ಎಲ್.ಎಂ. ಶಾಖೆಯ ಅಂಬಣ್ಣ ಅವರು ಕಾರ್ಯಕ್ರಮ ನಿರೂಪಿದರು.

# ಸಿಎಂರಿಂದ ಕಾಫಿ ಟೇಬಲ್ ಪುಸ್ತಕ ಬಿಡುಗಡೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಬೆಂಗಳೂರಿನ ವಿಧಾನಸೌಧದಲ್ಲಿ ಪ್ರವಾಸೋದ್ಯಮ ಇಲಾಖೆಯು ಹೊರತಂದಿರುವ ಕಲಬುರಗಿ ಜಿಲ್ಲೆಯ ಪ್ರವಾಸಿ ತಾಣಗಳ ಸಂಕ್ಷಿಪ್ತ ಮಾಹಿತಿ ನೀಡುವ "ಕಾಫಿ–ಟೇಬಲ್" ಪುಸ್ತಕ ಮತ್ತು ಪ್ರವಾಸಿ ಮಡಿಕೆ ಪತ್ರಗಳನ್ನು (ಬ್ರೋಚರ್) ಬಿಡುಗಡೆ ಮಾಡಿದರು.

ಜಿಲ್ಲೆಯ ಪ್ರವಾಸಿ ತಾಣಗಳನ್ನು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರಪಡಿಸುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯು ವಿಶೇಷ ಆಸಕ್ತಿ ವಹಿಸಿ ಇದೇ ಮೊದಲ ಬಾರಿಗೆ ಜಿಲ್ಲೆಯ ಕಲೆ, ಸಂಸ್ಕೃತಿ, ಪರಂಪರೆ ಮತ್ತು ಇತಿಹಾಸವನ್ನು ಬಿಂಬಿಸುವ ಮತ್ತು ಜಿಲ್ಲೆಯ ಐತಿಹಾಸಿಕ, ಧಾರ್ಮಿಕ, ನೈಸರ್ಗಿಕ ಹಾಗೂ ಇತರೆ ಪ್ರವಾಸಿ ತಾಣಗಳ ಕುರಿತ ಮಾಹಿತಿ ನೀಡುವ ಕಾಫಿ ಟೇಬಲ್ ಪುಸ್ತಕ ಹೊರತಂದಿದೆ. ಪುಸ್ತಕ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿದ್ದು, ಸುಮಾರು 11.05 ಲಕ್ಷ ರೂ.ಗಳ ಖರ್ಚು ಮಾಡಿ ಆಕರ್ಷಕವಾಗಿ ಪುಸ್ತಕ ಹೊರತರಲಾಗಿದೆ. ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಜರಗುವ ಪ್ರವಾಸೋದ್ಯಮ ಮೇಳಗಳು, ಟ್ರಾವೆಲ್ ಎಕ್ಸಪೋಗಳು ಮತ್ತು ಮುಂತಾದ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ವಿವಿಧ ರಾಜ್ಯ ಮತ್ತು ದೇಶಗಳ ಪ್ರವಾಸೋದ್ಯಮ ಕ್ಷೇತ್ರದ ಪಾಲುದಾರರು, ಹೂಡಿಕೆದಾರರು ಮತ್ತು ಪ್ರವಾಸೋದ್ಯಮ ಉತ್ಸಾಹಿಗಳ ಮೂಲಕ ಕಲಬುರಗಿ ಜಿಲ್ಲೆಯ ಪ್ರವಾಸೋದ್ಯಮದ ಕುರಿತು ಹೆಚ್ಚಿನ ಪ್ರಚಾರ ನೀಡುವಲ್ಲಿ ಕಾಫಿಟೇಬಲ್ ಪುಸ್ತಕ ಸಹಕಾರಿಯಾಗಲಿವೆ ಎಂದು ನಿರೀಕ್ಷಿಸಲಾಗಿದೆ. ಇದಲ್ಲದೆ ಜಿಲ್ಲೆಗೆ ಭೇಟಿ ನೀಡುವ ದೇಶಿಯ ಹಾಗೂ ವಿದೇಶಿಯ ಪ್ರವಾಸಿಗರಿಗೆ ಜಿಲ್ಲೆಯ ಪ್ರವಾಸಿ ತಾಣಗಳ ಕುರಿತು ಸಂಕ್ಷಿಪ್ತ ಮಾಹಿತಿ ಒದಗಿಸುವ ಪ್ರವಾಸಿ ಮಡಿಕೆ ಪತ್ರಗಳನ್ನು (ಬ್ರೋಚರ್) ಸಹ ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ & ಜೈವಿಕ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಶಾಸಕ ಬಿ.ಆರ್.ಪಾಟೀಲ್, ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷರು ಹಾಗೂ ಜೇವರ್ಗಿ ಶಾಸಕ ಡಾ. ಅಜಯ ಸಿಂಗ್, ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ಅಫಜಲಪೂರ ಶಾಸಕ ಎಂ.ವೈ ಪಾಟೀಲ, ಪ್ರವಾ ಸೋದ್ಯಮ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಕೆ.ವಿ.ತ್ರಿಲೋಕಚಂದ್ರ, ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಪ್ರವಾಸೋದ್ಯಮ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಡಾ. ಎಸ್. ತಿಪ್ಪೇಸ್ವಾಮಿ, ಉಪನಿರ್ದೇಶಕಿ ಬೇಬಿ ಮೋಗೇರ ಹಾಗೂ ಇಲಾಖೆಯ ಇತರೆ ಅಧಿಕಾರಿ–ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಂಗನವಾಡಿ ಸಿಬ್ಬಂದಿಯ ವೇತನ ಹೆಚ್ಚಿಸಿ: ಪ್ರಭು ಚವ್ಹಾಣ



• ಮಲ್ಲಮ್ಮ ನುಡಿ ವಾರ್ತೆ ಔರಾದ

ಅಂಗನವಾಡಿ ಕಾರ್ಯಕರ್ತೆ–ಯರು ಮತ್ತು ಸಹಾಯಕಿಯರ ವೇತನ ಹೆಚ್ಚಿಸುವಂತೆ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸರ್ಕಾರವನ್ನು ಆಗ್ರಹಿಸಿದರು.

ವಿಧಾನಸಭಾ ಅಧಿವೇಶನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕುರಿತ ಚರ್ಚೆಯ ಸಂದರ್ಭದಲ್ಲಿ ಶಾಸಕರು ಮಾತನಾಡಿ, ಮಕ್ಕಳಿಗೆ ಬಿಸಿಯೂಟ ಪೂರೈಕೆ, ಅಪೌಷ್ಟಿಕತೆ ನಿವಾರಣೆ, ಗರ್ಭಿಣಿಯರು ಹಾಗೂ ತಾಯಂದಿರಿಗೆ ಸರ್ಕಾರಿ ಯೋಜನೆಗಳನ್ನು ತಲುಪಿಸುವುದು ಒಳಗೊಂಡು ಹಲವಾರು ವಿಧದಲ್ಲಿ ಇವರು ಕಾರ್ಯನಿರ್ವಹಿಸುತ್ತಿದ್ದಾರೆ. ತಮ್ಮ ಜವಾಬ್ದಾರಿಯ ಜೊತೆಗೆ ಸರ್ಕಾರಗಳು ಅನ್ಯ ಕೆಲಸಗಳನ್ನು ವಹಿಸುತ್ತವೆ. ಸಂಕಷ್ಟಗಳ ನಡುವೆಯೂ ಎಲ್ಲ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಿದ್ದಾರೆ.

ಇವರು ವೇತನ ಹೆಚ್ಚಿಸುವಂತೆ ನಿರಂತರವಾಗಿ ಹೋರಾಟ ನಡೆಸುತ್ತಿದ್ದಾರೆ. ಕೆಲ ದಿನಗಳ ಹಿಂದೆಯೇ ಭೇಟಿಯಾಗಿ ಮನವಿ ಪತ್ರ ನೀಡಿದ್ದರು. ಅದರಂತೆ ಎಲ್ಲ ಶಾಸಕರನ್ನು ಭೇಟಿಯಾಗುತ್ತಿದ್ದಾರೆ.

ಇವರಿಗೆ ಪ್ರಸ್ತುತ ಕೊಡುತ್ತಿರುವ ವೇತನ ಬಹಳಷ್ಟು ಕಡಿಮೆಯಿದ್ದು, ಬೆಲೆಗಳ ಏರಿಕೆಯ ಸಂದರ್ಭದಲ್ಲಿ ಈಗಿರುವ ವೇತನ ಯಾವುದಕ್ಕೂ ಸಾಲುವುದಿಲ್ಲ. ಹಾಗಾಗಿ ತೀವ್ರ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ವೇತನ ಹೆಚ್ಚಳ ಪ್ರಮುಖ ಬೇಡಿಕೆಯಾಗಿದ್ದು, ಸರ್ಕಾರ ಇವರ ಮನವಿಯನ್ನು ಗಂಭೀರವಾಗಿ ಪರಿಗಣಿಸಿ ವೇತನ ಹೆಚ್ಚಿಸಿ, ಅಗತ್ಯ ಸೌಕರ್ಯಗಳನ್ನು ಒದಗಿಸಬೇಕೆಂದು ತಿಳಿಸಿದರು. ಸಚಿವರು ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದರು.

# ಒಳಮೀಸಲಾತಿ ವಿರೋಧಿಸಿ ಬೃಹತ್ ಪ್ರತಿಭಟನೆ: ಪಾಸ್ವಾನ್

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಒಳಮೀಸಲಾತಿ ಜಾರಿಗೆ ವಿರೋಧ ವ್ಯಕ್ತಪಡಿಸಿ ಹಾಗೂ ಹಳೆಯ ಮೀಸಲಾತಿ ವ್ಯವಸ್ಥೆಯನ್ನು ಮುಂದುವರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟವು ಮಾರ್ಚ್ 25 ಬೆಂಗಳೂರಿನ ಫ್ರಿಡಮ್ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಪ್ರಮುಖರಾದ ಬಾಬುರಾವ ಪಾಸ್ವಾನ್ ತಿಳಿಸಿದರು.

ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು, ರಾಜ್ಯ ಸರ್ಕಾರ ನಾಗಮೋಹನದಾಸ್ ವರದಿ ತಿರಸ್ಕರಿಸಿ, ಇನ್ನೊಂದು ಸಾರಿ ಜಾತಿ ಜನಗಣತಿ ಸಮಿಕ್ಷೆ ಮಾಡಬೇಕು. ರೋಷ್ಟರ್ ಪದ್ದತಿಯ ಒಳ ಮೀಸಲಾತಿ ಯಾವುದೇ ಕಾರಣಕ್ಕೂ ಬೇಡವೇ ಬೇಡ. 26,000 ಹುದ್ದೆಗಳನ್ನು ಹಳೆ ಮೀಸಲಾತಿ ಆಧಾರದಂತೆ ಭರ್ತಿ ಮಾಡಿ, ಎಲ್ಲ ಪರಿಶಿಷ್ಟರಿಗೆ ನ್ಯಾಯ ದೊರಕಿಸಿ ಕೊಡಬೇಕೆಂದು ಕರೆ ನೀಡಿದರು.

ಕಾಂಗ್ರೆಸ್ ಸರ್ಕಾರ ಶತ ಪ್ರತಿಶತದಷ್ಟು ಪರಿಶಿಷ್ಟಜಾತಿಯ ಬಲಗೈ ಪಂಗಡದವರ ಮತ ಪಡೆದು ಅಧಿಕಾರಕ್ಕೆ ಬಂದಿದ್ದು, ಅಧಿಕಾರಕ್ಕೇರಿದ ಕ್ಷಣ ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿ ಎರಡು ವರೆ ವರ್ಷಗಳು ಕಳೆದರೂ ಕುಂಟುನೆಪವೊಡ್ಡಿ ಬಲಗೈ ಹಾಗೂ ಎಡಗೈ ಜಾತಿಗಳ ನಡುವೆ ಜಗಳ ಹಚ್ಚುವ ಕಾರ್ಯ ಮಾಡುತ್ತಿದೆ. ನಮ್ಮ ಹಕ್ಕು ಎತ್ತಿ ಹಿಡಿಯುವ ಸರ್ಕಾರವೇ ನಮ್ಮನ್ನು ಚೆನ್ನಾಗಿ ತುಳಿಯುವ ಕಾರ್ಯಕ್ಕೆ ಮುಂದಾಗಿದೆ ಎಂದು ಹರಿಹೈದರು.

ಸರ್ವೋಚ್ಚನ್ಯಾಯಾಲಯವು 2024 ಆಗಸ್ಟ್ 1ರಂದು ನೀಡಿದ ತೀರ್ಪಿನಲ್ಲಿ ಒಳಮೀಸಲಾತಿ ಜಾರಿಗೊಳಿಸಲು ರಾಜ್ಯಗಳಿಗೆ ಅಧಿಕಾರವಿದೆ ಎಂದು ತಿಳಿಸಿದರೂ, ಅದು ಸಮರ್ಪಕ ಅಂಕಿ ಅಂಶಗಳ ಆಧಾರದಲ್ಲಿ ಮಾತ್ರ ಜಾರಿಯಾಗಬೇಕು ಎಂದು ಸ್ಪಷ್ಟಪಡಿಸಿದೆ. ಆದರೆ ಕರ್ನಾಟಕ ಸರ್ಕಾರವು ಈ ಮಾರ್ಗಸೂಚಿಗಳನ್ನು ಪಾಲಿಸದೆ ಕ್ರಮ ಕೈಗೊಂಡಿದೆ ಎಂದು ಆರೋಪಿಸಿದರು.

ನ್ಯಾಯಮೂರ್ತಿ ನಾಗಮೋಹನ್‌ದಾಸ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಏಕ ಸದಸ್ಯ ಆಯೋಗವು ಸಮಗ್ರ ಸಮೀಕ್ಷೆ ನಡೆಸದೇ ಹಾಗೂ ಅಗತ್ಯ ಅಂಕಿ ಅಂಶಗಳನ್ನು ಸಂಗ್ರಹಿಸದೇ ವರದಿ ಸಲ್ಲಿಸಿದೆ ಎಂದು ಸಂಘಟನೆ ದೂರಿದೆ. ಈ ವರದಿಯ ಆಧಾರದಲ್ಲಿ ಸರ್ಕಾರವು 2025 ಸೆಪ್ಟೆಂಬರ್ 3ರಂದು ಹೊರಡಿಸಿದ ಮೀಸಲಾತಿ ಆದೇಶವು ಪರಿಶಿಷ್ಟ ಜಾತಿಯ ಬಲಗೈ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಹೇಳಿದರು.

ಆಯೋಗವು ಜನಸಂಖ್ಯೆ ಮಾಹಿತಿಯನ್ನು ತಪ್ಪಾಗಿ ವರ್ಗೀಕರಿಸಿದ್ದು, ಬಲಗೈ ಸಮುದಾಯಕ್ಕೆ ಮೀಸಲಾತಿ ಸೌಲಭ್ಯ ಕಡಿಮೆಯಾಗುವಂತೆ ಮಾಡಲಾಗಿದೆ. ಇದರಿಂದ ಉನ್ನತ ಹುದ್ದೆಗಳ



ಅವಕಾಶಗಳು ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸರ್ಕಾರವು ಶೇಕಡ 15+3ರ ಮೀಸಲಾತಿ ಪ್ರಮಾಣದಲ್ಲಿ ನೇಮಕಾತಿ ಮಾಡಲು ಆದೇಶ ಹೊರಡಿಸಿದ್ದು, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿಯನ್ನು ಮತ್ತೆ ಜಾರಿಗೊಳಿಸುವ ಯತ್ನ ನಡೆದಿದೆ ಎಂಬ ಆರೋಪವೂ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ, ಒಳಮೀಸಲಾತಿ ಜಾರಿಗೊಳಿಸದಂತೆ ಸರ್ಕಾರಕ್ಕೆ ಒತ್ತಾಯಿಸುವುದಕ್ಕಾಗಿ ಒಕ್ಕೂಟದ ಅಧ್ಯಕ್ಷರಾದ ಪೂಜ್ಯ ಜ್ಞಾನಪ್ರಕಾಶ ಸ್ವಾಮೀಜಿ, ಕಾರ್ಯಾಧ್ಯಕ್ಷರಾದ ಡಿ.ಚಂದ್ರಶೇಖರಯ್ಯ, ಸಂಚಾಲಕರಾದ ನಿವೃತ್ತ ಐಎಎಸ್ ಅಧಿಕಾರಿ ಸಿದ್ದಯ್ಯ, ಮಾಜಿ ಮಹಾಪೌರ ಸಂಪತ್ ರಾಜ್ ಸೇರಿದಂತೆ ಹಲವು ಮುಖಂಡರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದು, ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮುಂದಿನ ಹೋರಾಟ ತೀವ್ರಗೊಳಿಸುವುದಾಗಿ ತಿಳಿಸಿದ್ದಾರೆ. ಆದ್ದರಿಂದ ಈ ಪ್ರತಿಭಟನೆಯಲ್ಲಿ ಬೀದರ್ ಜಿಲ್ಲೆಯಿಂದ ಹೆಚ್ಚಿನ ಜನರು ಭಾಗವಹಿಸಿ ಪ್ರತಿಭಟನೆಗೆ ಕೈ ಜೋಡಿಸಲು ಪಾಸ್ವಾನ್ ಕರೆ ಕೊಟ್ಟರು..

ಒಕ್ಕೂಟದ ಮತ್ತೋರ್ವ ಮುಖಂಡರಾದ ರಮೇಶ ಡಾಕುಳಗಿ ಮಾತನಾಡಿ, 2023ರಲ್ಲಿ ಕಾಂಗ್ರೆಸ್ ಸರ್ಕಾರವು ಚಿತ್ರದುರ್ಗ ಸಮಾವೇಶದಲ್ಲಿ ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿತ್ತು. ಆದರೆ ಮಾತು ತಪ್ಪಿದೆ. ಈ ಹಿಂದೆ ಬಸವರಾಜ ಬೊಮ್ಮಾಯಿ ಸರ್ಕಾರ ಇದ್ದಾಗ ಒಳ ಮೀಸಲಾತಿಗಾಗಿ ಕೇಂದ್ರಕ್ಕೆ ಪ್ರಸ್ತಾವನೆ ಕಳಿಸಿತ್ತು. ಆದರೆ ಪ್ರಧಾನಿ ನರೇಂದ್ರ ಮೋದಿಯವರ ರಾಜ್ಯ ಸರ್ಕಾರ ಅದನ್ನು ಕಡೆಗಣಿಸಿತ್ತು. ನಂತರ ಸರ್ವೋಚ್ಚ ನ್ಯಾಯಾಲಯವು ತನ್ನ ಆದೇಶದಲ್ಲಿ ಒಳ ಮೀಸಲಾತಿ ಜಾರಿ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ನೀಡಿದೆ. ಆದರೂ ಕೇಂದ್ರ ಸರ್ಕಾರ ಕೂಡಲೇ ಸಂವಿಧಾನದ 9ನೇ ಪರಿಶ್ಛೆದದಲ್ಲಿ ಅದನ್ನು ಸೇರಿಸಿ ಎಲ್ಲ ರಾಜ್ಯಗಳಿಗೆ ಅನುಕುಲ ಆಗುವ ರೀತಿಯಲ್ಲಿ ಅದನ್ನು ಅನುಷ್ಠಾನಗೋಲಿಸಬೇಕು. ಈಗಾಗಲೇ ಒಳ ಮೀಸಲಾತಿ ಜಾರಿ ಮಾಡಿರುವ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಹರಿಯಾಣ ಇತ್ಯಾದಿ ರಾಜ್ಯಗಳಿಗೆ ಹೋಗಿ ಅಧ್ಯಯನಗೈದು ರಾಜ್ಯದಲ್ಲೂ ಅದನ್ನು ಸಮರ್ಪಕ ರೀತಿಯಲ್ಲಿ ಜಾರಿಗೊಳಿಸಲು ಮುಂದೆ ಬರಬೇಕು. ಆದಿ ದ್ರಾವಿಡ, ಆದಿ ಆಂದ್ರ, ಆದಿ ಕರ್ನಾಟಕದ ಜನರು ಬಲಗೈ ಹಾಗೂ ಎಡಗೈ ಸಮುದಾಯಗಳಲ್ಲಿ ಇದ್ದು, ಒಂದೆ ಪಂಗಡದಲ್ಲಿ ಅವರನ್ನು ಗುರುತಿಸುವ ಕಾರ್ಯ ಆಗಬೇಕು, ಅವೈಜ್ಞಾನಿಕ, ಅಪೂರ್ಣ, ದೋಷಪೂರಿತ ಹಾಗೂ ಪಕ್ಷಪಾತದಿಂದ ಕೂಡಿರುವ ನ್ಯಾಯಮೂರ್ತಿ ನಾಗಮೋಹನ್‌ದಾಸ್ ರವರ ಆಯೋಗದ ವರದಿಯನ್ನು ರಾಜ್ಯ ಸರ್ಕಾರವು ತಿರಸ್ಕರಿಸಬೇಕು, ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕೈಗೊಂಡಿರುವ ಕುಟುಂಬಗಳ ಸಮೀಕ್ಷೆಯ ಅಂಕಿ ಅಂಶಗಳೊಂದಿಗೆ ನ್ಯಾಯಮೂರ್ತಿ ನಾಗಮೋಹನ್‌ದಾಸ್ ರವರ ಆಯೋಗದ ಅಂಕಿ ಅಂಶಗಳನ್ನು ಹೋಲಿಕೆ ಮಾಡಿ, ವ್ಯತ್ಯಾಸಗಳು ಕಂಡುಬಂದಲ್ಲಿ ಪರಿಶಿಷ್ಟ ಜಾತಿಯ ಎಲ್ಲಾ ಕುಟುಂಬಗಳ ಮತ್ತೊಮ್ಮೆ ಸಮೀಕ್ಷೆ ಮಾಡಬೇಕೆಂದು ಒತ್ತಾಯಿಸಿದರು.

ರಾಜ್ಯ ಸರ್ಕಾರವು ದಿನಾಂಕ: 03.09.2025ರಂದು ಯಾವುದೇ ಮಾನದಂಡವನ್ನು ಅನುಸರಿಸದೇ ಅವೈಜ್ಞಾನಿಕವಾಗಿ ಹೊರಡಿಸಿರುವ ಮೀಸಲಾತಿ ಆದೇಶವನ್ನು ಹಿಂಪಡೆಯಬೃಕು, ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ ಸಕಇ/08/ಎಸ್.ಎಲ್.ಪಿ/2024 (ಭಾಗ–5) ದಿನಾಂಕ: 08.10.2025ರ ನಿರ್ದೇಶನದಂತೆ ಜಾತಿ ಪ್ರಮಾಣ ಪತ್ರಗಳನ್ನು ಪ್ರವರ್ಗ –ಎ, ಬಿ ಮತ್ತು ಸಿ ಎಂದು ವರ್ಗೀಕರಿಸಿರುವುದನ್ನು ಹಿಂಪಡೆದು ಮೂಲ ಜಾತಿಗಳನ್ನು ನಮೂದಿಸಿ ಜಾತಿ ಪ್ರಮಾಣ ಪತ್ರಗಳನ್ನು ನೀಡಲು ಸೂಕ್ತ ಆದೇಶ ಹೊರಡಿಸಬೇಕು, ಪರಿಶಿಷ್ಟಜಾತಿ ಸಮುದಾಯಕ್ಕೆ ಈಗಾಗಲೇ ನೀಡಿರುವ ಖಾಯಂ ಜಾತಿ ಪ್ರಮಾಣ ಪತ್ರಗಳನ್ನು ಹೊಸ ಜಾತಿ ಪ್ರಮಾಣ ಪತ್ರಗಳೊಂದಿಗೆ ಪರಿಗಣಿಸಲು ಸೂಕ್ತ ಆದೇಶ ಹೊರಡಿಸಬೇಕೆಂದರು.

ಪರಿಶಿಷ್ಟಜಾತಿ ಬಲಗೈ ಸಮುದಾಯಕ್ಕೆ ಸೇರಿರುವ 63 ಜಾತಿಗಳನ್ನು ಬಲಗೈ ಗುಂಪಿನಲ್ಲಿ ಉದ್ಯೋಗ, ಶಿಕ್ಷಣ ಮತ್ತು ಇತರೆ ಸೌಲಭ್ಯ ಪಡೆಯಲು ಅಧಿಸೂಚನೆ ಹೊರಡಿಸಬೇಕು, ಚಿತ್ರದುರ್ಗ ಜಿಲ್ಲೆಯಲ್ಲಿ ಹೊಲಯ ಸಮುದಾಯ ಕೇವಲ 223 ಎಂದು ನ್ಯಾಯಮೂರ್ತಿ ನಾಗಮೋಹನ್‌ದಾಸ್ ವರದಿಯಲ್ಲಿ ದಾಖಲಿಸಿರುವುದನ್ನು ಮರು ಪರಿಶೀಲಿಸಿ ಉದ್ದೇಶ ಪೂರ್ವಕವಾಗಿ ಬಲಗೈ ಸಮುದಾಯದ ಜನಸಂಖ್ಯೆಯನ್ನು ಕಡಿಮೆ ಮಾಡಿರುವ ಆಯೋಗದ ಅಧ್ಯಕ್ಷರು ಹಾಗೂ ಅಧಿಕಾರಿಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆಯನ್ವಯ ಮೊಕದ್ದಮೆ ದಾಖಲಿಸಲು ವಿಶೇಷ ತನಿಖಾ ತಂಡ ರಚಿಸಬೇಕು ಎಂದು ಡಾಕುಳಗಿ ಹೇಳಿದರು. ಒಕ್ಕೂಟದ ಮುಖಂಡ ಪ್ರದೀಪ ನಾಟೇಕರ್ ಮಾತನಾಡಿದರು.

# ಆಲಿಕಲ್ಲು ಮಳೆಗೆ ಭತ್ತ ಹಾನಿ ಪರಿಹಾರಕ್ಕೆ ಮನವಿ: ಚೆನ್ನೂರು



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಡಗೇರಾ ತಾಲೂಕಿನ ಚೆನ್ನೂರ, ಅನಕಸುಗೂರು, ಗೊಂದೇನೂರ ಕೊಂಕಲ್, ಗ್ರಾಮಗಳಲ್ಲಿ ಮಂಗಳವಾರದಂದು ಸಂಜೆ ಬಾರಿ ಗಾಳಿ ಮಳೆ ಆಲಿಕಲ್ಲು ಸುರಿದಿರುವುದರಿಂದ ಸಾವಿರಾರು ಎಕರೆ ರೈತರ ಭತ್ತ ಬೆಳೆ ಹಾನಿಯಾಗಿದ್ದು ಸೂಕ್ತ ಪರಿಹಾರ ನೀಡುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರು ಆಗ್ರಹಿಸಿದ್ದಾರೆ. ತಾಲೂಕಿನ ಗೊಂದೇನೂರ, ಚೆನ್ನೂರ, ಅನಕಸಗೂರು, ಕೊಂಕಲ್ ಗ್ರಾಮಗಳಲ್ಲಿನ ಭತ್ತ ಬೆಳೆ ನೆಲ ಕಚ್ಚಿದ್ದು ಬಾರಿ ಪ್ರಮಾಣದಲ್ಲಿ ಹಾನಿ ಉಂಟಾಗಿದೆ ಈಗಾಗಲೇ ರೈತರು ಸಾಲ ಸುಲಾ ಮಾಡಿ ದುಬಾರಿ ಹಣ ಖರ್ಚು ಮಾಡಿ ಭತ್ತ ಬೆಳೆದಿದ್ದರು ಇನ್ನೇನು ಕೆಲವೇ ದಿನಗಳಲ್ಲಿ ಬೆಳೆಯು ಕೈಗೆ ಬರುತ್ತಿತ್ತು ಅಕಾಲಿಕ ಮಳೆ ಗಾಳಿ ಆಲಿಕಲ್ಲು ಅವಾಂತರದಿಂದ ರೈತರಿಗೆ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ ಇದ-ರಿಂದಾಗಿ ರೈತರು ಆತಂಕದಲ್ಲಿದ್ದು ಕೂಡಲೇ ಅಧಿಕಾರಿಗಳು ಬೆಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ರೈತರಿಗೆ ಸಮರ್ಪಕ ಬೆಳೆ ಹಾನಿ ಪರಿಹಾರ ನೀಡುವಂತೆ ರಾಜ್ಯ ರೈತ ಹೆಸರು ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರು ಸರ್ಕಾರ ಮತ್ತು ಜಿಲ್ಲಾಡಳಿತಕ್ಕೆ ಒತ್ತಾಯಿಸಿದ್ದಾರೆ.

# ಮುಸ್ಲಿಂ ಬಾಂಧವರಿಗೆ ಇಫ್ತಾರ ಕೂಟ ಆಯೋಜನೆ



• ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ

ರಮಜಾನ್ ಮಾಸದ ಪ್ರಯುಕ್ತ ಮುಸ್ಲಿಂ ಬಾಂಧವರಿಗೆ ಯಾದಗಿರಿ ಜಿಲ್ಲಾ ಎನ್ ಎಸ್ ಯುಐ (ಭಾರತೀಯ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ ಜಿಲ್ಲಾಧ್ಯಕ್ಷ ಹೊನ್ನೇಶ ದೊಡ್ಡಮನಿ ಅವರು ಯಾದಗಿರಿ ತಾಲೂಕಿನ ಬಳಿಚಕ್ರ ಗ್ರಾಮದ ಅವರ ಮನೆಯಲ್ಲಿ ಇಫ್ತಾರ ಕೂಟ ಏರ್ಪಡಿಸಿದರು.ಈ ವೇಳೆ ಸಲೀಂ ಅನಸಾರಿ,ರಫೀಕ್,ಅಲ್ತಾಫ್,ಖಾಜಾ ಸೇರಿದಂತೆ ಅನೇಕರು ಇದ್ದರು.

# ಜಿಲ್ಲಾಡಳಿತದಿಂದ ದೇವರ ದಾಸಿಮಯ್ಯ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆದ್ಯ ವಚನಕಾರ ನೇಕಾರ ಸಂತ ವಿಶ್ವಮಾನ್ಯ ಶರಣ ದೇವರ ದಾಸಿಮಯ್ಯ ಅವರ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮಾರ್ಚ್ 23ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

# ಜ್ಯೋತಿರ್ಲಿಂಗ ಯಾತ್ರಿ ಅಮನ್ ಸೋನಿಗೆ ಭಕ್ತ ಬಳಗದಿಂದ ಸನ್ಮಾನ




• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಮಧ್ಯಪ್ರದೇಶದಿಂದ ಹೊರಟು ಕಳೆದ 18 ತಿಂಗಳುಗಳಿಂದ ಸತತವಾಗಿ ಪಾದಯಾತೆ-ಯ ಮೂಲಕ ದೇಶದ 12 ಜ್ಯೋತಿರ್ಲಿಂಗಗಳ ದರ್ಶನ ಪಡೆಯುತ್ತಿರುವ ಯುವ ಸಾಧಕ ಅಮನ್ ಸೋನಿ ಅವರಿಗೆ ಶ್ರೀಶೈಲದಲ್ಲಿ ಕೆಂಭಾವಿಯ ಶ್ರೀ ಶರಬಸವೇಶ್ವರ ಸೇವಾ ಸಮಿತಿಯ ವತಿಯಿಂದ ಗೌರವ ಸಮರ್ಪಣೆ ನಡೆಯಿತು.

ಈ ಸಂದರ್ಭದಲ್ಲಿ ಸಮಿತಿಯ ಪದಾಧಿಕಾರಿಗಳು ಮಾತನಾಡಿ, "ಅಮನ್ ಸೋನಿ ಅವರ ಈ ಧಾರ್ಮಿಕ ಪಯಣ ಯುವ ಪೀಳಿಗೆಗೆ ಪ್ರೇರಣಾದಾಯಕವಾಗಿದೆ. ಕಠಿಣ ಹಾದಿಯನ್ನೂ ಲೆಕ್ಕಿಸದೆ ಶಿವನ ದರ್ಶನ ಪಡೆಯುತ್ತಿರುವ ಅವರ ಭಕ್ತಿ ಅನನ್ಯವಾದದ್ದು," ಎಂದು ಶ್ಲಾಘಿಸಿ, ಭಕ್ತಿ ಮತ್ತು ದೃಢ ಸಂಕಲ್ಪದೊಂದಿಗೆ ಸಾವಿರಾರು ಕಿಲೋಮೀಟರ್ ಕ್ರಮಿಸುತ್ತಿರುವ ಅಮನ್ ಸೋನಿ ಅವರ ಸಾಹಸಕ್ಕೆ ಸಮಿತಿಯ ಸದಸ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಸನ್ಮಾನ ಸ್ವೀಕರಿಸಿದ ಅಮನ್ ಸೋನಿ ಅವರು ಸಮಿತಿಯ ಪ್ರೀತಿ ಮತ್ತು ಗೌರವಕ್ಕೆ ಧನ್ಯವಾದಗಳನ್ನು ಅರ್ಪಿಸಿದರು.

# ಬಸ್ ನಿಲ್ದಾಣದಲ್ಲಿ ಪುಸ್ತಕ ಮಳಿಗೆಗೆ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಇಲ್ಲಿನ ಬಸ್ ನಿಲ್ದಾಣದಲ್ಲಿ ನಿಯಮದಂತೆ ಪುಸ್ತಕ ಮಳಿಗೆ (ಬುಕ್ ಸ್ಟಾಲ್) ಆರಂಭಿಸಲು ಅವಕಾಶ ನೀಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕ ಆಗ್ರಹಿಸಿದೆ.

ಈ ಕುರಿತು ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಮನವಿ ಸಲ್ಲಿಸಿರುವ ಜಿಲ್ಲಾಧ್ಯಕ್ಷ ಎಚ್. ಆರ್. ಬಡಿಗೇರ, "ನಿಲ್ದಾಣದಲ್ಲಿರುವ ಎರಡು ಮಳಿಗೆಗಳ ಪೈಕಿ ಒಂದನ್ನು ಕ್ಯಾಂಟೀನ್‌ಗೆ ನೀಡಲಾಗಿದೆ. ಪುಸ್ತಕ ಮಳಿಗೆಗೆ ಮೀಸಲಿಡಬೇಕಾದ ಇನ್ನೊಂದು ಮಳಿಗೆಯನ್ನು ನಂದಿನಿ ಪಾರ್ಲರ್‌ಗೆ ನೀಡಲಾಗಿದ್ದು, ಅಲ್ಲಿಯೂ ಟೀ-ಕಾಫಿ ಮಾರಾಟ ಮಾಡಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳು ಹಾಗೂ ಓದುಗರಿಗೆ ಅನ್ಯಾಯವಾಗುತ್ತಿದೆ," ಎಂದು ದೂರಿದ್ದಾರೆ.

ಕೂಡಲೇ ನಿಯಮದಂತೆ ಪುಸ್ತಕ ಮಳಿಗೆಗೆ ಅವಕಾಶ ಕಲ್ಪಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಸುರಪುರ-ಹುನಗುಂದ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ಸೇನೆಯ ಶಹಾಪುರ ತಾಲೂಕು ಅಧ್ಯಕ್ಷ ಭೀಮನಗೌಡ ಪಾಟೀಲ್ ಇತರರು ಇದ್ದರು.

# ಭಯ ಮುಕ್ತರಾಗಿ ಪರೀಕ್ಷೆ ಬರೆಯಿರಿ
## ಹೂ ಹಾಸಿ ಪರೀಕ್ಷೆ ವಿದ್ಯಾರ್ಥಿಗಳಿಗೆ ಸ್ವಾಗತ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಿದ್ಯಾರ್ಥಿಗಳು ಯಾವುದೇ ಗೊಂದಲ ಪಡದೆ, ನಿಮ್ಮ ಗುರಿಯ ಕಡೆ ಗಮನ ಹರಿಸಿ ಭಯ ಮುಕ್ತದಿಂದ ಪರೀಕ್ಷೆ ಬರೆಯಿರಿ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚನ್ನಬಸಪ್ಪ ಮುಧೋಳ್ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಸಮೀಪದ ಮುದ್ನಾಳ್ ಗ್ರಾಮದ ಸರ್ಕಾರಿ ಉನ್ನತಿ ಕರೆಸಿದ ಪ್ರೌಢ ಶಾಲೆಯಲ್ಲಿ ಬುಧವಾರ ಪ್ರಾರಂಭಗೊಂಡ

ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಹೂ, ಚೆಲ್ಲುವ ಮೂಲಕ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸ್ವಾಗತಸಿ ಮಾತನಾಡಿದ ಅವರು, ಯಾದಗಿರಿ ಜಿಲ್ಲೆಯು ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆ ಎಂಬ ಹಣೆಪಟ್ಟಿಯನ್ನು ಹೋಗಲಾಡಿಸಿ ರಾಜ್ಯಕ್ಕೆ ಪ್ರಥಮ ಪಟ್ಟಿಗೆ ಸೇರಿಸುವ ಕೆಲಸ ನಿಮ್ಮದಾಗಿದೆ.

ನಿರ್ಭಯವಾಗಿ ಪರೀಕ್ಷೆ ಎದುರಿಸಿ ತೇರ್ಗಡೆಯಾಗಿ ಜಿಲ್ಲೆಗೆ ಕೀರ್ತಿ ತನ್ನಿರಿ ಎಂದು ಸಲಹೆ ನೀಡಿದರು.

ಈ ಸಂಧರ್ಭದಲ್ಲಿ ಪರೀಕ್ಷೆ ಅಧಿಕ್ಷಕ ಗ್ಯಾನಪ್ಪ ಡಿ ದಾಸನ್, ಸ್ಥಾನಿಕ ಜಾಗೃತ ದಳ ತಾಂತ್ರಿಕ ಸಹಾಯಕ ಮಾರ್ಕ್, ಪಾಟೀಲ್ ಪ್ರಶ್ನೆ ಪತ್ರಿಕೆಯ ಅಭಿರಕ್ಷಕ

ಶರಣಗೌಡ ಗಂಗಾಧರ್, ಶಿಕ್ಷಕ ಸುರೇಶ್ ಬೊಮ್ಮನ್, ಯಾದಗಿರಿ ಸ್ಟೇಷನ್ ಬಜಾರ್ ಪ್ರೌಢ ಶಾಲೆಯ ಮುಖ್ಯಗುರು ಮಲ್ಲಿಕಾರ್ಜುನ ಪೂಜಾರಿ,

ಹಾಗೂ ಆದರ್ಶ ವಿದ್ಯಾಲಯ, ಬಸವಂತಪುರ ಪ್ರೌಢಶಾಲೆ ಹೆಡಿಗಿಮದ್ರಾ ಪ್ರೌಢಶಾಲೆ ಮತ್ತು ಮುದ್ನಾಳ ಪ್ರೌಢಶಾಲೆ ವಿದ್ಯಾರ್ಥಿಗಳು ಹಾಗೂ ಶಿಕ್ಷಕ ವೃಂದದವರು ಇದ್ದರು.

# ಶಿಷ್ಯರ ಏಳಿಗೆಯಲ್ಲಿ ಗುರುವಿನ ಪಾತ್ರ ದೊಡ್ಡದು : ಕಾಗಿನೆಲೆ ಶ್ರೀ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ಗುರು ಶಿಷ್ಯರ ಸಂಬಂಧ ಅತ್ಯಂತ ಪವಿತ್ರವಾದದ್ದು ಶಿಷ್ಯರ ಏಳಿಗೆಯಲ್ಲಿ ಗುರುವಿನ ಪಾತ್ರ ದೊಡ್ಡದು ಎಂದು ಕಾಗಿನೆಲೆ ಮಾಹಾ ಸಂಸ್ಥಾನದ ಕನಕ ಗುರು ಪೀಠದ ಜಗದ್ಗುರು ಪರಮಪೂಜ್ಯ ಶ್ರೀಮತಿ ನಿರಂಜನಾನಂದ ಪುರಿ ಮಹಾಸ್ವಾಮಿಗಳು ನುಡಿದರು. ಹುಣಸಗಿ ತಾಲೂಕಿನ ಅಗತೀರ್ಥ ಗ್ರಾಮದ ಹಾಲುಮತ ಜಗದ್ಗುರು ರೇವಣಸಿದ್ದೇಶ್ವರ ಹಾಗೂ ಗುರುಬಸವ ಶಿವಯೋಗಿಗಳ ಜಾತ್ರಾ ಮಹೋತ್ಸವದಲ್ಲಿ ಹಮ್ಮಿಕೊಂಡ ಮೂರನೇ ದಿನದ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಅವರು ಮಾತನಾಡಿದರು.

ಪುರಾಣ ಪ್ರವಚನಗಳಿಂದ ಮಾನಸಿಕ ಒತ್ತಡ ಕಡಿಮೆ ಮನುಷ್ಯ ಮಾನವಿಯ ಮೌಲ್ಯಗಳನ್ನು ಕಳೆದುಕೊಳ್ಳುತ್ತಿದ್ದಾನೆ

ಅದೆಷ್ಟೋ ಜನ ತುಂಬಿದ ಕುಟುಂಬದಿಂದ ಹೊರಬಂದು ಒಂಟಿಯಾಗಿರಲು ಬಯಸುತ್ತಾರೆ ಸಂಬಂಧಗಳಿಗೆ ಬೆಲೆ ಕೊಡದೆ ಹಣ ಆಸ್ತಿ ಅಂತಸ್ತು ಹಿಂದೆ ಬಿದ್ದಿದ್ದಾನೆ ಅದು ಶಾಶ್ವತ ಅಲ್ಲ ಗುರು ಹಿರಿಯರು ತಂದೆ ತಾಯಿಗಳನ್ನು ಗೌರವದಿಂದ ಕಾಣಬೇಕು ಪಕ್ಷಿ ಪ್ರಾಣಿಗಳಲ್ಲಿರುವ ಮಾನವೀಯತೆ ಮನುಷ್ಯನಲ್ಲಿ ಇಲ್ಲದಂತಾಗಿದೆ ಪ್ರತಿಯೊಬ್ಬ ಮನುಷ್ಯನು ಮಠ ಮಂದಿರ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಂಡಾಗ ಮಾತ್ರ ಮನುಷ್ಯನ ಜನ್ಮ ಸಾರ್ಥಕ ದಾನ ಧರ್ಮ ಅಪರೂಪಕಾರ ಪುಣ್ಯಕಾರ್ಯಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಮಾನಸಿಕ ನೆಮ್ಮದಿ ದೊರೆಯುತ್ತದೆ ಎಂದರು ತಾಯಂದಿರು ಮಕ್ಕಳಿಗೆ ಉತ್ತಮ ಶಿಕ್ಷಣ ಸಂಸ್ಕಾರ ನೀಡಬೇಕು ಯುವಕರು ದುಶ್ಚಟಗಳಿಂದ ದೂರವಿದ್ದು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಸೈನಿಕ ಅನ್ನದಾತರನ್ನು ಪ್ರತಿಯೊಬ್ಬರು ಗೌರವಿಸಬೇಕು ಎಂದು ಹೇಳಿದರು.ಕ

ಾರ್ಯಕ್ರಮದ ಅಧ್ಯಕ್ಷತೆಯನ್ನು ಪರಮಪೂಜ್ಯ ಶ್ರೀ ರೇವಣಸಿದ್ದೇಶ್ವರ ಶಾಂತಮಯ ಮಹಾಸ್ವಾಮಿಗಳು ವಹಿಸಿಕೊಂಡಿದ್ದರು.ಈ ಸಂದರ್ಭದಲ್ಲಿ ಬಂಡೆಪ್ಪನಹಳ್ಳಿಯ ಶ್ರೀ ಸಣಕ್ಯಪ್ಪ ಪೂಜಾರಿ, ಹುಲಿಜಂತಿಯ ಪರಮಪೂಜ್ಯ ಶ್ರೀ ಮಾಳಿಂಗರಾಯ ಮಹಾರಾಜರು,

ಶ್ರೀ ಅನಂತಾನಂದ ಶರಣರು, ವಿವಿಧ ಮಠಾಧೀಶರು, ಪಟ್ಟದ ಪೂಜಾರಿಗಳು ಸಮಾಜದ ಮುಖಂಡರು ಹಾಗೂ ಗ್ರಾಮದ ಭಕ್ತಾದಿಗಳು ಹಾಗೂ ಇನ್ನಿತರರು ಭಾಗವಹಿಸಿದ್ದರು.

# ವಿದ್ಯಾರ್ಥಿಗಳಿಗೆ ವಿಪತ್ತು ನಿರ್ವಹಣಾ ಪ್ರಮಾಣಪತ್ರ ವಿತರಣೆ




• ಮಲ್ಲಮ್ಮ ನುಡಿ ಹುಣಸಗಿ

ಸಮೀಪದ ಕೊಡೇಕಲ್ ಸ್ಥಳೀಯ ಶ್ರೀ ಜನಕ ಕಲಾ ಪದವಿ ಮಹಾವಿದ್ಯಾಲಯದಲ್ಲಿ ಸ್ಕೌಟ್ & ಗೈಡ್ಸ್ ಹಾಗೂ ದೊಡ್ಡಬಳ್ಳಾಪುರದ ವಿಪತ್ತು ನಿರ್ವಹಣಾ ತರಬೇತಿ ಸಂಸ್ಥೆಯಲ್ಲಿ ತರಬೇತಿ ಪಡೆದು ಶಿಬಿರದಲ್ಲಿ ಪಾಲ್ಗೊಂಡು ಬಂದ ವಿದ್ಯಾರ್ಥಿಗಳಿಗೆ ವಿಪತ್ತು ನಿರ್ವಹಣಾ ಕೈಪಿಡಿ ಪುಸ್ತಕ ಮಾಲಿಕೆ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.ಕಾರ್ಯಕ್ರಮಕ್ಕೆ ಅಧ್ಯಕ್ಷತೆಯನ್ನು ಶ್ರೀ ಸೋಮಶೇಖರ ಪಂಜಗಲ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶ್ರೀ ದಯಾನಂದ ಮಠ ಹಾಗೂ ಶ್ರೀಮತಿ ನೀಲಮ್ಮ ಬಂಡಿ ಶಿಕ್ಷಕಿಯರು ಭಾಗವಹಿಸಿ ವಿದ್ಯಾರ್ಥಿಗಳ ಸೇವಾಭಾವನೆ ಮತ್ತು ಸಮಾಜಮುಖಿ ಚಟುವಟಿಕೆಗಳನ್ನು ಶ್ಲಾಘಿಸಿದರು. ಅತಿಥಿಗಳಾಗಿ ಕ.ರ.ವೆ ಅಧ್ಯಕ್ಷರಾದ ಶ್ರೀ ರಮೇಶ ಬಿರಾದಾರ (ಹುಣಸಗಿ), ಪತ್ರಕರ್ತರಾದ ಶ್ರೀ ಬಸವರಾಜ ಅಂಗಡಿ, ಶ್ರೀಮತಿ ಪ್ರೀತಿ ರಾಠಿ, ಶ್ರೀ ಸಂತೋಷ ಬಿರಾದಾರ ಹಾಗೂ ಕು.ಸಂಗೀತಾ ದೊರಿಗೋಳ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಶ್ರೀಮತಿ ಕಾವೇರಿ ಸೇರಿದಂತೆ ಇತರರು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಕು.ಸರಸ್ವತಿ ನಿರೂಪಣೆ ಮಾಡಿದರು. ಸಂಗೀತಾ ಗುಮತೆ ಸ್ವಾಗತಿಸಿದರು. ಸಾವಿತ್ರಿ ವಂದನಾರ್ಪಣೆ ಸಲ್ಲಿಸಿದರು.ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಉತ್ಸಾಹಭರಿತ ಭಾಗವಹಿಸುವಿಕೆ ಗಮನಾರ್ಹವಾಗಿತ್ತು.

# ತಂಬಾಕು ಬೆಳೆ ಫಸಲು ಭೀಮಾಗೆ ಸೇರ್ಪಡೆಗೊಳಿಸಬೇಕಾಗಿ ಮನವಿ



• ಮಲ್ಲಮ್ಮ ನುಡಿ ಹುಣಸಗಿ

ವರ್ಜಿನಿಯಾ ತಂಬಾಕು ಬೆಳೆಯನ್ನು ಫಸಲು ಭೀಮಾ ಯೋಜನೆಗೆ ಸೇರ್ಪಡೆಗೊಳಿಸಬೇಕಾಗಿ ಇಂದು ಮೇಲುಕೋಟೆ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯರವರ ನೇತೃತ್ವದಲ್ಲಿ ಮಾನ್ಯ ಕೃಷಿ ಸಚಿವರಾದ ಎನ್ ಚೆಲುವರಾಯಸ್ವಾಮಿಯವರನ್ನು ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಭೇಟಿಯಾಗಿ ಮನವಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾದ ಹೊಸೂರ್ ಕುಮಾರ್ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ನಂತರ ಸುದ್ದಿಗಾರರೊಂದಿಗೆ ನಮ್ಮ ಮನವಿಯನ್ನು ಸ್ವೀಕರಿಸಿದ ಕೃಷಿ ಸಚಿವರಾದ ಎನ್ ಚೆಲುವರಾಯಸ್ವಾಮಿರವರು ಮಾತನಾಡಿ ಈಗಾಗಲೇ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡುವುದರೊಂದಿಗೆ ಕೇಂದ್ರ ಸರ್ಕಾರದ ಕೃಷಿ ಸಚಿವರ ಗಮನಕ್ಕೆ ತಂದು ಕ್ರಮ ಕೈಗೊಳ್ಳುತ್ತೇನೆ ಎಂದರ. ಭರವಸೆ ನೀಡಿದ್ದಾರೆ

ರಾಜ್ಯದಲ್ಲಿ ತಂಬಾಕು ಬೆಳೆಗಾರರು ಹಲವರು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಈ ಬಾರಿ ತಂಬಾಕು ರೈತರು ಅಪಾರ ನಷ್ಟವನ್ನು ಅನುಭವಿಸಿರುವ ಬಗ್ಗೆ ಕೃಷಿ ಸಚಿವರಿಗೆ ಮನದಟ್ಟು ಮಾಡಲಾಯಿತು.

ವರ್ಜೀನಿಯಾ ತಂಬಾಕು ಬೆಳೆಯು ಕರ್ನಾಟಕದಲ್ಲಿ ಮೈಸೂರು, ಹಾಸನ, ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಸುಮಾರು 66 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಬೆಳೆಯುತ್ತಿದ್ದು ಈ ಬೆಳೆಗೆ ಅತಿವೃಷ್ಟಿಯಿಂದಾಗಿ ಬೆಳೆನಷ್ಟಕ್ಕೆ ರೈತರು ಒಳಗಾಗುತ್ತಿದ್ದಾರೆ. ರಾಜ್ಯ ಸರ್ಕಾರವು ವಾಣಿಜ್ಯ ಬೆಳೆಯೆಂದು ಪರಿಗಣಿಸಿ ಫಸಲ್ ಭೀಮಾ ಯೋಜನೆಯ ಪರಿಹಾರ ಪಡೆದುಕೊಳ್ಳಲು ನಿರ್ಭಂಧಿಸಲಾಗಿದೆ.

ಆದರೆ ನೆರೆರಾಜ್ಯವಾದ ಆಂಧ್ರಪ್ರದೇಶದಲ್ಲಿ ಈ ಬೆಳೆಗೆ ಫಸಲ್ ಭೀಮಾ ಯೋಜನೆಯಡಿಯಲ್ಲಿ ಅಲ್ಲಿನ ರಾಜ್ಯಸರ್ಕಾರವು ಸೇರ್ಪಡೆಗೊಳಿಸಿಕೊಂಡಿದ್ದು, ಸುಮಾರು 3-4 ವರ್ಷಗಳಿಂದ ಅಲ್ಲಿನ ರೈತರು ಈ ಯೋಜನೆಯ ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ. ಆದ್ದರಿಂದ ರಾಜ್ಯದ ರೈತರು ಈ ಸೌಲಭ್ಯದಿಂದ ವಂಚಿತರಾಗಿರುವುದರಿಂದ ರಾಜ್ಯದಲ್ಲಿ ತಂಬಾಕು ಬೆಳೆಯನ್ನು ಫಸಲ್ ಭೀಮಾ ಯೋಜನೆಯಡಿಯಲ್ಲಿ ಸೇರ್ಪಡೆಗೊಳಿಸಲು ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಿ ರೈತರಿಗೆ ಪರಿಹಾರ ಪಡೆದುಕೊಳ್ಳಲು ಅನುಕೂಲ ಮಾಡಿಕೊಡಬೇಕಾಗಿ ಮನವಿ ಮಾಡಿಕೊಳ್ಳಲಾಯಿತು.

# ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ



ಚಡಚಣ: ಯುವಕರು ದುಶ್ಚಟಗಳಿಗೆ ಬಲಿಯಾಗದೆ ಕ್ರೀಡಾ ಮನೋಭಾವ ಬೆಳಿಸಿಕೊಳ್ಳುವ ಮೂಲಕ ಸದೃಢ ಶರೀರ ಕಾಪಾಡಿಕೊಳ್ಳಬೇಕು ಎಂದು ಶ್ರೀ ಭೀಮಾಶಂಕರ ಶುಗರ್ಸ್ ನಿರ್ದೇಶಕ ಸುರೇಶಗೌಡ ಪಾಟೀಲ ಹೇಳಿದರು.

ಅವರು ಶ್ರೀ ಶಂಕರಲಿಂಗ ಜಾತ್ರಾ ಮಹೋತ್ಸವ ಹಾಗೂ ದಿ. ರವಿಗೌಡ ಪಾಟೀಲ ಅವರ ಸ್ಮರಣಾರ್ಥ ಅಂಗವಾಗಿ ಗ್ರಾಮೀಣ ಮಟ್ಟದ ಕ್ರಿಕೆಟ್ ಟೂರ್ನಮೆಂಟ್ ಉದ್ಘಾಟಿಸಿ ಮಾತನಾಡಿದರು.

ಹಿಂದಿನ ಕಾಲದಲ್ಲಿ ನಮ್ಮ ಹಿರಿಯರು ಗ್ರಾಮೀಣ ಭಾಗದ ಕ್ರೀಡೆಗಳಾದ ಕುಸ್ತಿ ಆಡುವ ಮೂಲಕ ಶಾರೀರಿಕವಾಗಿ ಸದೃಢವಾಗಿ ಜನಪ್ರಿಯತೆ ಪಡೆಯುತ್ತಿದ್ದರು. ಈಗ ದೇಶ ವಿದೇಶಗಳಲ್ಲಿ ಕ್ರಿ-ಕೆಟ್, ಫುಟ್ಬಾಲ್ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ಶಾರೀರಿಕವಾಗಿ ಸದೃಢ ಸಾಧಿಸುವ ಮೂಲಕ ಕ್ರೀಡೆಯಲ್ಲಿ ಜನಪ್ರಿಯತೆ ಪಡೆಯುತ್ತಿದ್ದು, ಇಂದಿನ ದಿನಗಳಲ್ಲಿ ಯುವಕರು ಶಾರೀರಿಕ ಸದೃಢವಾಗಲು ಕ್ರೀಡಾ ಮನೋಭಾವ ಬೆಳಿಸಿಕೊಳ್ಳುವ ಮುಂದಾಗಬೇಕು ಎಂದರು.

ಈ ಸಂದಂರ್ಭದಲ್ಲಿ ನಾಗನಾಥಗೌಡ ಪಾಟೀಲ, ಸೋಮುಗೌಡ ಪಾಟೀಲ, ಗ್ರಾಮ ಲೆಕ್ಕಾಧಿಕಾರಿ ವಿಠ್ಠಲ ಕೋಳಿ, ಡಾ.ಎಂ ಆರ್ ಮಠ, ದಯಾನಂದ ಪಾಟೀಲ ದಿಲೀಪ ಶಿವಶರಣ, ಬಿರೇಶ ಕೊಡತೆ, ಸಚೀನ ಬಿರಾದಾರ, ಶಂಕರ ಕಮಳೆ, ಪ್ರಭು ನಾಟಿಕಾರ, ಸುರೇಶ ಕಂಬಾರ, ಸಂಗಮೇಶ ಬಗಲಿ, ಸಿದ್ದಲಿಂಗ ಭೈರಗೊಂಡ, ರಾಘವೇಂದ್ರ ಬಿಸೆ, ಸೇರಿದಂತೆ ಮತ್ತಿತರರು ಇದ್ದರು.

# ಭಗವಾನ್ ಮಹಾವೀರ ಜಯಂತಿ ಆಚರಣೆ; ಪೂರ್ವಭಾವಿ ಸಿದ್ಧತಾ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಇಲ್ಲಿನ ಜಿಲ್ಲಾಡಳಿತದಿಂದ ಇದೇ ಮಾರ್ಚ್ 31ರ ಮಂಗಳವಾರದಂದು ಸರ್ಕಾರದ ಆದೇಶದಂತೆ ಭಗವಾನ್ ಮಹಾವೀರ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾರ್ಚ್ 17ರ ಮಂಗಳವಾರದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಭಗವಾನ್ ಮಹಾವೀರ ಜಯಂತಿ ಕುರಿತು ನಡೆದ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಗವಾನ್ ಮಹಾವೀರ ಅವರ ಭಾವಚಿತ್ರಕ್ಕೆ ಪುಷ್ಪಹಾರ ಸಮರ್ಪಣೆ, ಪುಷ್ಪನಮನಗಳನ್ನು ಸಲ್ಲಿಸಿದ ಬಳಿಕ ಅಂದು ಬೆಳಿಗ್ಗೆ 08:30ಕ್ಕೆ ನಗರದ ಜೈನ್ ಮಂದಿರದಿಂದ ಮೆರವಣಿಗೆ ಹೊರಟು ಸೂಪರ್ ಮಾರ್ಕೆಟ್, ತೀನ್ ಕಂದಿಲ್, ಬಟ್ಟೆ ಬಜಾರ್, ಮಹಾವೀರ ವೃತ್ತದ ಮುಖಾಂತರ ಜೈನ್ ಮಂದಿರಕ್ಕೆ ಬಂದು ಸೇರಲಿದೆ. ನಂತರ ಬೆಳಿಗ್ಗೆ 11 ಗಂಟೆಗೆ ಜೈನ್ ಮಂದಿರದ ಆರಾಧನ ಸಭಾ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮೆರವಣಿಗೆ ಮತ್ತು ವೇದಿಕೆಯ ಕಾರ್ಯಕ್ರಮಕ್ಕೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಭಗವಾನ್ ಮಹಾವೀರ ಅವರ ವೃತ್ತವನ್ನು ಅಲಂಕಾರಗೊಳಿಸಬೇಕು. ವಿದ್ಯುತ್ ದೀಪಾಲಂಕಾರ ಮಾಡಬೇಕು. ಶಾಮಿಯಾನ, ಆಸನಗಳು, ಧ್ವನಿವರ್ಧಕ, ಕುಡಿಯುವ ನೀರು, ರಥದ ಸಿದ್ಧತೆ ಹಾಗೂ ಜೈನ್ ಮಂದಿರ ಸುತ್ತ-ಮುತ್ತ ಸ್ವಚ್ಛತೆ, ಕುಡಿಯುವ ನೀರಿನ ಟ್ಯಾಂಕರ್ ಇತ್ಯಾದಿ ವ್ಯವಸ್ಥೆಗಳನ್ನು ರಾಯಚೂರು ಮಹಾನಗರ ಪಾಲಿಕೆಯ ಸಂಬಂಧಿಸಿದ ಅಧಿಕಾರಿಗಳು ಮಾಡಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ಶ್ರೀಮತಿ ಪ್ರೇಮಲತಾ ಹರದರೆ ರಾಯಚೂರು ಅವರಿಂದ ಉಪನ್ಯಾಸ ನಡೆಸಲು ಸಭೆಯಲ್ಲಿ ಒಮ್ಮತದ ತೀರ್ಮಾನ ಮಾಡಲಾಯಿತು.

ಭಗವಾನ್ ಮಹಾವೀರ ಜಯಂತಿ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಯನ್ನು ಶಿಷ್ಟಾಚಾರದಂತೆ ಮುದ್ರಿಸಿ ವಿತರಿಸಲು ಸೂಚನೆ ನೀಡಲಾಯಿತು.

ಜಯಂತಿ ಆಚರಣೆಯನ್ನು ಎಲ್ಲಾ ಇಲಾಖೆಗಳಲ್ಲಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಆಚರಿಸಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದಕ್ಕೂ ಮುಂಚೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಅವರು ಸಭೆಗೆ ಆಗಮಿಸಿದ ಸರ್ವರನ್ನೂ ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಮಹಾವೀರ ಹಾರದಾರ್, ಅಶೋಕ ಲೋದಾ, ಎಸ್.ಎಸ್.ಜೈನ್ ಸಾವ್, ಗೌತಮಿ ಗಿಯ್, ರಾಜೇಂದ್ರ ಕುಮಾರ್, ಅಶೋಕ ಕುಮಾರ್ ಸಿ.ಕೆ ಜೈನ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

# ಯುದ್ಧ ತಡೆಯಲು ಭಾರತ ವಿಶ್ವಸಂಸ್ಥೆ ಮೇಲೆ ಒತ್ತಡ ಹೇರಬೇಕು




ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಇರಾನ್ ದೇಶದ ಮೇಲೆ ಅಮೆರಿಕಾ – ಇಸ್ರೇಲ್ ಮಿಲಿಟರಿ ಮೂಲಕ ವಿನಾಶಕಾರಿ ಯುದ್ಧ ನಿಲ್ಲಿಸಬೇಕೆಂದು ಭಾರತ ಸರ್ಕಾರ ವಿಶ್ವಸಂಸ್ಥೆಗೆ ಒತ್ತಡ ಹೇರಬೇಕೆಂದು ಪ್ರಗತಿ-ಪರ ಸಂಘಟನೆಗಳು ಮಹಾತ್ಮ ಗಾಂಧಿ ಸರ್ಕಲ್ ನಲ್ಲಿ ಖಾಲಿ ಸಿಲಿಂಡರ್ ಇಟ್ಟು ಪ್ರೊಟೆಸ್ಟ್ ಮಾಡಿದರು. ನಂತರ ತಾಲೂಕು ತಹಶೀಲ್ದಾರ್ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿ ಅಮೆರಿಕಾ –ಇಸ್ರೇಲ್ ಮಿಲಿಟರಿ ಯುದ್ಧದ ನೀತಿ ಖಂಡಿಸಿ ವಿರುದ್ಧ ಘೋಷಣೆ ಕೂಗುತ್ತ ಪ್ರತಿಭಟನೆ ನಡೆಸಿದರು.

ಈ ಪ್ರತಿಭಟನೆ ಕುರಿತು ಮಾತನಾಡಿದ ಪ್ರಗತಿಪರ ಸಂಘಟನೆ ತಾಲೂಕು ಸಂಚಾಲಕರಾದ ಡಿ ಎಚ ಪೂಜಾರ ಅವರು ಈಗಾಗಲೇ ಕಳೆದ ಎರಡು ವಾರಗಳಿಂದ ಅಮೇರಿಕಾ ಇಸ್ರೇಲ್ ಸಾಮ್ರಾಜ್ಯದ ನೀತಿ ಹಾಗೂ ಯುದ್ಧ ಕೋರಿ ನೀತಿಯನ್ನೇ ಖಂಡಿಸಿ ಎಲ್ಲಾ ಜೀವಪರ ಮನಸುಗಳು ಇವತ್ತು ಹೋರಾಟವನ್ನು ಮಾಡುತ್ತಿದ್ದೇವೆ.

ಅಮೆರಿಕಾ ತನ್ನ ಆರ್ಥಿಕ ಮುಗಟ್ಟು ಏನಿದೆ ಅದನ್ನು ಸರಿಪಡಿಸಿಕೊಳ್ಳುವ ನೆಪದಲ್ಲಿ ಇಸ್ರೇಲ್ ಜಂಟಿಯಾಗಿ ಇನ್ನೊಂದು ದೇಶದ ಮೇಲೆ ಯುದ್ಧ ನಡೆಸುತ್ತಿರುವುದು ಅತ್ಯಂತ ಖಂಡನೆ ಮತ್ತು ಇರಾನ್ ದೇಶದ ಸರ್ವೋಚ್ಚ ನಾಯಕನನ್ನು ರಾತ್ರೋರಾತ್ರಿ ಕೊಲೆ ಮಾಡಿರುವಂತದ್ದು. ಈಗಾಗಿ ನಮ್ಮ ಸುತ್ತ ಪರಿಸ್ಥಿತಿ ನೋಡಿದಾಗ ಪ್ರಪಂಚ ಅಪಾಯದಲ್ಲಿದೆ

ಈಗಾಗಲೇ ಅಮೆರಿಕಾ ಹಲವು ರಾಷ್ಟಗಳು ಮೇಲೆ ರಾತ್ರೋರಾತ್ರಿ ಯುದ್ಧ ನಡೆಸಿ ಅಲ್ಲಿನ ರಾಷ್ಟ್ರೀಯ ನಾಯಕರನ್ನು ಕೊಂದಿರುವುದು ಸಾಕಷ್ಟು ಉದಾಹರಣೆಗಳು ನಮ್ಮ ಕಣ್ಣು ಮುಂದೆ ಇವೇ. ಈಗಾಗಿ ಅಮೆರಿಕಾ ಪ್ರಪಂಚದ ಮೇಲೆ ತನ್ನ ಹಿಡಿತವನ್ನು ಸಾಧಿಸುವುದಕ್ಕೆ ಇಸ್ರೇಲ್ ಜಂಟಿಯಾಗಿ ಈ ತರದ ಯುದ್ಧಗಳು ನಡೆಸುತ್ತಿರುವುದು. ಅತ್ಯಂತ ವಿಷಕಾರಿ ಯುದ್ಧವಾಗಿದೆ ಎಂದು ಹೇಳಿದರು.

ಈ ದುರಾಕ್ರಮಣವು ತೈಲಸಂಪದ್ಭರಿತ ದೇಶಗಳಾದ ಓಮನ್, ಕಡಾರ್. ಬಹರೇನ್, ಸೌದಿಅರೇಬಿಯಾ, ಜೋರ್ಡಾನ್ ಇರಾಕ್ ಮುಂತಾದ ದೇಶಗಳಲ್ಲಿ ಯುದ್ಧದ ಸುಳಿಗೆ ಸಿಲುಕುವಂತೆ ಮಾಡಿದೆ. ಕೊಲ್ಲಿ ರಾಷ್ಟಗಳು ಯುದ್ಧಾಗ್ನಿಯಲ್ಲಿ ಉರಿಯುತ್ತಿರುವುದರಿಂದ ಸಾವಿರಾರು ಸಾವು-ನೋವುಗಳಿಗೆ ಆಹಾರ-ಅಗತ್ಯ ವಸ್ತುಗಳ ಪೂರೈಕೆಯ ಆಭಾವದ ಆಹಾಕಾರಕ್ಕೆ, ಅಪಾರ ಸಂಪತ್ತಿನ ನಾಶಕ್ಕೆ ಕಾರಣವಾಗಿದೆ ಎಂದರು

ಇಡೀ ಪ್ರಪಂಚದ ಆರ್ಥಿಕತೆಯ ಮೇಲೆ ತೀವ್ರತರವಾದ ನಷ್ಟಗಳಿಗೆ ಎಡೆ ಮಾಡಿದೆ. ಭಾರತದಲ್ಲಿ ಕೂಡ ಅಲ್ಲಿಂದ ಆಮದಾಗುವ ಐಕಲು ಗ್ಯಾಸ್, ಪೆಟ್ರೋಲಿಯಂ ತೈಲ ಮೇಲೆ ಭಾರತದಲ್ಲಿ ಅವಲಂಬಿತವಾಗಿರುದಿರಂದ ಐಕಲು ಗ್ಯಾಸ್‌ನ ತೀವ್ರ ಆಹಾಕಾರವೆದ್ದಿದೆ

ಇಷ್ಟೇಲ್ಲಾ ದುಷ್ಪರಿಣಾಮಗಳಿಗೆ ಎಡೆ ಮಾಡಿದ ಅಮೇರಿಕಾ ಮತ್ತು ಇಸ್ರೇಲ್ ಗಳ ಈ ಅನ್ಯಾಯದ ದುರಾಕ್ರಮಣ ನೀತಿಯನ್ನು ಪಗ್ರತಿಪರ ಸಂಘಟನೆಗಳ ಒಕ್ಕೂಟವು ತೀವ್ರವಾಗಿ ಖಂಡಿಸುತ್ತದೆ.

ಮತ್ತು ತಕ್ಷಣ ಯುದ್ಧ ನಿಲ್ಲಿಸಿ ಶಾಂತಿ ಸ್ಥಾಪಗೆ ಮುಂದಾಗಬೇಕು ಹಾಗೂ ಅಗತ್ಯ ಐಕಲು ಗ್ಯಾಸ್ ಪೂರೈಕೆ ಸುಗಮಗೊಳಿಸಬೇಕೆಂದು ಈ ಮೂಲಕ ಒತ್ತಾಯಿಸುತ್ತಿದೆ

ಬಹುಕಾಲದಿಂದ ಇರಾನ್ ದೇಶ ಭಾರತದೊಂದಿಗೆ ಸ್ನೇಹ-ಸಂಬಂಧ ಸಹಕಾರ ಹೊಂದಿರುವ ಸರ್ವೋಚ್ಚ ನಾಯಕನನ್ನು ರಾತ್ರೋರಾತ್ರಿ ಕೊಲೆ ಮಾಡಿರುವುದನ್ನು ಖಂಡಿಸಿದ ಭಾರತದ ಅವಕಾಶವಾದಿ ಹೋಣೆ ಗೇಡೆ ನಿಲುವನ್ನು ಒಕ್ಕೂಟವು ತೀವ್ರವಾಗಿ ಖಂಡಿಸುತ್ತದೆ.

ಭಾರತ ದೇಶ ಹಿಂದಿನಿಂದಲೂ ಪಾಲಿಸಿಕೊಂಡು ಬಂದ ತಟಸ್ಥ ನೀತಿಯನ್ನು ಪಾಲಿಸುತ್ತಾ ಯುದ್ಧ ನಿಲ್ಲಿಸಲು. ಮತ್ತು ಶಾಂತಿ ಸ್ಥಾಪಿಸಲು ಸಾಧ್ಯವಾದರೆ ಎಲ್ಲೂ ಪ್ರಯತ್ನಗಳು ಮಾಡಲು ಮುಂದಾಗಬೇಕು . ಯುದ್ಧ ಬೇಡ ಶಾಂತಿ ಬೇಕು ಪ್ರಪಂಚದ ವಿವಿಧ ದೇಶಗಳಲ್ಲಿ ನಡೆಯುತ್ತಿರುವ ಹೋರಾಟಗಳಲ್ಲಿ ನಮ್ಮ ಪ್ರಗತಿಪರ ಸಂಘಟನೆಗಳ ದ್ವನಿಗೊಡುಸುತ್ತದೆ ಎಂದು ಗಾಂಧಿ ಸರ್ಕಲ್ ನಲ್ಲಿ ಪ್ರೊಟೆಸ್ಟ್ ಮಾಡಿ ಪ್ರತಿಭಟನೆ ನಡೆಸಿದರು

ಈ ಸಂದರ್ಭದಲ್ಲಿ. ಪ್ರಗತಿ-ಪರ ಸಂಘಟನೆಗಳು ಒಕ್ಕೂಟದ ಎಲ್ಲಾ ಸಂಚಾಲಕರು ಭಾಗವಹಿಸಿದರು.

# ಮಹಿಳೆ ಸರ್ವಶಕ್ತಳಾಗಿದ್ದು, ತನ್ನ ಶಕ್ತಿಯನ್ನು ಅರಿತು ಸ್ವಾವಲಂಬಿಯಾಗಬೇಕು: ನ್ಯಾ.ಮಹಾಂತೇಶ ದರಗದ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಆಧುನಿಕ ಮಹಿಳೆಯು ಸರ್ವಶಕ್ತಳಾಗಿದ್ದಾಳೆ. ಅಪಾರ ಶಕ್ತಿಯನ್ನು ಹೊಂದಿರುವ ಮಹಿಳೆಯರು ಧೈರ್ಯವಾಗಿ ಮುನ್ನುಗ್ಗಬೇಕು. ಆರ್ಥಿಕವಾಗಿ ಸ್ವಾವಲಂಬಿಯಾಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಹೇಳಿದರು.

ಮಂಗಳವಾರದಂದು ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಅಜೀಂ ಪ್ರೇಮ್‌ಜೀ ಫೌಂಡೇಶನ್, ಇನ್ನರ್‌ವ್ಹೀಲ್ ಕ್ಲಬ್, ಶ್ರೀ ಮಹಿಳಾ ಪ್ರತಿಧ್ವನಿ ಸಾಮಾಜಿಕ, ಶೈಕ್ಷಣಿಕ ಮತ್ತು ಗ್ರಾಮೀಣಾಭಿವೃದ್ಧಿ ಸೇವಾ ಸಂಸ್ಥೆ, ಶ್ರೀ ಅಕ್ಕಮಹಾದೇವಿ ಮಹಿಳಾ ಮಂಡಳ(ರಿ) ಹಾಗೂ ವಾಸವಿ ಕ್ಲಬ್ ಭಾಗ್ಯನಗರ ಪಾನಘಂಟಿ ಫೌಂಡೇಶನ್(ರಿ) ಕೊಪ್ಪಳ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆ ಎಲ್ಲ ರಂಗದಲ್ಲಿಯೂ ತನ್ನ ಛಾಪು ಮೂಡಿಸುತ್ತಿದ್ದಾಳೆ. ಅವಳಿಗೆ ಅರ್ಹತೆ ಇದೆ, ಅಗಾಧ ಅವಕಾಶಗಳೂ ಇವೆ, ಮಹಿಳೆ ಧೈರ್ಯವಾಗಿ ಮುನ್ನುಗ್ಗಬೇಕು. ಸಮಾಜದಲ್ಲಿ ಸಮಾನತೆ ಸಾಧಿಸಲು, ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಸುಶಿಕ್ಷಿತ ಸಮಾಜದಲ್ಲಿಯೇ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿದ್ದು, ಸುರಕ್ಷಿತವಾಗಿರುವ ಕುರಿತು ಹೆಣ್ಣುಮಕ್ಕಳಿಗೆ ಜಾಗೃತಿ ಮೂಡಿಸುವುದಷ್ಟೇ ಅಲ್ಲ, ಹೆಣ್ಣುಮ್ಕಕಳನ್ನು ಹೇಗೆ ಗೌರವಿಸಬೇಕು ಎಂಬುದನ್ನು ಗಂಡುಮಕ್ಕಳಿಗೂ ಕಲಿಸಬೇಕು. ಮಹಿಳೆಯರ ರಕ್ಷಣೆಗೆ ಕಾನೂನಿನಲ್ಲಿ ಹಲವಾರು ರೀತಿಯ ಅವಕಾಶಗಳಿದ್ದು, ಸಂವಿಧಾನದಲ್ಲಿಯೂ ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಲಾಗಿದೆ. ಮಹಿಳೆಯರು ಇವುಗಳನ್ನು ಅರಿತುಕೊಂಡು, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಸಬಲರಾಗಬೇಕು. ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ಹೇಳಿದರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಜಿ. ಗೊಂಡಬಾಳ ಅವರು ಮಾತನಾಡಿ, ಮಹಿಳೆಗೆ ಮಹಿಳೆಯೇ ಶತ್ರುವಾಗಿರುವ ಕಾಲ ಘಟ್ಟದಲ್ಲಿ, ಮಹಿಳೆ ಓದು ಬರಹದ ಕಡೆಗೆ, ಸ್ವಂತದ ಬೆಳವಣಿಗೆಯ ಕಡೆಗೆ ಗಮನ ಹರಿಸಬೇಕು. ಸಮಾಧಾನ ಮತ್ತು ಶಾಂತಚಿತ್ತತೆಯಿಂದ ಎಲ್ಲವನ್ನೂ ಅವಲೋಕಿಸಿ ಮುನ್ನಡೆಯಬೇಕು, ವಿಧವೆ ಮಹಿಳೆ ಬಗ್ಗೆ ಸಮಾಜ ಆಡುವ ಮಾತುಗಳು ಮತ್ತು ವಿಧುರ ಪುರುಷನ ಬಗ್ಗೆ ಸಮಾಜ ತೋರುವ ಅನುಕಂಪವನ್ನೇ ನಾವು ನೋಡಿದರೆ ಅಸಮಾನತೆಯನ್ನು ಗಮನಿಸಬಹುದು. ಕೇವಲ ಹೆಣ್ಣುಮಕ್ಕಳಿಗೆ ಅಷ್ಟೇ ಅಲ್ಲದೇ ಗಂಡುಮಕ್ಕಳಿಗೆ ಸರಿಯಾದ ಸಂಸ್ಕಾರ ಕಲಿಸುವ ಅಗತ್ಯವಿದೆ.



ಬಸವಕಲ್ಯಾಣ : ತಾಲೂಕಿನ ಅಲಗೂಡ ಸರಕಾರಿ ಪ್ರಾಢಶಾಲೆಯಲ್ಲಿ 2025 – 26ನೇ ಸಾಲಿನ ಎಸ್. ಎಸ್. ಎಲ್. ಸಿ. ವಿದ್ಯಾರ್ಥಿ ಗಳ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.ಅಲ್ಲದೆ ವರ್ಗಾವಣೆಯಾದ ಶಿಕ್ಷಕಿ ಸುಜಾತಾ ಖೈರಾಟ ಕರ್ ಹಾಗೂ ದೇವಿಕಾ ರಾಜೋಳೆ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಎಸ್. ಡಿ. ಎಂ. ಸಿ. ಅಧ್ಯಕ್ಷರು. ಸದ್ಯಸರು. ಮುಖ್ಯ ಗುರುಗಳಾದ ರಮೇಶ ರಾಜೋಳೆ. ರಾಜಕುಮಾರ ಬಿರಾದಾರ. ಹರ್ಷವರ್ಧನ ಕಾಂಬಳೆ ಹಾಗೂ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗೋಡಂಬಿಯ ಪಾನೀಯಗಳನ್ನು ತಯಾರಿಸಿ ಹೆಚ್ಚಿನ ಆದಾಯ ಪಡೆಯಲು ರೈತರಿಗೆ ಸಲಹೆ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಗೋಡಂಬಿಹಣ್ಣಿನಮೌಲ್ಯವರ್ಧನೆಯಿಂದ ವಿವಿಧ ಪಾನೀಯಗಳನ್ನು ತಯಾರಿಸಿ ಹೆಚ್ಚಿನ ಆದಾಯ ಪಡೆಯಬೇಕು. ಗೋಡಂಬಿಯು ಬರಡು ಮತ್ತು ಕೆಂಪು ಭೂಮಿಯ ಅದ್ಭುತ ಮತ್ತು ಪ್ರಮುಖ ವಾಣಿಜ್ಯ ಬೆಳೆಯಾಗಿದೆ. ಬಂಗಾರದ ಬೆಳೆಯಾದ ಇದನ್ನು 7.50 ಥ 7.50 ಮೀಟರಿನ ಅಂತರದಲ್ಲಿ ಸವಕಳಿಯಾದ ಕೆಂಪು ಮಣ್ಣಿನಲ್ಲಿ ಯಶಸ್ವಿಯಾಗಿ ಬೆಳೆದರೆ 3 ವರ್ಷದ ನಂತರ ರೈತರು ಇತರೇ ಬೆಳೆಗಳಿಗಿಂತ ಅಧಿಕ ಲಾಭ ಪಡೆಯಬಹುದೆಂದು ಬೀದರ ತೋಟಗಾರಿಕೆ ಕಾಲೇಜಿನ ಡೀನ್ ಡಾ.ಎಸ್.ವಿ.ಪಾಟೀಲ್ ರೈತರಿಗೆ ಸಲಹೆ ನೀಡಿದರು.

ಅವರು ಬುಧವಾರ ಬೀದರಿನಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಹಾಗೂ ಗೋಡಂಬಿ ಮತ್ತು ಕೋ-ಕೋ ಅಭಿವೃದ್ಧಿ ನಿರ್ದೇಶನಾಲಯ, ಕೊಚ್ಚಿ, ಕೇರಳದ ಅನುದಾನದಡಿ ರೈತರಿಗಾಗಿ ಆಯೋಜಿಸಿದ ಜಿಲ್ಲಾ ಮಟ್ಟದ "ಗೋಡಂಬಿ ಬೆಳೆ" ಕುರಿತು ಒಂದು ದಿನದ ವಿಚಾರ ಸಂಕಿರಣದ ಉದ್ಘಾಟನಾ ಸಮಾರಂಭದ ಹಾಗೂ ಕೋಳಾರ (ಕೆ) ಕೃಷಿ ಕ್ಷೇತ್ರದಲ್ಲಿ ಬೆಳೆದಿರುವ ವಿವಿಧ ತಳಿಗಳ ಕಚ್ಚಾ ಗೋಡಂಬಿಗಳ ಪ್ರದರ್ಶನದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗೋಡಂಬಿ ಬೆಳೆಯನ್ನು ಕಡಿಮೆ ನೈಸರ್ಗಿಕ ಸಂಪನ್ಮೂಲ ಬಳಸಿ ಅಧಿಕ ಲಾಭ ಹಾಗೂ ಆರ್ಥಿಕ ಮತ್ತು ಪೋಷ್ಟಿಕಾಂಶದ ಭದ್ರತೆ ನೀಡುವ ಬೆಳೆಯಾಗಿದೆ. ಕೋಯ್ಲು ಮಾಡಿದ 5-8 ಕೆ.ಜಿ. ಗೋಡಂಬಿ ಹಣ್ಣಿಗೆ ಒಂದು ಕೆ.ಜಿ. ಕಚ್ಚಾ ಗೋಡಂಬಿ ದೊರೆಯುತ್ತದೆ. ಸುಮಾರು ಒಂದು ಎಕರೆಗೆ 5.6 ರಿಂದ 7 ಮೆಟ್ರಿಕ್ ಟನ್‌ದಷ್ಟು ಗೋಡಂಬಿ ಹಣ್ಣುಗಳು ದೊರೆಯುತ್ತವೆ. ಇದನ್ನು ಬೆಳೆದ ಹತ್ತು ವರ್ಷ ಮೇಲ್ಪಟ್ಟ ಗೋಡಂಬಿ ಬೆಳೆಯಿಂದ ಒಂದು ಎಕರೆ ಪ್ರದೇಶದಲ್ಲಿ ಅಂದಾಜು 1050-1100 ಕೆ.ಜಿ. ಕಚ್ಚಾ ಗೋಡಂಬಿಯ ಇಳುವರಿ ಪಡೆಯಬಹುದು ಎಂದರು

ಕರ್ನಾಟಕ ರಾಜ್ಯದಲ್ಲಿ ಶೇ.70 ರಷ್ಟು ಗೋಡಂಬಿಯನ್ನು ಕರಾವಳಿ ಕರ್ನಾಟಕದಲ್ಲಿ ಬೆಳೆಯಲಾಗುತ್ತಿದೆ. ಉಡುಪಿ ಜಿಲ್ಲೆ ಮತ್ತು ದಕ್ಷಿಣ ಕನ್ನಡ ಜಿಲ್ಲೆ ಪ್ರದೇಶ ಮತ್ತು ಉತ್ಪಾದನೆಯಲ್ಲಿ ಕ್ರಮವಾಗಿ ಮೊದಲನೇ ಮತ್ತು ಎರಡನೇ ರ್‍ಯಾಂಕ್ ಪಡೆದಿವೆ. ಮಂಗಳೂರನ್ನು ಭಾರತ ದೇಶದ ಗೋಡಂಬಿ ರಾಜಧಾನಿ ಎಂದು ಹೆಸರುವಾಸಿಯಾಗಿದೆ ಎಂದು ಹೇಳಿದರು.

ಗೋಡಂಬಿ ಬೆಳೆಗಾರರಾದ ನಾಗನಾಥರಾವ ನಿಡೋದೆ ಹಾಗೂ ನಾರಾಯಣರಾವ ಬರಿದಾಬಾದೆ ಮಾತನಾಡಿ, ತಮಗೆ ಗೋಡಂಬಿ ಬೆಳೆಯಿಂದ ಸಾಕಷ್ಟು ಲಾಭವಾಗಿದೆ. ರೈತರು ಗೋಡಂಬಿ ಬೆಳೆ ಬೆಳೆಯುವುದರಿಂದ ಇನ್ನೊಂದು ಬೆಳೆಯ ಅತ್ಯುತ್ತಮ ಇಳುವರಿ ಮತ್ತು ಶುದ್ಧವಾದ ಪರಿಸರವನ್ನು ಪಡೆಯಬಹುದು. ಗೋಡಂಬಿ ಬೆಳೆಯನ್ನು ಬೆಳೆಯಲು ಬೀದರ ಜಿಲ್ಲೆಯ ವಾತಾವರಣ ಹೇಳಿಸಿ ಮಾಡಿದಂತಿದೆ. ಒಂದು ಬಾರಿ ನಾಟಿ ಮಾಡಿದರೆ ಸುಮಾರು 30 ವರ್ಷಗಳಿಗಿಂತ ಹೆಚ್ಚು ನಿರಂತರವಾಗಿ ಇದರ ಲಾಭ ಪಡೆಯಬಹುದು. ಬೀದರ ಹೆಚ್ಚು ಹೆಚ್ಚು ರೈತರು ಈ ಬೆಳೆಯನ್ನು ಬೆಳೆಯಲು ಮುಂದೆ ಬರಬೇಕು. ಇದಕ್ಕೆ ಕೆಂಪು ಮಣ್ಣು ಹೊಂದಿರುವ ಜಮೀನು ಸೂಕ್ತವೆಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ತರಬೇತಿ ಕಾರ್ಯಕ್ರಮದಲ್ಲಿ ಡಾ. ಮೊಹಮ್ಮದ ಫಾರೂಕ್, "ಬಯಲು ಪ್ರದೇಶಕ್ಕೆ ಸೂಕ್ತವಾದ ಗೋಡಂಬಿ ತಳಿಗಳು", ಡಾ. ಶ್ರೀನಿವಾಸ ಎನ್. "ಗೋಡಂಬಿ ಬೆಳೆಯ ಸುಧಾರಿತ ಸಸಿ ತಯಾರಿಸುವ ವಿಧಾನಗಳು", ಡಾ.ವಿಜಯ ಮಹಾಂತೇಶ "ಗೋಡಂಬಿ ಬೆಳೆಯಲ್ಲಿ ಸಾವಯವ ಬೇಸಾಯ ಕ್ರಮಗಳು" ಡಾ. ವಿ.ಪಿ.ಸಿಂಗ್ "ಗೋಡಂಬಿ ಬೆಳೆಯ ಔಷಧೀಯ ಮಹತ್ವ" ಕುರಿತು ವಿಸ್ತ್ರತವಾಗಿ ತಾಂತ್ರೀಕ ಮಾಹಿತಿ ರೈತರೊಂದಿಗೆ ಹಂಚಿಕೊಂಡರು.

ವೀರಭದ್ರೇಶ್ವರ ಅಗ್ರೋ ಇಂಡಸ್ಟ್ರೀಜ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಮೋಲಕುಮಾರ ವಿಜಾಪೂರೆ ಮಾತನಾಡಿ, ಕಚ್ಚಾ ಗೋಡಂಬಿಯನ್ನು ಬೀದರ ಜಿಲ್ಲೆಯ ಹೆಚ್ಚು ಹೆಚ್ಚು ರೈತರೇ ಬೆಳೆದು ಪ್ರೋಸೆಸಿಂಗಗೆ ಪೂರೈಸಿದರೆ ತಾವು ಖರೀದಿಸಿ ಒಳ್ಳೆಯ ದರ ಕೊಡುತ್ತೇವೆ ಎಂದು ಭರವಸೆ ನೀಡಿದರು.

ಈ ವಿಚಾರ ಸಂಕಿರಣದಲ್ಲಿ ಗೋಡಂಬಿ ಬೆಳೆ ಹಾಗೂ ಮೌಲ್ಯವರ್ಧಿತ ಪದಾರ್ಥಗಳ ವಸ್ತು ಪ್ರದರ್ಶನವನ್ನು ಸಹ ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ಬೀದರ ಜಿಲ್ಲೆಯ 150 ರೈತರು ಪಾಲ್ಗೊಂಡು ವಿಚಾರ ಸಂಕಿರಣದ ಸದುಪಯೋಗ ಪಡೆದುಕೊಂಡರು. ಗೋಡಂಬಿ ಬೆಳೆ ಕುರಿತು ರೈತರು ಕೇಳಲಾದ ಪ್ರಶ್ನೆಗಳಿಗೆ ತಜ್ಞರು ಮಾಹಿತಿ ಸಹ ನೀಡಿದರು. ಡಾ. ವಿ.ಪಿ. ಸಿಂಗ್ ಸ್ವಾಗತಿಸಿದರು,

ಡಾ. ವಿಜಯ ಮಹಾಂತೇಶ ರವರು ನಿರೂಪಿಸಿದರು.

# ವಿವಿಧ ಜಾತ್ರೆ, ರಥೋತ್ಸವ ಸಕಲ ಸಿದ್ದತೆಗೆ ಜಿಲ್ಲಾಧಿಕಾರಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ



ಮುಂಬರುವ ಮಾರ್ಚ್ 27 ರಿಂದ ಏಪ್ರಿಲ್ 4 ರವರೆಗೆ ವಿವಿಧ ದೇವಸ್ಥಾನಗಳ ಜಾತ್ರಾ ಮಹೋತ್ಸವ ಜರುಗಲಿದ್ದು, ಅತ್ಯಂತ ವಿಜೃಂಭಣೆ ಮತ್ತು ಭಕ್ತಿಪೂರ್ವಕ ಹಾಗೂ ಶಿಸ್ತುಬದ್ಧವಾಗಿ ರಥೋತ್ಸವ ಜರುಗಿಸಲು ಅಗತ್ಯ ಸಕಲ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ವಿವಿಧ ದೇವಸ್ಥಾನಗಳ ವಾರ್ಷಿಕ ಜಾತ್ರಾ ಮಹೋತ್ಸವ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲ್ಲೂಕಿನ ಮರಿಯಮ್ಮನಹಳ್ಳಿ ಗ್ರಾಮದಲ್ಲಿ ಇದೇ ಮಾರ್ಚ್ 27 ರಂದು ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ಮತ್ತು ಆಂಜನೇಯ ಸ್ವಾಮಿ ದೇವಸ್ಥಾನ ವಾರ್ಷಿಕ ರಥೋತ್ಸವ, ಮಾರ್ಚ್ 27 ರಿಂದ ಏಪ್ರಿಲ್ 4 ವರೆಗೆ ಹಂಪಿ ಶ್ರೀ ವಿರೂಪಾಕ್ಷೇಶ್ವರ ದೇವಸ್ಥಾನದ ಬ್ರಹ್ಮರಥೋತ್ಸವ ಹಾಗೂ ಮಾರ್ಚ್ 31ರವರೆಗೆ ಜಂಬುನಾಥ ಗ್ರಾಮದ ಶ್ರೀ ಜಂಬುನಾಥೇಶ್ವರ ದೇವಸ್ಥಾನದ ವಾರ್ಷಿಕ ರಥೋತ್ಸವ ನಡೆಯಲಿದೆ.

ಜಾತ್ರಾ ಮಹೋತ್ಸವಕ್ಕೆ ಜಿಲ್ಲೆಯ ನಾನಾ ಭಾಗಗಳಿಂದ ಲಕ್ಷಾಂತರ ಭಕ್ತರು ಜಾತ್ರಾ ಮಹೋತ್ಸವಕ್ಕೆ ಆಗಮಿಸುವುದರಿಂದ, ಯಾವುದೇ ಸಣ್ಣ ಲೋಪ-ದೋಷಗಳಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಜಾತ್ರೆಯ ಸಂದರ್ಭದಲ್ಲಿ ಲಕ್ಷಾಂತರ ಭಕ್ತರು ಆಗಮಿಸುವುದರಿಂದ, ಮಾರ್ಚ್ ತಿಂಗಳ ಬಿಸಿಲನ್ನು ಗಮನದಲ್ಲಿಟ್ಟುಕೊಂಡು ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆ ಮಾಡಬೇಕು. ವೈದ್ಯಕೀಯ ಇಲಾಖೆಯಿಂದ ತುರ್ತು ವೈದ್ಯಕೀಯ ಸೇವೆಗಳಲ್ಲಿ ಯಾವುದೇ ಕೊರತೆ-ಯಾಗದಂತೆ ಅಧಿಕಾರಿಗಳು ಅಂಬುಲೆನ್ಸ್ ಸಹಿತ ಸಿಬ್ಬಂದಿ ನಿಯೋಜಿಸಬೇಕು.

ಜಾತ್ರೆಯನ್ನು ಅತ್ಯಂತ ಯಶಸ್ವಿಯಾಗಿ ನಡೆಸಲು ಅಗತ್ಯವಿರುವ ಕುಡಿಯುವ ನೀರು, ಶೌಚಾಲಯ, ನೆರಳಿನ ವ್ಯವಸ್ಥೆ, ರಾತ್ರಿ ವೇಳೆ ಆಗಮಿಸುವ ಭಕ್ತರಿಗೆ ಅನುಕೂಲವಾಗುವಂತೆ ಬೀದಿ ದೀಪ ಅಳವಡಿಸಿ ಬೆಳಕಿನ ವ್ಯವಸ್ಥೆ ಕಲ್ಪಿಸುವುದರ ಜತೆಗೆ ಎಲ್ಲಾ ರೀತಿಯ ಮೂಲಸೌಕರ್ಯಗಳ ಒದಗಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶಿಸಿದರು.

ದರ್ಶನಕ್ಕೆ ನೂಕು ನುಗ್ಗಲು ಉಂಟಾಗದಂತೆ ತಾತ್ಕಾಲಿಕ ಬ್ಯಾರಿ-ಕೇಡ್ ಅಳವಡಿಸಿ ಸರದಿ ಮೂಲಕ ಭಕ್ತರ ದಟ್ಟಣೆಯನ್ನು ಸುಗಮವಾಗಿ ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ ಅವರು, ಭಕ್ತರ ಸುರಕ್ಷತೆಯ ದೃಷ್ಟಿಯಿಂದ ಈ ಬಾರಿ ಭದ್ರತೆಯನ್ನು ಹೆಚ್ಚಿಸಲಾಗುವುದು. ಕಳೆದ ಬಾರಿಗಿಂತ ಹೆಚ್ಚಿನ ಸಂ-ಖ್ಯೆಯ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು, ಜೊತೆಗೆ ತಾತ್ಕಾಲಿಕ ಪೊಲೀಸ್ ನಿಯಂತ್ರಣ ಕೊಠಡಿ ಸ್ಥಾಪಿಸಬೇಕು. ಜಾತ್ರೆ ಹಿನ್ನಲೆಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡಬೇಕು. ಇದಕ್ಕಾಗಿ ಸ್ಥಳೀಯ ಸಂಸ್ಥೆಗಳ ವತಿಯಿಂದ ಸಿಬ್ಬಂದಿ ನಿಯೋಜಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು. ಜಾತ್ರಾ ರಥೋತ್ಸವ ರಥ ಸಂಚರಿಸುವ ಬೀದಿಗಳಲ್ಲಿನ ಗೂಡಂಗಡಿಗಳ ತೆರವುಗೊಳಿಸಿ ರಥ ಮುಕ್ತ ಸಂಚಾರಕ್ಕೆ ಕ್ರಮವಹಿಸಬೇಕು ಎಂದರು.

ಜಂಬುನಾಥೇಶ್ವರ ದೇವಸ್ಥಾನ ಸಂಪರ್ಕ ಕಲ್ಪಿಸಲು ರಸ್ತೆ ಕಾಮಗಾರಿ ವಿವಿಧ ಕಾರಣಗಳಿಂದ ಅರ್ಧ-ಕ್ಕೆ ಮೊಟಕಾಗಿದ್ದು, ತ್ವರಿತವಾಗಿ ಪೂರ್ಣಗೊಳಿಸಿ ಭಕ್ತಾಧಿಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಾತ್ರಾ ಮಹೋತ್ಸವ ವೇಳೆ ವಿದ್ಯುತ್ ವ್ಯತ್ಯಯ ಆಗದಂತೆ ಜೆಸ್ಕಾಂ ಅಧಿಕಾರಿಗಳು ಕ್ರಮವಹಿಸಬೇಕು. ಜಾತ್ರಾ ಸಂದರ್ಭದಲ್ಲಿ ಅಗ್ನಿ ಅವಘಡ ಸಂಭವಿಸದಂತೆ ಅಗ್ನಿಶಾಮಕ ದಳ ಸನ್ನದ್ಧರಾಗಿರಬೇಕು. ಕಲ್ಯಾಣ ಕರ್ನಾಟಕ ಸಾರಿಗೆ ವತಿಯಿಂದ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಬೇಕು ಎಂದು ಸೂಚಿಸಿದರು.

ಜಾತ್ರೆಯ ಸಂದರ್ಭದಲ್ಲಿ ಭಕ್ತಾಧಿಗಳು, ದೇವಸ್ಥಾನದ ವತಿಯಿಂದ ಅನ್ನ ದಾಸೋಹ ಕಾರ್ಯ ನಡೆಯಲಿದೆ. ಈ ವೇಳೆ ಭಕ್ತರ ಹಾಗೂ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಹಾರ ಸುರಕ್ಷತಾ ಅಧಿಕಾರಿಗಳಿಂದ ಉಪಹಾರ ಪರಿಶೀಲಿಸಿ ನಂತರ ಭಕ್ತರಿಗೆ ವಿತರಣೆ ಮಾಡಬೇಕು.

ಹಂಪಿ ವಿರೂಪಾಕ್ಷ ದೇವಸ್ಥಾನದ ದರ್ಶನಕ್ಕೆ ಬರುವ ಭಕ್ತರಿಗೆ ಹೊಳೆಯಲ್ಲಿ ಸ್ನಾನ ಮಾಡಿದ ನಂತರ ಅವರಿಗೆ ಬಟ್ಟೆ ಬದಲಿಸಲು ಅನುಕೂಲವಾಗುವಂತೆ ತಾತ್ಕಾಲಿಕ ಶೆಡ್ (ಟೆಂಟ್) ನಿರ್ಮಿಸಬೇಕು. ಭಕ್ತಾಧಿಗಳು ಸ್ನಾನ ಮಾಡುವ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಪರಿಣಿತ ಈಜುಗಾರರನ್ನು ಲೈಫ್ ಜಾಕೆಟ್ ನಂತಹ ಅಗತ್ಯ ಸೌಕರ್ಯಗಳೊಂದಿಗೆ ನಿಯೋಜಿಸಬೇಕು. ಹವಾಮಾವತಿಯಿಂದ ಸಾರ್ವಜನಿಕರು, ಭಕ್ತರು ತ್ಯಜಿಸಿದ ಬಟ್ಟೆಗಳನ್ನು ಒಂದೆಡೆ ಹಾಕಲು ಪವಿತ್ರ ಕುಂಡ ಸ್ಥಾಪಿಸಲಾಗಿದ್ದು, ಭಕ್ತರು ಸಾರ್ವಜನಿಕರು ತಮ್ಮ ಬಟ್ಟೆಗಳನ್ನು ಎಲ್ಲಂದರಲ್ಲಿ ಎಸೆಯದೆ ಪವಿತ್ರ ಕುಂಡದಲ್ಲಿ ಹಾಕಬೇಕು ಎಂದು ತಿಳಿಸಿದರು.

# ರಾಜ್ಯ ಗಾಣಿಗ ನಿಗಮಕ್ಕೆ ಮಾಜಿ ಮೇಯರ್ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ರಾಜ್ಯ ಗಾಣಿಗ ನಿಗಮಕ್ಕೆ ಪ್ರಪ್ರಥಮ ಅಧ್ಯಕ್ಷರಾಗಿ ಆಯ್ಕೆಯಾದ ಮಾಜಿ ಮೇಯರ್ ಆನಂತುರನ್ನು ಗಾಣಿಗಸಮುದಾಯದವತಿಯಿಂದಗೌರವಿಸಲಾಯಿತು.

ಖಾಸಗಿ ಹೋಟೆಲ್‌ನಲ್ಲಿ ನಡೆದ ಸನ್ಮಾನ ಕಾರ್ಯಕ್ರಮದಲ್ಲಿ ಗೌರವ ಸ್ವೀಕರಿಸಿ ಮಾತನಾಡಿದ ನೂತನ ಅಧ್ಯಕ್ಷ ಆನಂತು ಸಣ್ಣ ಜನಾಂಗದಲ್ಲಿ ಹುಟ್ಟಿದ ನನನ್ನು ಗುರುತಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಹಿಂದೆ ಮೈಸೂರು ನಗರಪಾಲಿಕೆ ಮೇಯರ್ ಆಗಿ ಮಾಡಿದರು. ಈಗಲೂ ಮತ್ತೆ ಗಾಣಿಗ ನಿಗಮಕ್ಕೆ ರಾಜ್ಯ ಅಧ್ಯಕ್ಷರಾಗಿ ಆಯ್ಕೆ ಮಾಡಿರುವುದು ಮುಖ್ಯಮಂತ್ರಿಗಳಿಗೆ ಸಣ್ಣ-ಪುಟ್ಟ ಸಮಾಜಗಳ ಮೇಲಿನ ಕಾಳಜಿ ಕಾಣಬಹುದಾಗಿದೆ.

ನಾನು ಪ್ರಥಮವಾಗಿ ಎರಡು ಬಾರಿ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಅಭ್ಯರ್ಥಿಯಾಗಿದ್ದ ವೇಳೆ ಹಣವಿಲ್ಲದೆ ಚುನಾವಣೆಯಲ್ಲಿ ಜನರೆ ನನ್ನನ್ನು ಗೆಲ್ಲಿಸಿದ್ದರು. ಮತ್ತೆ 3ನೇ ಬಾರಿಗೆ ಆಯ್ಕೆಯಾದ ಸಂದರ್ಭದಲ್ಲಿ ನನ್ನ ಹತ್ತಿರ ಹಣವಿಲ್ಲದೆ ಇದ್ದಾಗ ಸಿದ್ದರಾಮಯ್ಯನವರು 25ಸಾವಿರ ಹಣ ನೀಡಿ ಚುನಾವಣೆಯಲ್ಲಿ ಜಯಶೀಲನಾಗಲು ಕಾರಣ-ರಾಗಿದ್ದರು. ನನ್ನ ಸುದೀರ್ಘ ರಾಜಕೀಯದಲ್ಲಿ ಚುನಾವಣೆಗೆ ಖರ್ಚು ಮಾಡಿದ್ದು ಕೇವಲ 25 ಸಾವಿರ ರೂಗಳಷ್ಟೆ, ಆದರೆ ಈಗ ಚುನಾವಣೆಯಲ್ಲಿ ಹಣ ಇಲ್ಲದವರ ಹೆಸರನ್ನು ಹೇಳುವುದೇ ಕಷ್ಟ, ಹಣವಿಲ್ಲದೆ ಈಗಿನ ಚುನಾವಣೆಗಳಲ್ಲಿ ಗೆಲುವುದಂತೂ ಕನಸಿನ ಮಾತಾಗಿದೆ, ಗಾಣಿಗ ಸಮುದಾಯ ಶೈಕ್ಷಣಿಕವಾಗಿ, ಅರ್ಥಿಕ, ರಾಜಕೀಯವಾಗಿ ಹಿಂದುಳಿದಿದ್ದು ಅಭಿವೃದ್ಧಿಯಾಗಬೇಕಿದೆ. ಅದಕ್ಕಾಗಿ ಜನಾಂಗದ ಎಲ್ಲರ ವಿಶ್ವಾಸ, ಸಹಕಾರ ಪಡೆದು ಜನಾಂಗದ ಅಭಿವೃದ್ದಿಗಾಗಿ ಶ್ರಮಿಸುವೆನೆಂದು ಹೇಳಿ, ನನ್ನನ್ನು ಗುರ್ತಿಸಿ ನಿಗಮಕ್ಕೆ ಅಧ್ಯಕ್ಷರನ್ನಾಗಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷಡಿ.ಕೆ.ಶಿವಕುಮಾರ್‌ರನ್ನು ಅಭಿನಂದಿಸುವುದಾಗಿ ತಿಳಿಸಿದರು.

ನಿವೃತ್ತಡಿ.ಡಿ.ಪಿ.ಐ.ಬಸವರಾಜು ಮಾತನಾಡಿ, ಸೌಮ್ಯ ಸ್ವಭಾವದ ಆನಂತುರವರು ತಮ್ಮ ಜನಸೇವೆಯಿಂದಲೇ ಗುರುತಿಸಿಕೊಂಡವರು. ತಮ್ಮ ಮನೆ ಬಾಗಿಲಿಗೆ ಕೆಲಸ ಕೇಳಿ ಬಂದವರನ್ನು ಎಂದೂ ವಾಪಸ್ ಕಳಿಸಿದ ಉದಾಹರಣೆಗಳಿಲ್ಲಾ, ಸಿದ್ದರಾಮಯ್ಯನವರ ಬಳಗದಲ್ಲಿ ಗುರುತಿಸಿಕೊಂಡು ಅವರ ಜೊತೆಗೆ ಒಬ್ಬ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಮಾಡುತ್ತ ಬಂದ ಇವರನ್ನು ಮೇಯರ್ ಮಾಡಿದ್ದು ಬಿಟ್ಟರೆ, ಈ ಬಾಗದಲ್ಲಿ ಜನಾಂಗದವರಿಗೆ ಉನ್ನತ ಸ್ಥಾನ ದಕ್ಕಿರಲಿಲ್ಲಾ. ಇದೀಗ ರಾಜ್ಯ ನಿಗಮದ ಅಧ್ಯಕ್ಷರಾಗಿ ನೇಮಿಸಿದ್ದು, ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ರಾಜ್ಯಾಧ್ಯಕ್ಷರಾದ ಡಿ.ಕೆಶಿವಕುಮಾರನ್ನು ಅಭಿನಂದಿಸುವುದಾಗಿ ತಿಳಿಸಿದರು.

ರಾಜ್ಯ ಗಾಣಿಗರ ಸಂಘದ ನಿರ್ದೇಶಕ ಡಾ.ಯೋಗೀಶ್ ಮಾತನಾಡಿ ನಿಗಮ ಸ್ಥಾಪಿಸಿ ಸಣ್ಣಪುಟ್ಟಸಮುದಾಯಗಳಿಗೆ ಸಿದ್ದರಾಮಯ್ಯನವರು ಶಕ್ತಿ ತುಂಬಿದ್ದಾರೆ. ನಿಗಮದಲ್ಲಿ ಕೌಶಲ್ಯ ತರಬೇತಿ ಪಡೆದವರಿಗೆ ಆರ್ಥಿಕ ನೆರವು, ಉನ್ನತ ವ್ಯಾಸಂಗಕ್ಕೆ ಮಾರ್ಗದರ್ಶನ, ನೆರವು ಸಿಗಲಿದ್ದು, ಬಳಸಿಕೊಳ್ಳಿರೆಂದರು.

ರಾಜ್ಯ ಗಾಣಿಗರ ಸಂಘದ ಉಪಾಧ್ಯಕ್ಷ ಚನ್ನಕೇಶವಶೆಟ್ಟಿ, ನಿವೃತ್ತ ಪ್ರಾಂಶುಪಾಲ ಪುಟ್ಟಶೆಟ್ಟಿ, ಬಿಜೆಪಿ ಪ್ರಧಾನಕಾರ್ಯದರ್ಶಿ ಸತೀಶ್, ಗ್ರಾ.ಪಂ. ಅಧ್ಯಕ್ಷ ವಿ.ಮಹದೇವ್, ಸದಸ್ಯ ಮನುಕುಮಾರ್ ಮಾತನಾಡಿದರು.

ಈ ವೇಳೆ ಮೈಸೂರು ಜಿಲ್ಲಾ ಗಾಣಿಗರ ಒಕ್ಕೂಟದ ಅಧ್ಯಕ್ಷ ವಿಜಯಕುಮಾರ್, ಮೈಸೂರು ಗಾಣಿಗರ ವಸತಿ ನಿಲಯದ ಅಧ್ಯಕ್ಷ ಪಾರ್ಥಸಾರಥಿ, ಮಂಡ್ಯ ಜಿಲ್ಲಾ ಗಾಣಿಗರ ಸಂಘದ ಅಧ್ಯಕ್ಷ ಶಿವಕುಮಾರ್, ನಂಜನಗೂಡು ತಾಲೂಕು ಅಧ್ಯಕ್ಷ ಮಾದಶೆಟ್ಟಿ, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಬಾಬು, ರಾಜ್ಯ ಮಟ್ಟದ ಕ್ರೀಡಾಪಟು ಯೋಗೇಶ್, ಗ್ರಾ.ಪಂ.ಸದಸ್ಯರಾದ ಗೌರಿಪುರಗೋವಿಂದಶೆಟ್ಟಿ, ತರಿಕಲ್‌ನಾಗರಾಜ್, ಧರ್ಮಾಪುರ ಸುರೇಶ್, ಮುಖಂಡರಾದ ರಘು, ಪ್ರಸಾದ್, ಶಿವಸ್ವಾಮಿ, ವೆಂಕಟೇಶ್, ನಾಗರಾಜ್, ನಂದಕುಮಾರ್ ಮತ್ತಿತರರಿದ್ದರು.

# ಗ್ಯಾಸ್ ಸಿಲಿಂಡರ್ ಸಮಸ್ಯೆ ಬೆಲೆ ಹೆಚ್ಚಳದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೊಲ್ಲಿ ಯುದ್ದದ ಹಿನ್ನಲೆಯಲ್ಲಿ ದೇಶದಲ್ಲಿಗ್ಯಾಸ್ ಸಿಲಿಂಡರ್ ಸಿಗದೇ ಜನರು ಕಂಗಾಲಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಸಿಲಿಂಡರ್ ದರ ಏರಿಕೆ ಮಾಡಿರೋದು ಗಾಯದ ಮೇಲೆ ಬರೆ ಎಳೆದಂತಾಗಿದೆಂದು. ಕೇಂದ್ರದ ಬಿಜೆಪಿ ನೇತೃತ್ವದ ಎನ್ ಡಿ ಎ ಸರ್ಕಾರದ ವಿರುದ್ಧ ನಗರದಲ್ಲಿ ಕಾಂಗ್ರೆಸ್ ಇಂದು ಪ್ರತಿಭಟನೆ ನಡೆಸಿತು.

ನಗರದ ಗಡಗಿ ಚೆನ್ನಪ್ಪವೃತ್ತದಲ್ಲಿ ನ್ರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ಸೇರಿದ ಪಕ್ಷದ ಮುಖಂಡರು, ಕಾರ್ಯಕರ್ತರು ಸಿಲಿಂಡರ್ ದರವನ್ನು ಹೆಚ್ಚಿಸಿರುವುದನ್ನು ಖಂಡಿಸಿ ಬಿಜೆಪಿ ವಿರುದ್ದ ಘೋಷಣೆ ಕೂಗಿದರು. ಒಲೆ ಮೇಲೆ ಮಾಡಿದ ಟೀಯನ್ನು ಜನರಿಗೆ ಹಂಚುವ ಮೂಲಕ ವ್ಯಂಗ್ಯ ಪ್ರದರ್ಶಿಸಿದರು.

ಸರ್ಕಲ್ ನಲ್ಲಿ ಕಟ್ಟಿಗೆ ಹೊಲೆ ಮೇಲೆ ಟೀ ಮಾಡಿ ಅಕ್ರೋಶ ವ್ಯಕ್ತಪಡಿಸಿದರು. ಕಮರ್ಷಿಯಲ್ ಸಿಲಿಂಡರ್ ಕೊರತೆ ನೀಗಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಕೇಂದ್ರದನಿಲುವಿನಿಂದಜನಸಾಮಾನ್ಯರು ಪರದಾಡುವಂತಾಗಿದೆ ಎಂದು ಮುಖಂಡರು ಹೇಳಿದರು.

ಪ್ರತಿಭಟನೆಯಲ್ಲಿ ಮೇಯರ್ ಗಾದೆಪ್ಪ, ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಹೆಚ್.ಸಿದ್ದೇಶ್, ಮಂಜುಳಾ ಮೊದಲಾದವರು ಇದ್ದರು.

# ಆರೋಗ್ಯ ವಿಶ್ವ ವಿದ್ಯಾಲಯ ರಾಮನಗರಕ್ಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಧ್ಯ ಬೆಂಗಳೂರಿನಲ್ಲಿದ್ದು. ಆರೋಗ್ಯಕ್ಕೆ ಸಂಬಂಧಿಸಿದ 1500 ಕ್ಕೂ ಹೆಚ್ಚು ಕಾಲೇಜುಗಳನ್ನು ಹೊಂದಿರುವ ರಾಜೀವ್ ಗಾಂಧಿ ಆರೋಗ್ಯ ವಿವಿಯನ್ನು ಈ ವರ್ಷ ರಾಮನಗರದಲ್ಲಿನ 216 ಎಕರೆಯ ಕ್ಯಾಂಪಸ್ ಗೆ ಸ್ಥಾಳಂತರಿಸಲಿದೆ ಎಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಭಗವಾನ್ ಬಿ.ಸಿ, ಹೇಳಿದರು.ನಗರದಲ್ಲಿಂದು ಸುದ್ದಿಗೋಷ್ಟಿ ನಡೆಸಿದ ಅವರು. ದೇಶದಲ್ಲಿ. ಡ್ರಗ್ಸ್ ಹಾವಳಿ ಹೆಚ್ಚಿರುವುದರಿಂದ ನಶ ಮುಕ್ತ ಭಾರತ ಅಭಿಯಾನ ಹಮ್ಮಿಕೊಂಡಿದ್ದು ಈಗಾಗಲೇ 16 ಜಿಲ್ಲೆಗಳಲ್ಲಿ ಕೈಗೊಂಡಿದೆ. ಬಳ್ಳಾರಿಯಲ್ಲಿ ಈ ಅಭಿಯಾನ ಯಶಸ್ವಿಯಾಗಿ ನಡೆದಿದೆ. ರಾಜ್ಯದ ಪ್ರತಿ ಕಾಲೇಜಿನಲ್ಲಿ ಕಾರ್ಯತಂಡ ರಚಿಸಿ ಡ್ರಗ್ಸ್ ಹಾವಳಿ ತಡೆಗೆ ಕಾರ್ಯಕ್ರಮ ರೂಪಿಸುತ್ತಿದೆಂದರು.

ಅಂಗಾಂಗದಾನದ ಬಗ್ಗೆ ಸಹ ಅರಿವು ಮೂಡಿಸುತ್ತಿದೆ. ರಾಜ್ಯದಲ್ಲಿ 58 ಸಾವಿರ ಜನ ಅಂಗಾಂಗದಾನಕ್ಕೆ ನೋಂದಣಿ ಮಾಡಿದ್ದಾರೆ. ಹೆಚ್ಚಿಸಬೇಕು ಎಂದು ಜಾಗೃತಿ ಕಾರ್ಯ ಹೆಚ್ಚಿಸಿದೆ. ನೋಂದಣಿ ಮಾಡಿದ ತಕ್ಷಣ ಅಂಗಾಗ ನೀಡಬೇಕಿಲ್ಲ. ದೇಹನಿಷ್ಕ್ರಿಯೆಯಾದಾಗ ಪಡೆಯಲಿದೆಂದರು. ಈ ವರೆಗೆ ಕುರಿತ ನಡೆದ ವಾಕಥಾನ್ ನಲ್ಲಿ 85 ಸಾವಿರ ಜನ ಪಾಲ್ಗೊಂಡಿದ್ದಾರೆ.

ರಾಜ್ಯದ 25 ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ಭೋದನಾ ಸಿಬ್ಬಂದಿ ಸಮಸ್ಯೆ ಇದೆ ಈ ಬಗ್ಗೆ ತುಂಬಲು ಸರ್ಕಾರದ ಗಮನಕ್ಕೆ ತಂದಿದೆಂದು ತಿಳಿಸಿದರು.

# ಅಭಿಲಾಶ್, ಅವಿನಾಶ್ ನಾಯ್ಡು ನೇಮಕಕ್ಕೆ ಅದ್ದುರಿ ಸ್ವಾಗತ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಭಾರತೀಯಜನತಾಪಾರ್ಟಿಯಬಳ್ಳಾರಿ ಜಿಲ್ಲಾ ಕೌಲ್ ಬಜಾರ್ ಮಂಡಲದಲ್ಲಿ ನಡೆದ ಹೊಸ ನೇಮಕಾತಿಗಳು ಪಕ್ಷದ ಸಂಘಟನೆಗೆ ಹೊಸ ಚೈತನ್ಯ ತುಂಬುವಂತಾಗಿದ್ದು, ವಿಶೇಷವಾಗಿ ಖಜಾಂಚಿಯಾಗಿ ಆಯ್ಕೆಯಾದ ಜಿ. ಅಭಿಲಾಶ್ ನಾಯ್ಡು ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ನೇಮಕಗೊಂಡ ಜಿ. ಅವಿನಾಶ್ ನಾಯ್ಡು ಅವರ ನೇಮಕಕ್ಕೆ ಕಾರ್ಯಕರ್ತರು ವೈಭವಿಕವಾಗಿ ಸ್ವಾಗತ ಕೋರಿದ್ದಾರೆ.

ಮಂಡಲ ಅಧ್ಯಕ್ಷ ಎ.ನಾಗರಾಜ ರೆಡ್ಡಿ ಅವರು ಹೊರಡಿಸಿದ ಆದೇಶದಂತೆ ಮಂಡಲ ಮತ್ತು 7 ಮೋರ್ಚಾಗಳಿಗೆ ವಿವಿಧ ಹುದ್ದೆಗಳಿಗೆ ಕಾರ್ಯಕರ್ತರನ್ನು ನೇಮಕ ಮಾಡಲಾಗಿದ್ದು, ಈ ನೇಮಕಾತಿಗಳ ಮೂಲಕ ತಳಮಟ್ಟದಿಂದ ಸಂಘಟನೆಯನ್ನು ಬಲಪಡಿಸುವ ಮಹತ್ವದ ಹೆಜ್ಜೆ ಇಡಲಾಗಿದೆ.

ಪಕ್ಷದ ಚಟುವಟಿಕೆಗಳನ್ನು ಇನ್ನಷ್ಟು ವಿಸ್ತರಿಸುವ ಉದ್ದೇಶದಿಂದ ಕೈಗೊಂಡ ಈ ಕ್ರಮದಲ್ಲಿ ಮಹಿಳಾ ಮೋರ್ಚಾ ಅಧ್ಯಕ್ಷೆಯಾಗಿ ಲತಾ, ಎಸ್.ಸಿ ಮೋರ್ಚಾ ಅಧ್ಯಕ್ಷರಾಗಿ ಸುಂಕಣ್ಣ, ಎಸ್.ಟಿ ಮೋರ್ಚಾ ಅಧ್ಯಕ್ಷರಾಗಿ ರಾಜಶೇಖರ್, ಒಬಿಸಿ ಮೋರ್ಚಾ ಅಧ್ಯಕ್ಷರಾಗಿ ಆರ್. ಶೇಖಣ್ಣ, ರೈತ ಮೋರ್ಚಾ ಅಧ್ಯಕ್ಷರಾಗಿ ವೆಂಕಟೇಶ್, ಯುವ ಮೋರ್ಚಾ ಅಧ್ಯಕ್ಷರಾಗಿ ಬಟ್ಟಿ ಗಾದಿಲಿಂಗ ಹಾಗೂ ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷರಾಗಿ ಮೊಹಮ್ಮದ್ ಗೌಸ್ ಅವರನ್ನು ನೇಮಕ ಮಾಡಲಾಗಿದೆ.

ಇದರ ಜೊತೆಗೆ ಮಂಡಲದ ಪ್ರಮುಖ ಹುದ್ದೆಗಳಿಗೂ ನೇಮಕಾತಿ ನಡೆಯಿದ್ದು, ಎ. ನಾಗರಾಜ ರೆಡ್ಡಿ ಅಧ್ಯಕ್ಷರಾಗಿ ಮುಂದುವರಿದಿದ್ದಾರೆ. ಉಪಾಧ್ಯಕ್ಷರಾಗಿ ಕೊಂಡಿ ಮಲ್ಲಿಕಾರ್ಜುನ, ವೆಂಕಟೇಶ್ ಗುರುರಾಜ್, ರಾಮಚಂದ್ರ, ಹನುಮಂತ ರಾವ್ ಹಾಗೂ ಮೊಹಮ್ಮದ್ ಖದಿರ್

“ಖಜಾಂಚಿಯಾಗಿ ಆಯ್ಕೆಯಾದ ಜಿ. ಅಭಿಲಾಶ್ ನಾಯ್ಡು ಅವರು ಮಾಧ್ಯಮಗಳೊಂದಿಗೆ ಮಾತನಾಡಿ ಪಕ್ಷವು ನನ್ನ ಮೇಲೆ ಇಟ್ಟಿರುವ ನಂಬಿಕೆಗೆ ನಾನು ಕೃತಜ್ಞನಾಗಿದ್ದೇನೆ. ಮಂಡಲ ಮಟ್ಟದಲ್ಲಿ ಹಣಕಾಸಿನ ವ್ಯವಸ್ಥೆಯನ್ನು ಪಾರದರ್ಶಕವಾಗಿ ನಿರ್ವಹಿಸಿ, ಸಂಘಟನೆಯ ಬಲವರ್ಧನೆಗೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ. ಕಾರ್ಯಕರ್ತರೊಂದಿಗೆ ಸಮನ್ವಯ ಸಾಧಿಸಿ, ಪಕ್ಷದ ಚಟುವಟಿಕೆಗಳಿಗೆ ಶಕ್ತಿ ತುಂಬುವುದು ನನ್ನ ಮುಖ್ಯ ಗುರಿ” ಎಂದು ಹೇಳಿದರು.

**ಅಭಿಲಾಶ್ ನಾಯ್ಡು**

“ಪ್ರಧಾನ ಕಾರ್ಯದರ್ಶಿಯಾಗಿ ನೇಮಕಗೊಂಡ ಜಿ. ಅವಿನಾಶ್ ನಾಯ್ಡು ಅವರು ಮಾತನಾಡಿ, ಬಿಜೆಪಿ ಸಂಘಟನೆಗೆ ತಳಮಟ್ಟದಿಂದ ಬಲ ತುಂಬುವ ನಿಟ್ಟಿನಲ್ಲಿ ನನ್ನ ಸಂಪೂರ್ಣ ಶ್ರಮವನ್ನು ಹರಿಸುತ್ತೇನೆ. ಗ್ರಾಮಾಂತರ ಪ್ರದೇಶಗಳಲ್ಲಿ ಪಕ್ಷದ ತತ್ವಸಿದ್ಧಾಂತಗಳನ್ನು ತಲುಪಿಸುವ ಜೊತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳನ್ನು ಜನರಿಗೆ ಪರಿಚಯಿಸುವ ಕೆಲಸಕ್ಕೆ ಆದ್ಯತೆ ನೀಡಲಾಗುತ್ತದೆ. ಯುವಕರು ಮತ್ತು ಹೊಸ ಕಾರ್ಯಕರ್ತರನ್ನು ಸಂಘಟನೆಯಲ್ಲಿ ಸಕ್ರಿಯಗೊಳಿಸುವುದು ನಮ್ಮ ಪ್ರಮುಖ ಗುರಿಯಾಗಿರುತ್ತದೆ” ಎಂದು ತಿಳಿಸಿದರು.

**ಅವಿನಾಶ್ ನಾಯ್ಡು**

ಅವರನ್ನು ನೇಮಕ ಮಾಡಲಾಗಿದೆ. ಎಂ.ಪಿ. ರಾಜೇಶ್ ಹಾಗೂ ಜಿ. ಅವಿನಾಶ್ ನಾಯ್ಡು ಪ್ರಧಾನ ಕಾರ್ಯದರ್ಶಿಗಳಾಗಿ, ಮೂರ್ತಿ, ವಿ. ಶ್ರೀಧರ್, ಯೇಸು, ನೀಲಕಂಠ ಆಚಾರ್ಯ, ಮಲ್ಲೇಶ್ ಹಾಗೂ ಅನ್ನಕ್ಲರ ಕಾರ್ಯದರ್ಶಿಗಳಾಗಿ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಕಾರ್ಯಕರ್ತರ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಹೊಸದಾಗಿ ನೇಮಕಗೊಂಡ ಎಲ್ಲ ಪದಾಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಜನಸಂಪರ್ಕ ಚಟುವಟಿಕೆಗಳನ್ನು ಹೆಚ್ಚಿಸಿ, ಸಂಘಟನೆಯನ್ನು ಇನ್ನಷ್ಟು ಬಲಪಡಿಸಲು ಮುಂದಾಗಬೇಕು ಎಂದು ಮಂಡಲ ಅಧ್ಯಕ್ಷ ಎ. ನಾಗರಾಜ ರೆಡ್ಡಿ ಸೂಚಿಸಿದ್ದಾರೆ.

ಗ್ರಾಮಾಂತರ ಪ್ರದೇಶಗಳಲ್ಲಿ ಪಕ್ಷದ ಚಟುವಟಿಕೆಗಳನ್ನು ವಿಸ್ತರಿಸುವ ಉದ್ದೇಶದಿಂದ ಬಿಜೆಪಿ ವಿವಿಧ ಮೋರ್ಚಾಗಳನ್ನು ಸಕ್ರಿಯಗೊಳಿಸುವ ಕಾರ್ಯ ಮುಂದುವರೆದಿದ್ದು, ಈ ನೇಮಕಾತಿಗಳ ಮೂಲಕ ಕೌಲ್ ಬಜಾರ್ ಮಂಡಲದಲ್ಲಿ ಸಂಘಟನೆಗೆ ಹೊಸ ಉತ್ಸಾಹ ಸಿಗಲಿದೆ ಎಂದು ಕಾರ್ಯಕರ್ತರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಉಚಿತ ತರಬೇತಿ ಅರ್ಹರಿಂದ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖರು ಮತ್ತು ಪಾರ್ಸಿ ಅಭ್ಯರ್ಥಿಗಳಿಗೆ ಪಿ.ಯು.ಸಿ ಶಿಕ್ಷಣದೊಂದಿಗೆ ಎರಡು ವರ್ಷಗಳ ಎನ್ಇಇಟಿ, ಜೆಇಇ,ಕೆ–ಸಿಇಟಿ,ಐಸಿಎಆರ್,ಸಿಎ–ಫೌಂಡೇಶನ್,ಸಿಎಲ್ ಎಟಿ,ಸಿಯುಇಟಿ ಪರೀಕ್ಷಾ ಪೂರ್ವ ಉಚಿತ ತರಬೇತಿಗಾಗಿ ಆನ್‌ಲೈನ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಾಲತಾಣ https://dom.karnataka.gov.iಟಿ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಮಾರ್ಚ್.31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗೆ ವಿಜಯಪುರ ಉಪ ವಿಭಾಗದ ತಾಲೂಕು ವಿಸ್ತರಣಾಧಿಕಾರಿಗಳ ಮೊ:8970704986, ಇಂಡಿ ಉಪ ವಿಭಾಗದ ತಾಲೂಕು ವಿಸ್ತರಣಾಧಿಕಾರಿಗಳ ಮೊ:9900229780, ವಿಜಯಪುರ ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ:8123710766, ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಾದ ಬ.ಬಾಗೇವಾಡಿ ಮೊ:9972340721, ಮುದ್ದೇಬುಹಾಳ ಮೊ:8722445552, ಇಂಡಿ ಮೊ:9900109759 ಹಾಗೂ ಸಿಂದಗಿ ಮೊ:9035558609 ಅದರಂತೆ ಅರಕೇರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಶಾಲೆಯ ಪ್ರಾಂಶುಪಾಲರಾದ ಮಲ್ಲಿಕಾರ್ಜುನ ಹುಬ್ಬಳ್ಳಿ ಮೊ: 9620828185, ಹಾಲಹಳ್ಳಿ ಮತ್ತು ಇಂಡಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ರವಿಚಂದ್ರ ಕಾಂಬಳೆ ಮೊ:7892371709, ಸಿಂದಗಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ಸಿದ್ದಪ್ಪ ಕಾರಿಮುಂಗಿ ಮೊ:9980952960, ಮುದ್ದೇಬಿಹಾಳ ನಂ–1 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ರಮೇಶ ಪಾಟೀಲ ಮೊ:9844493306, ಮುದ್ದೇಬಿಹಾಳ ನಂ–2 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ಖೇಮು ರಾಠೋಡ ಮೊ:7259179398, ವಿಜಯಪುರದ ಅಫಜಲಪುರ ಟಕ್ಕೆ ಸರ್ಕಾರಿ ಮುಸ್ಲಿಂ ವಸತಿ ಶಾಲೆಯ ಪ್ರಾಂಶುಪಾಲರಾದ ಸಿದ್ರಾಮ ಎಂಟೆತ್ತ ಮೊ:9880103122, ಅರಕೇರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಶಾಲೆಯ ಪ್ರಾಂಶುಪಾಲರಾದ ಸಂಗಣ್ಣ ಆಲಗೂರ ಮೊ:9591612073 ಇವರನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ...

# ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜಿಲ್ಲೆಯ 137 ಪರೀಕ್ಷಾ ಕೇಂದ್ರಗಳಲ್ಲಿ ಬುಧವಾರ ಪ್ರಥಮ ಭಾಷೆ ಪರೀಕ್ಷೆ ನಡೆಯಿತು. ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ನಗರದ ಶಾಂತಿನಿಕೇತನ ಹಾಗೂ ಲೋಯೆಲಾ ಶಾಲೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ವಿದ್ಯಾರ್ಥಿಗಳು ಯಾವುದೇ ರೀತಿಯ ಗೊಂದಲ ಮಾಡಿಕೊಳ್ಳದೇ, ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯುವಂತೆ ಇದೇ ವೇಳೆ ಆತ್ಮಸ್ಥೈರ್ಯ ತುಂಬಿದರು.

ಪರೀಕ್ಷೆಗಳನ್ನು ಅತ್ಯಂತ ಕಟ್ಟುನಿಟ್ಟಾಗಿ ನಿರ್ವಹಿಸಬೇಕು. ಪರೀಕ್ಷೆಗಳು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಮಹತ್ವದ ಘಟ್ಟವಾಗಿರುವುದರಿಂದ ಪರೀಕ್ಷಾ ಸಂದರ್ಭದಲ್ಲಿ ಯಾವುದೇ ಸಮಸ್ಯೆಗಳು ಬಾರದಂತೆ ಎಚ್ಚರಿಕೆ ವಹಿಸಬೇಕು. ಯಾವುದೇ ದೂರಿಗೆ ಆಸ್ಪದೆ ನೀಡದೇ ಪರೀಕ್ಷಾ ನಿಯಮಗಳನ್ನುನಸರಿಸಿ, ಪರೀಕ್ಷೆಗೆ ನಿಯೋಜಿತ ಅಧಿಕಾರಿ, ಸಿಬ್ಬಂದಿ ತಮಗೆ ವಹಿಸಿದ ಪರೀಕ್ಷಾ ಕಾರ್ಯಗಳನ್ನು ಅತ್ಯಂತ ಜವಾಬ್ದಾರಿಯಿಂದ ಹಾಗೂ ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದರು.

ವೆಬ್ ಕಾಸ್ಟಿಂಗ್ ಕೇಂದ್ರದಲ್ಲಿ ಅಳವಡಿಸಿರುವ ಗಣಕಯಂತ್ರಗಳು, ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಲ್ಲಿ ನಡೆಯುತ್ತಿರುವ ಪರೀಕ್ಷಾ ಕೇಂದ್ರಗಳ ವ್ಯವಸ್ಥೆಗಳು ಮತ್ತು ಇಂಟರ್ನೆಟ್ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಯಾವುದೇ ತಾಂತ್ರಿಕ ಸಮಸ್ಯೆಗಳು ಉಂಟಾಗದಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಯಾವುದೇ ಸಿಸಿಟಿವಿ ಸ್ಥಗಿತಗೊಳ್ಳದಂತೆ ನಿಗಾ ವಹಿಸಬೇಕು ಎಂದರು.

ಈ ಸಂದರ್ಭ ವೈದ್ಯಕೀಯ ವ್ಯವಸ್ಥೆಯ ಕುರಿತು ಪರಿಶೀಲಿಸಿದರು.

ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಭಯ ಮುಕ್ತರಾಗಿ ಧೈರ್ಯದಿಂದ ಪರೀಕ್ಷೆಯನ್ನು ಬರೆಯುವಂತೆ ಕ್ರಮ ವಹಿಸಬೇಕು ಎಂದು ಪರೀಕ್ಷಾ ಮೇಲ್ವಿಚಾರಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಹಾಜರಾತಿ, ಪರೀಕ್ಷಾ ಕೇಂದ್ರಗಳ ಕೊಠಡಿಗಳ ಮಾಹಿತಿ, ವಿದ್ಯಾರ್ಥಿಗಳಿಗೆ ಕಲ್ಪಿಸಿರುವ ಆಸನ ವ್ಯವಸ್ಥೆ, ಪರೀಕ್ಷಾ ಕೇಂದ್ರದಲ್ಲಿ ಮೂಲಭೂತ ಸೌಲಭ್ಯ, ಪರೀಕ್ಷಾ ಕೇಂದ್ರದಲ್ಲಿ ಅಳವಡಿಸಿರುವ ಸಿ.ಸಿ.ಟಿ.ವಿ ಮತ್ತು ವೆಬ್‌ಕಾಸ್ಟಿಂಗ್ ಪ್ರಕ್ರಿಯೆಯನ್ನು ಪರಿಶೀಲಿಸಿದರು. ಪರೀಕ್ಷಾ ಕೇಂದ್ರಗಳಿಗೆ ಪೋಲೀಸ್ ಭದ್ರತಾ ವ್ಯವಸ್ಥೆ ಕುರಿತು ಪರಿಶೀಲಿಸಿದರು. ಈ ಸಂದರ್ಭ ಪರೀಕ್ಷೆಗೆ ನಿಯೋಜಿತ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಯುವ ಶಕ್ತಿ ನಶಮುಕ್ತರಾಗಿ : ಥಾವರಚಂದ್ ಗೆಹ್ಲೋಟ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ನಗರದ ಬಳ್ಳಾರಿ ಮೆಡಿಕಲ್ ಕಾಲೇಜು ಮೈದಾನದಲ್ಲಿ ಇಂದು ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡ ಬಳ್ಳಾರಿ–ವಿಜಯನಗರ ಜಿಲ್ಲೆಯ ಕಾಲೇಜುಗಳು, ದಿಶಾಭೋದ್ ಫೌಂಡೇಶನ್ ಹಾಗು ನಾರ್ಕೋಟಿಕ್ ಕಂಟ್ರೋಲ್ ಬ್ಯೂರೋದ ಸಹಯೋಗದೊಂದಿಗೆ ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್ ಮತ್ತು ಮಾನವ ಅಂಗಾಂಗ ದಾನದ ಜಾಗೃತಿ ವಾಕಥಾನ್ ಕಾರ್ಯಕ್ರಮ ಹಮ್ಮಿಕೊಂಡಿತ್ತು. ನಡೆಯಿತು.

ಬಾವುಟ ತೋರಿಸಿ, ಬೆಲು 7ನ್ ಹಾರಿಬಿಡುವ ಮೂಲಕ ವಾಕಥಾನ್ ಗೆ ಚಾಲನೆ ನೀಡಿದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ ಅವರು, ಭಾರತ ವಿಶ್ವದ ಗಮನ ಸೆಳೆಯುವ ದೇಶವಾಗಿದ್ದು ಇದರಲ್ಲಿ ಕರ್ನಾಟಕ ಉತ್ತಮ ಸಂಸ್ಕೃತಿಯ ನಾಡಾಗಿದ್ದು. ಇಲ್ಲಿ ಶಿಕ್ಷಣ, ಔದ್ಯೋಗಕದಿಂದ ಅಭಿವೃದ್ಧಿ ಹೊಂದುತ್ತಿದ್ದು. ವಿಕಸತ ಭಾರತಕ್ಕೆ ಸಹಕಾರಿಯಾಗಿದೆ. ಯುವ ಶಕ್ತಿ ನಶಮುಕ್ತರಾಗಿ ರಾಷ್ಟ ನಿರ್ಮಾಣಕ್ಕೆ ಪೂರಕವಾಗಿ ಶ್ರಮಿಸಬೇಕು. ಮಾದಕ ವಸ್ತುಗಳು, ಮಾನಸಿಕವಾಗಿ, ಕೌಟುಂಬಿಕವಾಗಿ, ಸಾಮಾಜಿಕವಾಗಿ ಕೆಟ್ಟ ಪರಿಣಾಮ ಬೀರಲಿದೆ ಅದಕ್ಕಾಗಿ ನಶ ಮುಕ್ತ ಭಾರತ ಆಗಬೇಕು ಎಂದರು.

ಕಮ್ಮರಚೇಡು ಮಠದ ಕಲ್ಯಾಣ ಸ್ವಾಮಿ ಮಾತನಾಡಿ. ಉತ್ತಮ ಜಾಗೃತಿ ಮೂಡಿಸುವ ಕಾರಗಯ ಇದಾಗಿದೆ. ಆರೋಗ್ಯ ಭಾಗ್ಯ ಇಲ್ಲದೇ ಇದ್ದರೆ ಏನೂ ಮಾಡಲು ಆಗದು, ಉತ್ತಮ ಆಹಾರ ವಾಯು ದೊರೆಯುವುದೇ ಇರುವುದು ದುರಾದೃಷ್ಟಕರವಾಗಿದೆ. ವಿಜ್ಞಾನ ಬೆಳೆದಂತೆ ಅಜ್ಞಾನ, ಅಂದಾಕರವೂ ಹೆಚ್ಚಿದೆ. ರಕ್ತ, ದೇಹದಾನ ಶ್ರೇಷ್ಟ ನಾನು ನೇತ್ರದಾನ ಮಾಡಿದ್ದೇನೆ. ದೇಹದಾನ ಮಾಡಲು ಸಿದ್ದನಿದ್ದೇನೆ. ಆ ನಿಟ್ಟಿನಲ್ಲಿ ಯುವ ಜನತೆ ಮುಂದಾಗಬೇಕ ಎಂದರು.

ಬಳ್ಳಾರಿ ಪ್ರಾಂತದ ಕ್ರೈಸ್ತ ಧರ್ಮಗುರು ಬಿಷಪ್ ಹೆನ್ರಿಡಿ.ಸೋಜ ಅವರು ಮಾತನಾಡಿ, ಪ್ರೀತಿ ಗೌರವ ಇದ್ದರೆ ಮಾತ್ರ ನಶ ಮುಕ್ತ ಆಗಬಹುದು. ಅದಕ್ಕೆ ಕಾಲೇಜ್ ಕ್ಯಾಂಪಸ್ ಮಾತ್ರ ಅಲ್ಲ ಪ್ರತಿ ಕುಟುಂಬ, ನಗರ, ದೇಶ ಆಗಬೇಕು. ಕ್ರೈಸ್ತ ಪಾದ್ರಿಗಳು ಸಹ ಅಂಗಾಗ, ದೇಹ ದಾನ ಮಾಡಿದ್ದಾರೆ. ಇಂತಹ ಗುಣ ಎಲ್ಲರಲ್ಲೂ ಬರಲಿ ಎಂದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಭಗವಾನ್ ಬಿ.ಸಿ, ಪ್ರತಿಜ್ಞಾ ವಿಧಿ ಭೋದನೆ ಮಾಡಿ, ದೇಶದಲ್ಲಿಯೇ ಮೊದಲನೆಯದಾಗಿ ಈ ಲೈಬ್ರರಿ, ಅನ್ ಲೈನ್ ಟ್ರಾನ್ಸಮಿಷನ್ಸ್, ಪರೀಕ್ಷಗಳು ನಡೆಸುವ ಮೂಲಕ, ರಾಜೀವಗಾಂಧಿ ವಿವಿ ಮಾದರಿಯಾಗಿದೆ. 3.5 ಲಕ್ಷ ವಿದ್ಯಾರ್ಥಿಗಳನ್ನು, 30 ಸಾವಿರ ಸಿಬ್ಬಂದಿಯನ್ನು ಹೊಂದಿದೆ. ನಮ್ಮನ್ನು ಇತರೇ ವಿವಿಗಳು ಅನುಸರಿಸುತ್ತಿವೆ.

ಮಾದಕ ವಸ್ತುಗಳ ಬಳಕೆಯಿಂದ ಮೆದುಳು ನಿಷ್ಕ್ರಿಯತೆ, ಹೃದಯಘಾತ ಹೆಚ್ಚುತ್ತಿದೆ. ಯುವ ಸಮೂಹವನ್ನು ಹಾಳಯ ಮಾಡಲು ದುಷ್ಟ ಶಕ್ತಿಗಳು ಮಾದಕ ವ್ಯಸನಿಗಳನ್ನಾಗಿ ಮಾಡಲು ಹೊರಟಿವೆ. ಅದಕ್ಕಾಗಿ ನಾವು ಮಾದಕ ವಸ್ತುಗಳ ವಿರೋಧಿಗಳಾಗಬೇಕು. ನಮ್ಮ ವಿವಿಯ ಎಲ್ಲಾ ಕಾಲೇಜುಗಳ ಮಾದಕ ವಸ್ತುಗಳ ರಹಿತ ಕ್ಯಾಂಪಸ್ ಗಳಾಗಬೇಕು.

ಭಾರತದಲ್ಲಿ ವಾರ್ಷಿಕ ಅಂದಾಜು 3 ಲಕ್ಷ ಅಂಗಗಳು ರೋಗಿಗಳಿಗೆ ಬೇಕಾಗುತ್ತವೆ. ಆದರೆ 16 ರಿಂದ 17 ಸಾವಿರ ಮಾತ್ರ ಲಬವ್ಯ ಇವೆ. ಒಬ್ಬ ಮೃತ ದಾನಿಯು ಅಂಗಾಂಗ ದಾನದ ಮೂಲಕ 8 ಜೀವಗಳನ್ನು ಉಳಿಸಬಹುದು ಮತ್ತು 75 ಇತರರ ಜೀವನವನ್ನು ಸುಧಾರಿಸಬಹುದು. ಕಳೆದ ನಾಲ್ಕು ತಿಂಗಳಲ್ಲಿ ಈ ಅಭಿಯಾನದ ಮೂಲಕ ರಾಜ್ಯದಲ್ಲಿ ನಮ್ಮ ವಿವಿಯ ವಿದ್ಯಾರ್ಥಿ ಮತ್ತು ಉಪನ್ಯಾಸಕರು 12 ಸಾವಿರ ಅಂಗಗಳ ದಾನ ಮಾಡಿದ್ದಾರೆ ಎಂದು ಹೇಳಿದರು.

ಮೇಯರ್ ಪಿ.ಗಾದೆಪ್ಪ. ದಿಶಾಭೋದ್ ಫೌಂಡೇಶನ್ ನ ನಿರ್ದೇಶಕರಾದ ಚಿದಾನಂದ, ಜಾನೆಕುಂಟೆ ಬಸವರಾಜ್ (ಕುಮ್ಮಿ), ನಾರ್ಕೋಟಿಕ್ ಕಂಟ್ರೋಲ್ ಬ್ಯೂರೋದ ರತನ್ ಕೆ. ಜಿಆರ್ ಐ ನ ಬಸವರಾಜ್ ಮೇಟಿ ಮೊದಲಾದವರು ವೇದಿಕೆಯಲ್ಲಿದ್ದರು.

ನಂತರ ನಗರದಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ, ದಂತ, ಆಯುರ್ವೇದ, ಹೋಮಿಯೋಪತಿ, ಯುನಾನಿ, ನ್ಯಾಚುರೋಪತಿ, ಫಾರ್ಮಸಿ, ನರ್ಸಿಂಗ್, ಫಿಸಿಯೋಥೆರಪಿ, ಅಲೈಡ್ ಹೆಲ್ತ್ ಸೈನ್ಸ್ ನ 25ಕ್ಕೂ ಹೆಚ್ಚು ಕಾಲೇಜು ಹಾಗೂ ಇತರೆ ಸಂಸ್ಥೆಗಳು, 400 ಅಧ್ಯಾಪಕರು ಮತ್ತು 5000 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಾಕಥಾನ್ನಲ್ಲಿ ಭಾಗವಹಿಸಿದ್ದರು.

ವಾಕಥಾನ್ ಮೆಡಿಕಲ್ ಕಾಲೇಜು ಮೈದಾನದಿಂದ ಸುಧಾ ಕ್ರಾಸ್, ಇನ್ ಫಾಂಟರಿ ರೋಡ್, ಕನಕದಾಸ ವೃತ್ತ ಎಸ್.ಪಿ.ಸರ್ಕಲ್, ದುರ್ಗಮ್ಮ ಗುಡಿ ಮಾರ್ಗವಾಗಿ ಕಪ್ಪಗಲ್ಲು ರಸ್ತೆ ವಿ.ವೀ ಸಂಘದ ಕಿತ್ತೂರುರಾಣಿ ಚೆನ್ನಮ್ಮ ಪ್ರೌಢಶಾಲೆವರೆಗೆ ನಡೆಯಿತು.

ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಹಾಡಬೇಕು ಎಂಬ ಭಾರತ ಸರ್ಕಾರದ ಆದೇಶದಂತೆ "ವಂದೇ ಮಾತರಂ" ಆರಂಭ ಮಾಡುವ ಮೂಲಕ ಕಾರ್ಯಕ್ರಮ ಆರಂಭಗೊಂಡಿತು. ನಂತರ ರಾಷ್ಟಗೀತೆ, ನಾಡಗೀತೆ ಹಾಡಲಾಯ್ತು.

ದಿಶಾಭೋದ್ ಫೌಂಡೇಶನ್ ನ ನಿರ್ದೇಶಕ ಎಸ್.ಪಿ.ಚಿದಾನಂದ ಸ್ವಾಗತಿಸಿದರು. ಭಾವನಾ ರಘು ವಿಷಯ ಮಂಡಿಸಿದರು. ಬಸವರಾಜ್ ಅಮಾತಿ ಕಾರ್ಯಕ್ರಮ ನಿರೂಪಿಸಿದರು. ತಾರನಾಥ ಸರ್ಕಾರಿ ಆಯುರ್ವೇದ ಕಾಲೇಜಿನ ಪ್ರಾಂಶುಪಾಲ ಡಾ.ರಾಜಶೇಖರ ಗಾಣಿಗೇರ ವಂದನಾರ್ಪಣೆ ಮಾಡಿದರು.

# ಎಸ್‌ಎಸ್‌ಎಲ್‌ಸಿ: ವೆಬ್ ಕಾಸ್ಟಿಂಗ್ ಕೇಂದ್ರ ಸಿಇಓ ಪರಿಶೀಲನೆ



• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜಿಲ್ಲೆಯಲ್ಲಿ ನಡೆಯುತ್ತಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಿಗೆ ಹಾಗೂ ಜಿಲ್ಲಾ ಪಂಚಾಯತಿಯ ಮಿನಿ ಸಬಾಭವನದಲ್ಲಿ ಸ್ಥಾಪಿಸಲಾದ ಜಿಲ್ಲಾ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು .

ವೆಬ್ ಕಾಸ್ಟಿಂಗ್ ಕೇಂದ್ರದಲ್ಲಿ ಯಾವುದೇ ತಾಂತ್ರಿಕ ಸಮಸ್ಯೆಗಳು ಉಂಟಾಗದಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಯಾವುದೇ ಸಿಸಿಟಿವ್ಹಿ ಸ್ಥಗಿತಗೊಳ್ಳದಂತೆ ನಿಗಾ ವಹಿಸಬೇಕು ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಲೋಪಗಳು ಉಂಟಾಗದಂತೆ ಕಟ್ಟು–ನಿಟ್ಟಾಗಿ ನಡೆಸುವುದು. ಇದಕ್ಕೆ ಪೂರಕವಾಗಿ ಎಲ್ಲಾ ಅಗತ್ಯ ಕ್ರಮಗಳನ್ನು ವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ವೆಬ್ ಕಾಸ್ಟಿಂಗ್ ಕೇಂದ್ರದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬಳಿಕ ವಿಜಯಪುರ ನಗರದ ಹೇಮರೆಡ್ಡಿ ಮಲ್ಲಮ್ಮ ಪ್ರೌಢಶಾಲೆ, ಪಿಡಿಜೆ ಪ್ರೌಢಶಾಲೆ, ಬಾಲಕರ ಮತ್ತು ಬಾಲಕಿಯರ ಸರಕಾರಿ ಪದವಿಪೂರ್ವ ಕಾಲೇಜುಗಳಿಗೆ ಭೇಟಿ ನೀಡಿದರು.

ಪರೀಕ್ಷಾ ಕೊಠಡಿಗಳಲ್ಲಿ ವಿದ್ಯಾರ್ಥಿಗಳಿಗೆ ಕಲ್ಪಿಸಿರುವ ಆಸನ ವ್ಯವಸ್ಥೆ, ಪರೀಕ್ಷಾ ಕೊಠಡಿ ಮೇಲ್ವಿಚಾರಕರ ನೇಮಕ, ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಶೌಚಾಲಯ,

ವಿದ್ಯುತ್ ವ್ಯವಸ್ಥೆ, ಗಾಳಿ ಹಾಗೂ ಪ್ರಥಮ ಚಿಕಿತ್ಸಾ ವ್ಯವಸ್ಥೆಗಳು ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಬೇಕು. ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಭಯ ಮುಕ್ತರಾಗಿ ಧೈರ್ಯದಿಂದ ಪರೀಕ್ಷೆಯನ್ನು ಬರೆಯುವಂತೆ ಕ್ರಮವಹಿಸಬೇಕು ಎಂದರು

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ, ಮುಖ್ಯ ಯೋಜನಾಧಿಕಾರಿಗಳಾದ ಸಿ. ಬಿ. ಕುಂಬಾರ, ಎಸ್‌ಎಸ್‌ಎಲ್‌ಸಿ ಜಿಲ್ಲಾ ನೋಡಲ್ ಅಧಿಕಾರಿಗಳಾದ ಟಿ. ಎಸ್. ಕೊಲ್ಹಾರ, ವೆಬ್ ಕಾಸ್ಟಿಂಗ್ ಕೇಂದ್ರದ ಮುಖ್ಯಸ್ಥರಾದ ರೇಣುಕಾ ಕಲಬುರ್ಗಿ, ಜಿಲ್ಲೆಯ ಎಲ್ಲಾ ವಲಯಗಳ ಮುಖ್ಯಸ್ಥರು ಹಾಗೂ ಪರೀಕ್ಷಾ ವೆಬ್ ಕಾಸ್ಟಿಂಗ್ ವೀಕ್ಷಕರು, ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಕರು, ಪೋಲಿಸ್ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರು ಹಾಗೂ ಇತರೆ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಸಿಲಿಂಡರ್ ಬಗ್ಗೆ ಸಾರ್ವಜನಿಕರಲ್ಲಿ ಆತಂಕ ಬೇಡ: ತಹಸೀಲ್ದಾರ್



• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ತಾಲೂಕಿನ ಸಿಲಿಂಡರ್ ಕೇಂದ್ರಗಳಲ್ಲಿ ದಾಸ್ತಾನು ಹೆಚ್ಚಿದ್ದು ಸಮಸ್ಯೆ ಆಗದಂತೆ ವಿತರಣೆ ಮಾಡಲು ಸೂಚನೆ ನೀಡಲಾಗಿದ್ದು ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ತಹಸೀಲ್ದಾರ್ ನರಸಪ್ಪ ಹೇಳಿದರು

ಪಟ್ಟಣದ ಬಳ್ಳಾರಿ ರಸ್ತೆಯಲ್ಲಿರುವ ಅಪ್ಪಾಜಿ ಸಿಲಿಂಡರ್ ವಿತರಣೆ ಕೇಂದ್ರ ಹಾಗೂ ಕೋಳುರಿನ ಕಿರಣ್ ಭಾರತ್ ಗ್ಯಾಸ್ ಕೇಂದ್ರಗಳಿಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಸಿಬ್ಬಂದಿ ಅವರೊಂದಿಗೆ ಚರ್ಚಿಸಿ ವಿತರಣೆಯಲ್ಲಿ ಯತಸ್ಥಿತಿ ಕಾಯುವಂತೆ ಸಲಹೆ ನೀಡಿದರು.

ಉಪತಹಸೀಲ್ದಾರ್ ಮಲ್ಲೇಶಪ್ಪ ಹಾಗೂ ಆಹಾರ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವ್ಯಾಪ್ತಿಯಲ್ಲಿ ಕಳೆದ ವಾರದಿಂದ ತಲೆದೂರಿದ್ದ ಸಿಲಿಂಡರ್ ಸಮಸ್ಯೆ ಸಾರ್ವಜನಿಕರಲ್ಲಿ ಬಾರಿ ಸಮಸ್ಯೆ ಆಗಿದ್ದು ಸದ್ಯ ಸೋಮವಾರ ಮತ್ತು ಮಂಗಳವಾರ ಲೋಡ್ ಬಂದಿದೆ ಎನ್ನಲಾಗಿದ್ದು ಕಡ್ಡಾಯವಾಗಿ ಒಟಿಪಿ ಆನ್ಲೈನ್ ಮೂಲಕ ದಾಖಲಿಕರಣ ಮಾಡುವುದು ಸಾರ್ವಜನಿಕರಲ್ಲಿ ಕೆಲವು ಕಡೆ ಗೊಂದಲಕ್ಕಿಡು ಮಾಡಿದ್ದು ಸಿಲಿಂಡರ್ ಆಟೋ ಬಳಿ ತೆರಳಿ ಬುಕ್ ಮಾಡಿದರೆ ಸಂದೇಶ ಬರುತ್ತಿಲ್ಲ ಎನ್ನುವುದು ಅಭಿಪ್ರಾಯವಾಗಿದೆ.

# ಕರಪತ್ರ ಪೋಸ್ಟರ ಅನುಮತಿ ಕಡ್ಡಾಯ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಉಪಚುನಾವಣೆ ಹಿನ್ನಲೆಯಲ್ಲಿ ವಿವಿಧ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳ ಪ್ರಚಾರದ ಕರಪತ್ರ, ಪೋಸ್ಟರ್ ಹಾಗೂ ಕಿರುಹೊತ್ತಿಗೆ ಸೇರಿದಂತೆ ಇತ್ಯಾದಿಗಳನ್ನು ಮುದ್ರಿಸುವ ಪೂರ್ವದಲ್ಲಿ ಮುದ್ರಕರು ನಿಗದಿತ ನಮೂನೆ ಭರ್ತಿ ಮಾಡಿ ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಮುದ್ರಕರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುದ್ರಕರ ಮತ್ತು ಪ್ರಕಾಶಕರ ಹೆಸರನ್ನು ಹೊಂದಿರದ ಯಾವುದೇ ಚುನಾವಣೆಯ ಕಿರುಹೊತ್ತಿಗೆ ಅಥವಾ ಬಿತ್ತಿಪತ್ರಗಳ್ಳು ಮುದ್ರಿಸಿ ಪ್ರಕಟಿಸುವಂತಿಲ್ಲ. ಮುದ್ರಣ ಮಾಡಿಸುವವರಿಂದ ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡಿಸಿಕೊಳ್ಳತಕ್ಕದ್ದು. ಪ್ರಕಟಿಸಿದ ಕರಪತ್ರ ಮತ್ತು ನಮೂನೆಯನ್ನು 24 ಗಂಟೆಗಳಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸಲ್ಲಿಸಲು ತಿಳಿಸಿದರು.

ಚುನಾವಣೆಯಲ್ಲಿ ಅಭ್ಯರ್ಥಿಗಳು, ಪಕ್ಷದ ಖರ್ಚು ವೆಚ್ಚಗಳ ಮಾಹಿತಿ ಮಹತ್ವದ್ದಾಗಿದ್ದು, ಚುನಾವಣಾ ಆಯೋಗವು ಗರಿಷ್ಠ 40 ಲಕ್ಷ ರೂ. ಖರ್ಚು ಮಾಡಲು ನಿಗದಿಪಡಿಸಿದೆ. ಮುದ್ರಕರು ಮುದ್ರಿತ ಪ್ರಕಟಣೆಯಲ್ಲಿ ಮುದ್ರಣ ಸ್ಥಳ, ಎಷ್ಟು ಪ್ರತಿ ಎಂಬುದನ್ನು ಪ್ರಕಟಿಸತಕ್ಕದ್ದು. ಅದರ ವೆಚ್ಚವನ್ನು ಚೆಕ್, ಡಿಡಿ ಅಥವಾ ಫೋನ್‌ಪೇ ಮೂಲಕ ಪಾವತಿ ಮಾಡಿಕೊಂಡು ಕಾನೂನಾತ್ಮಕವಾಗಿ ಕಾರ್ಯನಿರ್ವಹಿಸಬೇಕು. ನಿಬಂಧನೆಗಳನ್ನು ಉಲ್ಲಂಘಿಸಿದಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸಂಗಪ್ಪ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಮಾತನಾಡಿ, ಮುದ್ರಣದ ವಿವರದಲ್ಲಿ ಶಾಂತಿಭಂಗ, ಭದ್ರತೆ, ಧಾರ್ಮಿಕ ನಿಂದನೆ, ವ್ಯಕ್ತಿಗತ ಅವಹೇಳನಕಾರಿ ಹೇಳಿಕೆಗಳು ಇರಬಾರದು. ಪ್ರಿಂಟ್ ಮಾಡುವ ಪೂರ್ವದಲ್ಲಿ ಅದರಲ್ಲಿರುವ ಎಲ್ಲ ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿ, ನಂತರ ಮುದ್ರಣ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಲೆಕ್ಕಾಧಿಕಾರಿ ಮಾತನಾಡಿ, ನಿಗದಿತ ಅಪೆಂಡಿಕ್ಸ್ ಎ ಮತ್ತು ಬಿ ನಮೂನೆಗಳಲ್ಲಿ ಭರ್ತಿ ಎಂ.ಸಿ.ಎಂ.ಸಿ ಸಮಿತಿಗೆ ನೀಡಿದಲ್ಲಿ ಪ್ರಚಾರದ ಕರಪತ್ರ, ಪೋಸ್ಟರ್ ಹಾಗೂ ಕಿರುಹೊತ್ತಿಗೆ ಮುದ್ರಣಕ್ಕೆ ಅನುಮತಿ ನೀಡಲಾಗುತ್ತದೆ ಎಂದರು.

ಸಭೆಯಲ್ಲಿ ಹುನಗುಂದ ತಹಶೀಲ್ದಾರ ಡಾ.ಪ್ರದೀಪಕುಮಾರ, ಬೀಳಗಿ ತಹಶೀಲ್ದಾರ ಹತ್ನಟ್ಟಿ ಸೇರಿದಂತೆ ಜಿಲ್ಲೆಯ ಮುದ್ರಣಾಲಯಗಳ ಮಾಲಿಕರು ಹಾಗೂ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಅಧ್ಯಕ್ಷರಾಗಿ ತಿಮ್ಮಪ್ಪ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಸಮೀಪದ ಮುಷ್ಠಗಟ್ಟೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಎಸ್ಡಿಎಂಸಿ ಅಧ್ಯಕ್ಷರಾಗಿ ಎಸ್ ಬಿ ತಿಮ್ಮಪ್ಪ ಆಯ್ಕೆಯಾದರು.

ಶಾಲೆಯಲ್ಲಿ ನಡೆದ ಎಸ್ಡಿಎಂಸಿ ಸಭೆಯಲ್ಲಿ ಅಧ್ಯಕ್ಷರಾಗಿ ಎಸ್ ಬಿ ತಿಮ್ಮಪ್ಪ ಉಪಾಧ್ಯಕ್ಷರಾಗಿ ಸಿ ದೊಡ್ಡ ಬಸಪ್ಪ ಸರ್ವ ಸದಸ್ಯರನ್ನು ಆಯ್ಕೆ ಮಾಡಲಾಯಿತು.ನೂತನ ಅಧ್ಯಕ್ಷ ಎಸ್ ಬಿ ತಿಮ್ಮಪ್ಪ ಮಾತನಾಡಿ, ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಒದಗಿಸುವ ನಿಟ್ಟಿನಲ್ಲಿ ಸರ್ಕಾರದೊಂದಿಗೆ ನಾವುಗಳು ಕೈಜೋಡಿಸಿ ಕೆಲಸ ಮಾಡಬೇಕಿದೆ. ಮುಖ್ಯ ಶಿಕ್ಷಕರು ಹಾಗೂ ಉಪಾಧ್ಯಕ್ಷರು ಸರ್ವ ಸದಸ್ಯರ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯಲಿದ್ದೇವೆ. ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲು ಶಿಕ್ಷಣ ಇಲಾಖೆ, ಚುನಾಯಿತ ಜನಪ್ರತಿನಿಧಿಗಳ ಹಾಗೂ ದಾನಿಗಳ ಸಹಕಾರ ಪಡೆದು ಅಭಿವೃದ್ಧಿ ಪಡಿಸಲಾಗುವುದು ಎಂದು ಹೇಳಿದರು. ಮುಖ್ಯಶಿಕ್ಷಕ ಎಚ್ ಎಂ ಸಾಹಬುದಿನ್, ಮಾರುತಿ ಹಾಗೂ ಸಹ ಶಿಕ್ಷಕರು ಊರಿನ ಮುಖಂಡರು ಶಾಲಾ ಹಳೆ ವಿದ್ಯಾರ್ಥಿಗಳು ಇದ್ದರು.

# ರಾಜ್ಯ ಮಾನವ ಹಕ್ಕುಗಳ ಆಯೋಗದ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಗೌರವಾನ್ವಿತ ಅಧ್ಯಕ್ಷರಾದ ಟಿ.ಶ್ಯಾಮ ಭಟ್ ಹಾಗೂ ಗೌರವಾನ್ವಿತ ಸದಸ್ಯರಾದ ಎಸ್.ಕೆ. ವಂಟಿಗೋಡಿ ಇವರ

ಅಧ್ಯಕ್ಷತೆಯಲ್ಲಿ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಾರ್ಚ್ 26ರ ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಕರಣಗಳ ವಿಲೇವಾರಿ ಹಾಗೂ ಸಾರ್ವಜನಿಕರ ಅಹವಾಲು ಸ್ವೀಕಾರ ಮತ್ತು ದೂರುಗಳ ವಿಚಾರಣೆ ಕುರಿತು ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಭೆಗೆ ಅಗತ್ಯ ಮಾಹಿತಿಯೊಂದಿಗೆ ಖುದ್ದಾಗಿ ಹಾಜರಾಗುವಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಎಸ್ಸೆಸ್ಸೆಲ್ಸಿ ಪ್ರಥಮ ಭಾಷಾ ಪರೀಕ್ಷೆಗೆ 663 ವಿದ್ಯಾರ್ಥಿಗಳು ಗೈರು

ರಾಯಚೂರು ಮಾರ್ಚ್ 18 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಮಾರ್ಚ್ 18ರ ಬುಧವಾರ ದಂದು 101 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ಪ್ರಥಮ ಭಾಷೆ ವಿಷಯದಲ್ಲಿ ಒಟ್ಟು 30,295 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 663 ವಿದ್ಯಾರ್ಥಿಗಳು ಗೈರಾಗಿದ್ದಾರೆ.

ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ 4,033 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 78 ವಿದ್ಯಾರ್ಥಿಗಳು ಗೈರಾಗಿದ್ದಾರೆ, ಲಿಂಗಸುಗೂರು ತಾಲ್ಲೂಕಿನಲ್ಲಿ 6,142 ಹಾಜರಾಗಿ 113 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲ್ಲೂಕಿನಲ್ಲಿ 5,413 ವಿದ್ಯಾರ್ಥಿಗಳು ಹಾಜರಾಗಿ 170 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲ್ಲೂಕಿನಲ್ಲಿ 9,110 ಹಾಜರಾಗಿದ್ದು, 215 ವಿದ್ಯಾರ್ಥಿಗಳು ಗೈರಾಗಿದ್ದಾರೆ ಹಾಗೂ ಸಿಂಧನೂರು ತಾಲ್ಲೂಕಿನಲ್ಲಿ 5,597 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 87 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ಬೇಕು: ಕಾಳನ್ನವರ



• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಇಂದು ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣದ ಅವಶ್ಯಕತೆಯಿದೆ ಎಂದು ಸಾಹಿತಿ ಚಂದ್ರಶೇಖರ ಕಾಳನ್ನವರ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಜರುಗಿದ ಸರಸ್ವತಿ ಪೂಜಾ ಕಾರ್ಯಕ್ರಮ ಹಾಗೂ ಏಳನೇ ತರಗತಿ ವಿದ್ಯಾರ್ಥಿಗಳಿಗೆ ಶುಭ ಕೋರುವ ಸಮಾರಂಭದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಇಂದಿನ ಮಕ್ಕಳಿಗೆ ನಮ್ಮ ಸಂಸ್ಕೃತಿ, ಸಂಸ್ಕಾರ, ಸಂಪ್ರದಾಯಗಳ ತಿಳುವಳಿಕೆಯೇ ಇಲ್ಲದಾಗಿದೆ ಎಂದ ಕಾಳನ್ನವರ, ಶಾಲೆಗಳಲ್ಲಿ ಪ್ರಾರಂಭಿಕ ಹಂತದಲ್ಲಿ ಇದನ್ನು ಮಕ್ಕಳಿಗೆ ತಿಳಿಸಬೇಕಿದ್ದು, ಶಿಕ್ಷಣದೊಂದಿಗೆ ಅವರಿಗೆ ಮಾನವೀಯ ಮೌಲ್ಯಗಳನ್ನು ಕಲಿಸುವ ಅಗತ್ಯತೆಯಿದೆ ಎಂದು ಹೇಳಿದರು.

ಅತಿಥಿ ಎಸ್ ಡಿಎಂಸಿ ಅಧ್ಯಕ್ಷ ಮಹಾಂತಗೌಡ ಪಾಟೀಲ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಎಲ್ಲ ಮೂಲಭೂತ ಸೌಲಭ್ಯಗಳು ದೊರೆಯುತ್ತವೆ. ಅವುಗಳನ್ನು ಸದುಪಯೋಗ ಮಾಡಿಕೊಂಡು ಸಾಧಕರಾಗಬೇಕು ಎಂದರು.

ಮುಖ್ಯಗುರು ಜಗನ್ನಾಥ ಪತ್ತಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವ ದಿಸೆಯಲ್ಲಿ ಶಾಲೆಯ ಶಿಕ್ಷಕರು ಮುತುವರ್ಜಿ ವಹಿಸಿದ್ದಾರೆ. ವಿದ್ಯಾರ್ಥಿಗಳು ಓದಿಗೆ ಸಮಯ ಮೀಸಲಿಟ್ಟು ಪರೀಕ್ಷೆಯಲ್ಲಿ ಸಾಧನೆ ಮಾಡಬೇಕು ಎಂದರು.

ಶಿಕ್ಷಕ ಪಾಂಡುರಂಗ ಸಣ್ಣಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೆಪಿ ಶಾಲೆಯ ಮುಖ್ಯಗುರು ಸುರೇಶ ಚಿತ್ತರಗಿ, ನಿವೃತ್ತ ಶಿಕ್ಷಕ ಪಿ.ಡಿ. ಸರಿಕರ, ಶಿಕ್ಷಕರಾದ ರವಿ ಕೆಂಚಣ್ಣವರ, ಅಂಜಲಿ ಎಲ್, ಎಲ್.ಎ.ಪಾಟೀಲ, ಎಸ್.ಆರ್.ಅಬ್ಬಿಗೇರಿ ಹಾಗೂ ಎ.ಎಸ್.ಮಂತ್ರಿ ವೇದಿಕೆಯಲ್ಲಿದ್ದರು. ನಂತರ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಮೊದಲ ದಿನ 293 ವಿದ್ಯಾರ್ಥಿಗಳು ಗೈರು

# ಪರೀಕ್ಷಾ ಕೇಂದ್ರಗಳಿಗೆ ಸಿಇಓ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಜಿಲ್ಲೆಯಲ್ಲಿ ಬುಧವಾರ ನಡೆದ ಎಸ್.ಎಸ್.ಎಲ್.ಸಿ ಕನ್ನಡ ವಿಷಯ ಪರೀಕ್ಷೆ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರೀಕ್ಷಾ ಪ್ರಕ್ರಿಯೆಯನ್ನು ಪರಿಶೀಲಿಸಿದರು.

ವಿದ್ಯಾಗಿರಿಯ ಬಸವೇಶ್ವರ ವಿದ್ಯಾವರ್ಧಕ ಸಂಘದ ಇಂಗ್ಲೀಷ ಮಾಧ್ಯಮ ಶಾಲೆ, ಸಮೃದ್ಧಿ ಗುರುಕುಲ ಶಾಲೆ, ಗದ್ದನಕೇರಿಯ ಮಳಿಯಪ್ಪ ಅಜ್ಜನ ಶಾಲೆ ಹಾಗೂ ಕಲಾದಗಿಯ ಹಣ್ಣು ಬೆಳೆಗಾರರ ವಿದ್ಯಾವರ್ಧಕ ಸಂಘದ ಶಾಲೆಗಳಲ್ಲಿ ಸ್ಥಾಪಿಸಲಾದ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರೀಕ್ಷಾ ಕೊಠಡಿಗಳಲ್ಲಿ ನಡೆಯುತ್ತಿರುವ ವ್ಯವಸ್ಥೆಗಳನ್ನು ನೇರವಾಗಿ ಅವಲೋಕಿಸಿ ವಿದ್ಯಾರ್ಥಿಗಳು ಶಾಂತ ವಾತಾವರಣದಲ್ಲಿ ಪರೀಕ್ಷೆ ಬರೆಯುತ್ತಿರುವುದನ್ನು ಪರಿಶೀಲಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿನ ಭದ್ರತಾ ವ್ಯವಸ್ಥೆ, ವಿದ್ಯಾರ್ಥಿಗಳ ಆಸನ ವ್ಯವಸ್ಥೆ, ಕುಡಿಯುವ ನೀರು ಮತ್ತು ಬೆಳಕಿನ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿದರು. ಪರೀಕ್ಷಾ ಅಕ್ರಮಗಳಿಗೆ ಆಸ್ಪದ ನೀಡದಂತೆ ಸರ್ಕಾರ ಹೊರಡಿಸಿರುವ ಕಟ್ಟುನಿಟ್ಟಿನ ನಿಯಮಗಳನ್ನು ಪಾಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಮತ್ತು ಕೊಠಡಿ ಮೇಲ್ವಿಚಾರಕರೊಂದಿಗೆ ಚರ್ಚಿಸಿದ ಕುರೇರ, ಯಾವುದೇ ರೀತಿಯ ಅಕ್ರಮಗಳಿಗೆ ಅವಕಾಶ ನೀಡದಂತೆ ಮತ್ತು ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡುವಂತೆ ನಿರ್ದೇಶನ ನೀಡಿದರು.

ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ ಶಾಂತಿಯುತವಾಗಿ ಪರೀಕ್ಷೆ ಬರೆಯಲು ಪೂರಕವಾದ ವಾತಾವರಣ ಖಚಿತಪಡಿಸಿಕೊಂಡರು. ಕೇಂದ್ರಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳ ಕಾರ್ಯಕ್ಷಮತೆ ಮತ್ತು ಪ್ರಶ್ನೆಪತ್ರಿಕೆಗಳ ಸುರಕ್ಷಿತ ನಿರ್ವಹಣೆಯನ್ನು ಪರಿಶೀಲಿಸಿದರು. ವಿದ್ಯಾರ್ಥಿಗಳಿಗೆ ಭಯರಹಿತ ಹಾಗೂ ಸುಗಮ ಪರೀಕ್ಷಾ ವಾತಾವರಣ ಕಲ್ಪಿಸುವುದು ಮುಖ್ಯವಾಗಿದ್ದು, ಎಲ್ಲ ಸಿಬ್ಬಂದಿ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸಲು ತಿಳಿಸಿದರು. ಭೇಟಿ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಇದ್ದರು.

ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎ.ಸಿ.ಮನ್ನಿಕೇರಿ ಬುಧವಾರ ನಡೆದ ಕನ್ನಡ ವಿಷಯ ಪರೀಕ್ಷೆಗೆ ಒಟ್ಟು 31625 ವಿದ್ಯಾರ್ಥಿಗಳು ನೋಂದಣಿ ಮಾಡಿದ್ದು, ಈ ಪೈಕಿ 31332 ವಿದ್ಯಾರ್ಥಿಗಳು ಹಾಜರಾಗಿ 293 ವಿದ್ಯಾರ್ಥಿಗಳು ಗೈರು ಹಾಜರಾಗಿರುತ್ತಾರೆ. ಯಾವುದೇ ವಿದ್ಯಾರ್ಥಿ ಡಿಬಾರ್ ಆಗಿರುವುದಿಲ್ಲವೆಂದು ತಿಳಿಸಿದರು.

## ಉಪಚುನಾವಣೆ: ಬಿಜೆಪಿಯಿಂದ ಪೂರ್ವಭಾವಿ ಸಭೆ

# ಬಿಜೆಪಿ ಗೆಲುವಿಗೆ ಅಭಿವೃದ್ಧಿ ಕಾರ್ಯಗಳೆ ಶ್ರೀರಕ್ಷೆ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕಳೆದ ಮೂರು ವರ್ಷಗಳ ಅಭಿವೃದ್ಧಿ ಶೂನ್ಯ. ಹಗರಣಗಳ ಕಾಂಗ್ರೆಸ್ ಸರಕಾರದಿಂದ ಜನ ಬೇಸತ್ತು ಹೋಗಿದ್ದು ಅಭಿವೃದ್ಧಿಗಾಗಿ ಬಿಜೆಪಿ ಬೆಂಬಲಿಸಲು ಬಾಗಲಕೋಟೆ ಕ್ಷೇತ್ರದ ಜನ ತುದಿಗಾಲಲ್ಲಿ ನಿಂತಿ-ದ್ದಾರೆ. ಕ್ಷೇತ್ರದ ಅಭಿವೃದ್ಧಿಯೇ ಬಿಜೆಪಿ ಮೂಲ ಮಂತ್ರವಾಗಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್ ಹೇಳಿದರು.

ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ಬುಧವಾರ ನಡೆದ ಚುನಾವಣಾ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಸರಕಾರದ ಅವಧಿಯಲ್ಲಿ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಸಾವಿರಾರು ಕೋಟಿ ರೂಪಾಯಿ ಅನುದಾನ ತಂದು ಬಾಗಲಕೋಟೆಯ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಅಂದಿನ ಸಾಧನೆಗಳು ಮತ್ತು ಕೇಂದ್ರ ಸರಕಾರದ ಅಭಿವೃದ್ಧಿಪರ ಕಾರ್ಯಕ್ರಮಗಳು ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಗೆಲುವಿವೆ ಶ್ರೀರಕ್ಷೆಯಾಗಲಿದೆ ಎಂದರು.

ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶ ವಿಕಸಿತ ಭಾರತವಾಗಿ ಹೊರಹೊಮ್ಮುತ್ತಿದೆ. ರಾಜ್ಯದಲ್ಲೂ ಕೂಡಾ ಬಿಜೆಪಿ ಸರಕಾರವಿದ್ದ ಅವಧಿಯಲ್ಲಿ ಎಲ್ಲರಿಗೂ ಸಮಪಾಲು ಸಮಬಾಳು ತತ್ವದಲ್ಲಿ ಸಾಕಷ್ಟು ಯೋಜನೆಗಳ ಮೂಲಕ ಅಭಿವೃದ್ಧಿ ಕಾರ್ಯಗಳು ಜರುಗಿವೆ ಎಂದ ರಾಜೀವ್, ಬಾಗಲಕೋಟೆಯ ಎಲ್ಲ ಬಿಜೆಪಿ ನಾಯಕರು ಒಗ್ಗಟ್ಟಿನಿಂದ ಈ ಚುನಾವಣೆಯನ್ನು ಎದುರಿಸಿ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸುತ್ತೇವೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿ, ಉಪಚುನಾವಣೆಯನ್ನು ಪಕ್ಷ ಗಂಭೀರವಾಗಿ ಪರಿಗಣಿಸಿದೆ. ಕಾರ್ಯಕರ್ತರ ಶಕ್ತಿಯೊಂದಿಗೆ ಜನರ ಆಸೆಯಂತೆ ಮೊತ್ತೊಮ್ಮೆ ಬಿಜೆಪಿ ಗೆಲ್ಲುವುದು ಶತಸಿದ್ಧ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಬೆಳಗಾವಿ ವಿಭಾಗ ಪ್ರಭಾರಿ ಸಂಜಯ ಪಾಟೀಲ, ಚುನಾವಣಾ ಉಸ್ತುವಾರಿ ಅರುಣ ಶಹಾಪೂರ, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ, ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ, ಹುನಗುಂದದ ದೊಡ್ಡನಗೌಡ ಪಾಟೀಲ, ಬದಾಮಿಯ ಎಂ.ಕೆ.ಪಟ್ಟಣಶೆಟ್ಟಿ, ಉಮೇಶ ಕಾರಜೋಳ, ಬಸವರಾಜ ಯಂಕಂಚಿ, ರಾಜು ನಾಯ್ಕರ, ಮಲ್ಲಯ್ಯ ಮೂಗನೂರಮಠ ವೇದಿಕೆಯಲ್ಲಿದ್ದರು.

# ವಿಶೇಷ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆ ಬೆಂಗಳೂರು ವತಿಯಿಂದ ರಾಯಚೂರಿನಲ್ಲಿ ಮಾರ್ಚ್ 25ರ ಬುಧವಾರ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪತ್ರಕರ್ತರಿಗಾಗಿ ಒಂದು ದಿನದ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ ಅನುಷ್ಠಾನಗೊಂಡಿರುವ ಯೋಜನೆಗಳ ಕುರಿತು ಮಾಹಿತಿ ನೀಡುವುದು ಸೇರಿದಂತೆ ಸಂವಾದ ಏರ್ಪಡಿಸಲಾಗಿದ್ದು, ಪತ್ರಕರ್ತರು ಕಾರ್ಯಾಗಾರದಲ್ಲಿ ಭಾಗಿಯಾಗಿ, ಯಶಸ್ವಿಗೊಳಿಸಬೇಕೆಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆಯ ಪ್ರಕಟಣೆ ತಿಳಿಸಿದೆ.

# ಆಕ್ಷೇಪಣೆಗೆ ಅರ್ಜಿ ಆಹ್ವಾನ

ರಾಯಚೂರು : ರಾಯಚೂರು ನಗರದ ವಾರ್ಡ ನಂ:32ರ ಅರಬ್ ಮೊಹಲ್ಲಾ ಕಾಲೋನಿಯಲ್ಲಿ ಬರುವ ಆಸ್ತಿ ಸಂ:12-11-136 ಮತ್ತು 12-11-204ರಲ್ಲಿ ಅರಬ್ ಮೊಹಲ್ಲಾ ಮಸ್ಜಿದ್ ಅವರು ಧಾರ್ಮಿಕ ಉದ್ದೇಶಕ್ಕಾಗಿ ಪ್ರೇಯರ್ ಹಾಲ್ ಕಟ್ಟಡ ನಿರ್ಮಾಣ ಮಾಡಲು ಅರಬ್ ಮೊಹಲ್ಲಾ ಮಸ್ಜಿದ್ ಅರ್ಜಿದಾರರು ಅರ್ಜಿ ಸಲ್ಲಿಸಿದ್ದು, ಈ ಸ್ಥಳದಲ್ಲಿ ನಕ್ಷೆ ಪ್ರಕಾರ ಕಟ್ಟಡ ಪರವಾನಿಗೆ ಕೋರಿ ಅರ್ಜಿ ಸಲ್ಲಿಸಿರುವುದರಿಂದ ಇದಕ್ಕೆ ಅಕ್ಕ-ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ ಈ ನೋಟೀಸ್ ಪ್ರಕಟಿಸಿದ (15) ದಿನಗಳ ಒಳಗಾಗಿ ದಾಖಲೆಯೊಂದಿಗೆ ಈ ಕಾರ್ಯಾಲಯಕ್ಕೆ ದೂರು ಸಲ್ಲಿಸತಕ್ಕದ್ದು, ಅವಧಿ ಮುಗಿದ ಮೇಲೆ ಆಕ್ಷೇಪಣೆ ತಕರಾರು ಸಲ್ಲಿಸಿದ್ದಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲವೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರೀಕ್ಷ ಕೇಂದ್ರಗಳಿಗೆ ತಹಸೀಲ್ದಾರ್ ಭೇಟಿ



• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟವೆನಿಸಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಾ18 ರಿಂದ ಆರಂಭವಾಗಲಿದ್ದು ಪಟ್ಟಣದ ಕ್ಷೇತ್ರ ವ್ಯಾಪ್ತಿಯ ಪ್ರಸಕ್ತ ಸಾಲಿನ, ಪರೀಕ್ಷೆಗೆ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ, ಪರೀಕ್ಷೆ ನಡೆಯುವ ಕೇಂದ್ರಗಳಿಗೆ ಬುಧವಾರ ತಹಸೀಲ್ದಾರ್ ನರಸಪ್ಪ ಬೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿ ಪಡೆದರು.

ಪರೀಕ್ಷೆ ಕೇಂದ್ರಗಳ ಸುತ್ತ ಬೀಗಿ ಕಣ್ಗಾವಲು.

ಪಟ್ಟಣದಲ್ಲಿ ಸರಕಾರಿ ಬಾಲಕರ ಪ್ರೌಢ ಶಾಲೆ ಸೇರಿ ಒಟ್ಟು 3 ಪರೀಕ್ಷಾ ಕೇಂದ್ರಗಳಿದ್ದು, ಒಟ್ಟು 1,537 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಬಿಇಓ ಕಚೇರಿ ವ್ಯಾಪ್ತಿಯಲ್ಲಿ 25 ಕೇಂದ್ರಗಳಲ್ಲಿ 370 ಕೊಠಡಿಗಳು, ಒಟ್ಟು 9,035 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೋಂದಣಿ ಮಾಡಿಸಿಕೊಂಡಿದ್ದಾರೆ. ನಕಲುಮುಕ್ತ ಪರೀಕ್ಷೆ ನಡೆಸಲು ಪ್ರತಿ ಪರೀಕ್ಷಾ ಕೊಠಡಿಗೆ ಸಿಸಿ ಟಿವಿ ಕ್ಯಾಮೆರಾ ಅಳವಡಿಸಲಾಗಿದೆ. 25 ಮುಖ್ಯ ಅಧೀಕ್ಷಕರು, 6 ಮತ್ತು 2 ಸಂಚಾರಿ ಜಾಗೃತ ತಂಡಗಳನ್ನು ನೇಮಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದಲಿಂಗಯ್ಯ ತಿಳಿಸಿದರು.

# ಮೂಲಭೂತ ಸೌಲಭ್ಯಗಳಿಲ್ಲದೇ ಸೊರಗಿದ ತೆಕ್ಕಲಕೋಟೆ ನಾಡಕಚೆರಿ



ಸಿರುಗುಪ್ಪ: ತಾಲೂಕಿನ ತೆಕ್ಕಲಕೋಟೆ ಪಟ್ಟಣದ ನಾಡ ಕಛೇರಿಯಲ್ಲಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಶೌಚಾಲಯ, ದೂರುಪೆಟ್ಟಿಗೆ, ಪ್ರಥಮ ಚಿಕಿತ್ಸೆ, ಮಾಹಿತಿ ಫಲಕಗಳು, ಸೂಕ್ತ ಸಿಬ್ಬಂದಿಗಳು, ಸೇವೆಯ ವಿವರ ಇಲ್ಲದೇ ತೆಕ್ಕಲಕೋಟೆ ನಾಡಕಛೇರಿಯ ದೊರೆಯುವ ಪ್ರಮಾಣ ಪತ್ರಗಳಿಗೆ ಸುತ್ತಮುತ್ತಲಿನ ಗ್ರಾಮಗಳ ಜನರು ಸೌಲಭ್ಯಗಳಿಂದ ವಂಚಿತರಾಗಿದ್ದಾರೆ.

ಮುಂಭಾಗದ ತರಕಾರಿ ಮತ್ತು ಇನ್ನಿತರ ಅಂಗಡಿಗಳ ತ್ಯಾಜ್ಯದಿಂದ ಕಛೇರಿಯ ಆವರಣವು ಕಸದ ತ್ಯಾಜ್ಯ ಹಾಗೂ ಮದ್ಯದ ತ್ಯಾಜ್ಯಗಳಿಂದ ಗಬ್ಬುನಾರುತ್ತಿದೆ. ಕಸದಿಂದ ಕೂಡಿದ ವಾತಾವರಣದಲ್ಲೇ ಚಿಕ್ಕ ಮಕ್ಕಳ ಜೊತೆ ಮೂಗು ಮುಚ್ಚಿಕೊಂಡು ಕಛೇರಿ ಕೆಲಸವನ್ನು ಮಾಡಿಸಿಕೊಂಡು ಹೋಗುವ ದುಃಸ್ಥಿತಿ ಎದುರಾಗಿದೆ.

ಹಲವು ವರ್ಷಗಳೇ ಕಳೆದರೂ, ಕೆಲವು ಜಿಲ್ಲಾಧಿಕಾರಿಗಳು ಬೇಟಿ ನೀಡಿದರೂ ಕಟ್ಟಡದ ದುರಸ್ತಿ, ಸುತ್ತುಗೋಡೆ, ಸೂಕ್ತ ಶೌಚಾಲಯವಿಲ್ಲದ ಕಾರಣದಿಂದಾಗಿ ಗಬ್ಬು ವಾಸನೆ ಬರುತ್ತಿದೆ. ಇದರಿಂದಾಗಿ ಸೊಳ್ಳೆಗಳು ಹೆಚ್ಚಿದ್ದು ಮಾರಕ ಕಾಯಿಲೆಗಳ ಭೀತಿಯು ಎದುರಾಗಿದೆ. ಸೂಕ್ತ ಭದ್ರತೆಯಿಲ್ಲದ ಕಾರಣ ಮದ್ಯಪಾನೀಯರು ಇಲ್ಲಿಯೇ ಕುಡಿದು ಬಿಸಾಡುತ್ತಿದ್ದು ಈ ಬಗ್ಗೆ ಸಂಬಂಧಿಸಿದ ಇಲಾಖೆಯು ಗಮನಹರಿಸಿ ಸಾರ್ವಜನಿಕರಿಗೆ ಶುದ್ಧ ವಾತಾವರಣವನ್ನು ನಿರ್ಮಿಸಬೇಕೆಂಬುದು ಸಾರ್ವಜನಿಕರ ಆಗ್ರಹವಾಗಿದೆ.

# ಕಲಿಕೆ ಗುರುತಿಸಲು ಬಾಲಮೇಳ, ನಕ್ಕು ನಲಿದಾಡಿದ ಚಿಣ್ಣರು, ಪಾಲಕರು ಖುಶ್



• ಮಲ್ಲಮ್ಮ ನುಡಿ ವಾರ್ತೆ, ಕಂಪ್ಲಿ

ವರ್ಷವಿಡಿ ಅಂಗನವಾಡಿಗಳಲ್ಲಿ ಮಕ್ಕಳು ಶಾಲಾಪೂರ್ವ ಶಿಕ್ಷಣದ ಚಟುವಟಿಕೆಗಳನ್ನು ಮಾಡುತ್ತಾರೆ, ಪಾಲಕರು, ಪೋಷಕರು ಅವರ ಮಕ್ಕಳ ಕಲಿಕೆ ಗುರುತಿಸಲು ಬಾಲ ಮೇಳ ಕಾರ್ಯಕ್ರಮ ಪಟ್ಟಣದ ಐತಿಹಾಸಿಕ ಸೋಮಪ್ಪನ ದೇವಸ್ಥಾನ ಮುಂಭಾಗದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿ ವೃದ್ಧಿ ಇಲಾಖೆ, ಶಿಶು ಅಭಿ ವೃದ್ಧಿ ಯೋಜನಾಧಿಕಾರಿಗಳ ಕಚೇರಿ ಕಂಪ್ಲಿ ಸಿರುಗುಪ್ಪ ಹಾಗೂ ಅಜೀಂ ಪ್ರೇಮ್ ಜಿ ಫೌಂಡೇಷನ್ ಇವರ ಸಹಯೋಗದಲ್ಲಿ ಪಟ್ಟಣದ ಎ ಮತ್ತು ಬಿ ವಲಯಗಳು ಅರಳಿಬಾಲ್ಯ-ಬೆಳಗಲಿ ಭವಿತವ್ಯ ಘೋಷ ವಾಕ್ಯದಡಿಯಲ್ಲಿ ಬಾಲ ಮೇಳ ಕಾರ್ಯಕ್ರಮವನ್ನು ಜರುಗಿತು.

ಕಾರ್ಯಕ್ರಮವನ್ನು ಅಂಗನವಾಡಿ ಕೇಂದ್ರಗಳ ಮೇಲ್ವಿಚಾರಕಿ ಲತೀಫಾ ಬೇಗಂ ಉದ್ಘಾಟಿಸಿ ಮಾತನಾಡಿ ಅಂಗನವಾಡಿ ಕೇಂದ್ರಗಳಲ್ಲಿ ಕಿರಿಯ ಪ್ರಾಥಮಿಕ ಹಂತದ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಆಟಗಳ ಮೂಲಕ ಸಂತೋಷಮಯ ವಾತಾವರಣದಲ್ಲಿ ನೀಡಲಾಗುತ್ತಿದೆ. ಆಟಿಕೆಗಳ ಮೂಲಕ, ವಿವಿಧ ಬಣ್ಣಗಳು, ಕೃತಕ ಗಿಡಗಳ ಮೂಲಕ ಮಕ್ಕಳಿಗೆ ಸಾಮಾನ್ಯ ಜ್ಞಾನವನ್ನು ತಿಳಿಸಿಕೊಡಲಾಗುತ್ತದೆ. ಮಕ್ಕಳ ನೆನಪಿನ ಶಕ್ತಿಯನ್ನು ಹೆಚ್ಚಿಸಲಾಗುತ್ತದೆ. ಜೊತೆಗೆ ಉತ್ತಮ ಪೌಷ್ಟಿಕಾಂಶವುಳ್ಳ ಆಹಾರವನ್ನು ನೀಡಲಾಗುತ್ತಿದೆ. ಮಕ್ಕಳು ವಸ್ತುಗಳನ್ನು ನೋಡಿದ ತಕ್ಷಣವೇ ಅದರ ಬಗ್ಗೆ ಮಾಹಿತಿ ನೀಡುತ್ತವೆ ಈ ರೀತಿಯಲ್ಲಿ ಮಕ್ಕಳಿಗೆ ಕಲಿಸಲಾಗುತ್ತದೆ ಎಂದರು.

ನಂತರ ಮಕ್ಕಳಿಗೆ ವೇದಿಕೆಯಲ್ಲಿ ಮಕ್ಕಳಿಂದ ವಿವಿಧ ಪ್ರದರ್ಶನಗಳನ್ನು ಪ್ರದರ್ಶನ ಮಾಡಿದರು.ಬಾಲ ಮೇಳದಲ್ಲಿ ಕಂಪ್ಲಿ ಎ ಮತ್ತು ಬಿ ವಲಯದ ಅಂಗನವಾಡಿ ಕೇಂದ್ರಗಳ ಮಕ್ಕಳು ವೇಷಭೂಷಣ, ವಿವಿಧ ಪ್ರದರ್ಶನ ನೀಡುವ ಜೊತೆಗೆ ಆಕರ್ಷಕ ನೃತ್ತ ಪ್ರದರ್ಶನ ಪಾಲಕರ ಮನುಸುರೆಗೊಂಡಿತು. ಕಾರ್ಯಕ್ರಮದಲ್ಲಿ ಆಜೀಂ ಪ್ರೇಮ್ ಜಿ ಫೌಂಡೇಷನ್ ರಾಘವೇಂದ್ರ ಮತ್ತು ಸಿಬ್ಬಂದಿಗಳು, ಎರಡು ವಲಯಗಳ ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆಯರು, ಸಹಾಯಕಿಯರು, ಮಕ್ಕಳ ಪೋಷಕರು ಭಾಗವಹಿಸಿದ್ದರು.

# ದೇವರ ದಾಸಿಮಯ್ಯ ಜಯಂತಿ; ಪೂರ್ವಭಾವಿ ಸಭೆ

ರಾಯಚೂರು: ಜಿಲ್ಲಾಡಳಿತದಿಂದ ಮಾರ್ಚ್ 23ರ ಸೋಮವಾರ ದಂದು ದೇವರ ದಾಸಿಮಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾರ್ಚ್ 17ರ ಮಂಗಳವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ದೇವರ ದಾಸಿಮಯ್ಯ ಜಯಂತಿ ಕುರಿತು ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕಿಂಜರಪು ರಾಮ್ ಮೋಹನ್ ನಾಯ್ಡು ಅವರನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ದೆಹಲಿಯಲ್ಲಿ ಬುಧವಾರ ಭೇಟಿ ಮಾಡಿ ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಹಾಗೂ ಸ್ಕೈಡೆಕ್ ನಿರ್ಮಾಣ ಸಂಬಂಧ ಸಮಾಲೋಚನೆ ನಡೆಸಿದರು. ಸಚಿವ ಬೋಸರಾಜು, ದೆಹಲಿಯಲ್ಲಿ ಕರ್ನಾಟಕ ಸರಕಾರದ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ, ಸಂಸದ ಕುಮಾರ ನಾಯಕ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಉಪಸ್ಥಿತರಿದ್ದರು.

## ಕಾಣೆಯಾದವರ ಪತ್ತೆಗಾಗಿ ಮನವಿ



**ಬೆಂಗಳೂರು:** ನಗರದ ಮಡಿವಾಳ ನಿವಾಸಿಯಾದ ಕು.ಅಮ್ಮು (ವಯಸ್ಸು 16 ವರ್ಷ 11 ತಿಂಗಳು) ಇವರು ಮಡಿವಾಳ ಸರ್ಕಾರಿ ಕಾಲೇಜಿನಲ್ಲಿ ಮೊದಲನೇ ವರ್ಷದ ಪಿ.ಯು.ಸಿ ವ್ಯಾಸಂಗ ಮಾಡುತ್ತಿದ್ದು ಫೆಬ್ರವರಿ 28 2026 ರಂದು ಮನೆಯ ಮುಂದೆ ಆಟವಾಡುತ್ತಿದ್ದು ಮಧ್ಯಾಹ್ನ 12.30 ಗಂಟೆ ಸುಮಾರಿಗೆ ಕಾಣೆಯಾಗಿರುತ್ತಾರೆ ಎಲ್ಲಾ ಕಡೆ ಹುಡುಕಿದರು ಎಲ್ಲಿಯೋ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ನಗರದ ಸುದ್ದಗುಂಟೆಪಾಳ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಕಾಣೆಯಾದವರ ಚಹರೆ ಇಂತಿವೆ:** 5.0 ಅಡಿ ಎತ್ತರ, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು, ಕೋಲು ಮುಖ, ಕಪ್ಪು ಕೂದಲು, ಪಿಂಕ್ ಕಲರ್ ಟಾಪ್, ಗೋಲ್ಡ್ ಕಲರ್ ಫ್ಯಾಂಟ್ ಹಾಗೂ ನೀಲಿ ಬಣ್ಣದ ಸ್ವೇಟರ್ ಧರಿಸಿರುತ್ತಾರೆಕನ್ನಡ, ಹಿಂದಿ, ಇಂಗ್ಲೀಷ್, ತೆಲುಗು ಭಾಷೆಗಳನ್ನು ಮಾತನಾಡುತ್ತಾರೆ.

ಕಾಣೆಯಾದವರು ಪತ್ತೆಯಾದಲ್ಲಿ ಸುದ್ದಗುಂಟೆಪಾಳ್ಯ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು. ಅಥವಾ ದೂರವಾಣಿ ಸಂಖ್ಯೆ: 080–22942762, ಮೊಬೈಲ್ ಸಂಖ್ಯೆ : 948081425 ಅಥವಾ ಕಂಟ್ರೋಲ್ ರೂಂ 080–22943481/82 ಮೂಲಕ ಮಾಹಿತಿಯನ್ನು ನೀಡಬಹುದು ಎಂದು ಸುದ್ದಗುಂಟೆಪಾಳ್ಯ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆದ್ಯತೆ ಮೇರೆಗೆ ಬಸ್ ಸಂಚಾರ



**ಬೆಂಗಳೂರು:** ಹೊಸ ಬಸ್ ಖರೀದಿಗೆ ಟೆಂಡರ್ ಕರೆಯಲಾಗಿದ್ದು, ಎಲ್ಲೆಲ್ಲಿ ಕೊರತೆ ಇದೆಯೋ ಅಂತಹ ಕಡೆ ಆದ್ಯತೆ ಮೇರೆಗೆ ಬಸ್ಗಳನ್ನು ಒದಗಿಸುತ್ತೇವೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ವಿಧಾನ ಪರಿಷತ್ನಲ್ಲಿ ತಿಳಿಸಿದ್ದಾರೆ.

ಸದಸ್ಯರಾದ ಭಾರತಿ ಶೆಟ್ಟಿ ಹಾಗೂ ಗೋವಿಂದ್ ರಾಜ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಾವು ಬಂದ ಮೇಲೆ ಸುಮಾರು 6 ಸಾವಿರ ಹೊಸ ಬಸ್ ಖರೀದಿ ಮಾಡಲು ತೀರ್ಮಾನಿಸಿದ್ದೇವೆ. ಇದರ ಮೊದಲ ಭಾಗವಾಗಿ ಹೊಸ ಬಸ್ ಖರೀದಿಗೆ ಟೆಂಡರ್ ಕರೆಯಲಾಗಿದೆ, ಪ್ರಕ್ರಿಯೆಯಿಂದ ತಡವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2 ಸಾವಿರ ಕೋಟಿ ರೂ. ಸಾಲ ಕೊಟ್ಟಿದ್ದಾರೆ, ಅದನ್ನ ಕೆ ಎಸ್ ಆರ್ ಟಿಸಿ ತೀರಿಸುತ್ತಿದೆ. ಇಲಾಖೆಯಲ್ಲಿ ಒಟ್ಟು 6 ಸಾವಿರ ಕೋಟಿ ರೂ. ಸಾಲ ಇದೆ. ಇದನ್ನು ಸರ್ಕಾರವೇ ತೀರಿಸಲಿದೆ ಎಂದು ಹೇಳಿದರು.

ನಾನು ಮಂತ್ರಿ ಆದಾಗ 4099 ಕೋಟಿ ಸಾಲ ಇತ್ತು. ಹಿಂದಿನ ಸರ್ಕಾರ ಬಸ್ ಖರೀದಿ ಮಾಡಿರಲಿಲ್ಲ, ನೇಮಕಾತಿ ಆಗಿರಲಿಲ್ಲ. ನಮ ಸರ್ಕಾರ ಬಂದ ಮೇಲೆ ಸುಮಾರು 6 ಸಾವಿರ ಹೊಸ ಬಸ್ ನಾವು ಖರೀದಿ ಮಾಡಿದ್ದೇವೆ. ಅವಧಿ ಮೀರಿರುವ ಯಾವುದೇ ಬಸ್ ನಮಲ್ಲಿ ಇಲ್ಲ. 1 ಲಕ್ಷ ನಿತ್ಯ ಬಸ್ ಟ್ರಿಪ್ ಇದೆ, ಒಂದೋ ಎರಡೋ ಸಮಸ್ಯೆ ಆಗಬಹುದು. ಇದು ಇಂದೂ ಆಗುತ್ತಿದೆ, ಮುಂದೆಯೂ ಆಗುತ್ತದೆ ಎಂದರು.

ಇದಕ್ಕೂ ಮುನ್ನ ಸದಸ್ಯೆ ಭಾರತಿ ಶೆಟ್ಟಿ ಅವರು, ಶಕ್ತಿ ಯೋಜನೆ ಹಣ ಸರ್ಕಾರದಿಂದ ಬಾಕಿ ಇದೆ. ಇದರಿಂದ ಇಲಾಖೆಗೆ ಆರ್ಥಿಕ ಕೊರತೆ ಉಂಟಾಗಿದೆ. ನಮ ಕಾಲದಲ್ಲಿ ಬಸ್ ಸರಿ ಇತ್ತು. ಅದಕ್ಕೆ ಹೊಸ ಬಸ್ ಖರೀದಿ ಮಾಡಿಲ್ಲ. ಈಗ ಸರಿಯಿಲ್ಲ. ಹೊಸ ಬಸ್ ಖರೀದಿ ಮಾಡಬೇಕು. ನಿಮ ಅವಧಿಯಲ್ಲಿ ಕಳೆದ ವರ್ಷ ಖರೀದಿ ಮಾಡಿದ್ದ ಬಸ್ಗಳು ಇನ್ನು ಬಂದಿಲ್ಲ. ಈ ವರ್ಷದ ಬಸ್ ಕೂಡಾ ಇನ್ನು ಬಂದಿಲ್ಲ. ಯಾವಾಗ ಬಸ್ ಬರುತ್ತದೆ? ಎಂದು ಪ್ರಶ್ನೆ ಮಾಡಿದರು.

ಜೆಡಿಎಸ್ನ ಗೋವಿಂದ್ ರಾಜ್, ಕೇಂದ್ರದ ಜಿಸಿಸಿ ಬಸ್ ಯಾವಾಗ ಬರುತ್ತದೆ? ಶಕ್ತಿ ಯೋಜನೆಯಿಂದ 4 ಸಾವಿರ ಕೋಟಿ ರೂ. ಬಾಕಿ ಇದೆ. ಶಕ್ತಿ ಯೋಜನೆ ಆತುರವಾಗಿ ಜಾರಿ ಮಾಡಿದಿರಿ. ಶಕ್ತಿ ಯೋಜನೆಗೆ ಬಾಕಿ ಹಣ ತಗೊಂಡು ಹೊಸ ಬಸ್ ಖರೀದಿ ಮಾಡಬೇಕು. ನೌಕರರ ವೇತನ ಪರಿಷ್ಕರಣೆ ಮಾಡಿ ಎಂದು ಒತ್ತಾಯಿಸಿದರು.

ಸಚಿವ ರಾಮಲಿಂಗಾರೆಡ್ಡಿ ಉತ್ತರಿಸಿ, ನಾನು ಸಚಿವ ಆದಾಗ 4,099 ಕೋಟಿ ಸಾಲ ಇತ್ತು. ಹಿಂದಿನ ಸರ್ಕಾರ ಬಸ್ ಖರೀದಿ ಮಾಡಿರಲಿಲ್ಲ, ನೇಮಕಾತಿ ಆಗಿರಲಿಲ್ಲ ನಾನು ಮಾಡಿದ್ದೇನೆ. 4 ವರ್ಷಕ್ಕೆ ಒಮೆ ವೇತನ ಪರಿಷ್ಕರಣೆ ಆಗಬೇಕಿತ್ತು. 2020, 2021, 2022 ರಲ್ಲಿ ವೇತನ ಪರಿಷ್ಕರಣೆ ಆಗಲಿಲ್ಲ. ಆಂದಿನ ಸರ್ಕಾರ 2023ರಲ್ಲಿ ತೀರ್ಮಾನ ಮಾಡಿತ್ತು. 2025ಕ್ಕೆ ವೇತನ ಪರಿಷ್ಕರಣೆ ಮಾಡಿದ್ದೇವೆ. ನಾನು ಸಿಎಂಗೆ ಹೇಳಿ 26 ತಿಂಗಳ ವೇತನ ಬಿಡುಗಡೆ ಮಾಡಲಾಗಿದೆ. ಒಂದು ವರ್ಷ ತಡವಾಯ್ತು ಅಷ್ಟೇ ಎಂದು ಸಮರ್ಥನೆ ಮಾಡಿಕೊಂಡರು.

# ಆನೆ ಕಂದಕ, ಸೌರಬೇಲಿ ನಿರ್ವಹಣೆಗೆ ಖಂಡ್ರೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕೊಡಗು ಜಿಲ್ಲೆಯಲ್ಲಿ ಮಾನವ–ಆನೆ ಸಂಘರ್ಷ ನಿಯಂತ್ರಣಕ್ಕೆ ತೋಡಲಾಗಿರುವ ಆನೆ ಕಂದಕ ಮತ್ತು ಅಳವಡಿಸಿರುವ ತೂಗು ಸೌರಬೇಲಿಯ ಸಮರ್ಪಕ ನಿರ್ವಹಣೆ ಮಾಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಶಾಸಕರುಗಳಾದ ಎ.ಎಸ್.ಪೊನ್ನಣ್ಣ,ಡಾ.ಮಂಥರಗೌಡ ಮತ್ತು ದರ್ಶನ್ ಧ್ರುವನಾರಾಯಣ್ ಅವರೊಂದಿಗೆ ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಅವರು, ಕೊಡಗಿನಲ್ಲಿ ವನ್ಯಜೀವಿಗಳಿಂದ ಅಮೂಲ್ಯ ಜೀವ ಹಾನಿ ಆಗುತ್ತಿರುವುದು ಆತಂಕದ ವಿಷಯವಾಗಿದ್ದು, ಹಾಲಿ ಇರುವ 422 ಕಿ.ಮೀ ಆನೆ ಕಂದಕ ಮತ್ತು 544 ಕಿ.ಮೀ. ತೂಗು ಸೌರಬೇಲಿಯ ಸಮರ್ಪಕ ದುರಸ್ತಿ ಕಾರ್ಯವನ್ನು ಒಂದು ತಿಂಗಳೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದರು.

ರಾಜ್ಯದಲ್ಲಿ ವನ್ಯಜೀವಿ–ಮಾನವ ಸಂಘರ್ಷದಲ್ಲಿ ಸಂಭವಿಸುವ ಸಾವುಗಳ ಪೈಕಿ ಶೇ.38ರಷ್ಟು ಕೊಡಗು ಜಿಲ್ಲೆಯಲ್ಲಿ ಆಗುತ್ತಿದ್ದು, ಇದನ್ನು ನಿಯಂತ್ರಿಸಲು ಗಸ್ತು ಹೆಚ್ಚಳ ಮಾಡಬೇಕು. ಆನೆ ಕಾರ್ಯಪಡೆ, ತ್ವರಿತ ಸ್ಪಂದನಾ ಪಡೆ ಸೇರಿದಂತೆ ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಣ ಘಟಕಗಳನ್ನು ಬಲಪಡಿಸುವಂತೆ ಸೂಚಿಸಿದರು.



**4 ವಾಹನ ಖರೀದಿಗೆ ಸಮ್ಮತಿ**

ಆನೆ ಸೇರಿದಂತೆ ವನ್ಯಜೀವಿಗಳು ತೋಟಗಳಿಗೆ ಬಂದಾಗ ಅವುಗಳನ್ನು ಕಾಡಿಗೆ ಮರಳಿಸಲು ಸಿಬ್ಬಂದಿ ತ್ವರಿತವಾಗಿ ಸ್ಪಂದಿಸಲು ಹಾಲಿ ಇರುವ 6 ವಾಹನಗಳ ಜೊತೆಗೆ ಈಗಾಗಲೇ 4 ವಾಹನ ಖರೀದಿಸಲಾಗಿದೆ. ಇನ್ನೂ ಹೆಚ್ಚುವರಿಯಾಗಿ 4 ವಾಹನ ಖರೀದಿಸಿ, ಸ್ಥಳೀಯ ಉತ್ಸಾಹಿ ಯುವಕರನ್ನು ಹೊರಗುತ್ತಿಗೆ ಆಧಾರದಲ್ಲಿ ಕಾರ್ಯಪಡೆಗೆ ಸೇರ್ಪಡೆ ಮಾಡಿಕೊಂಡು ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಣೆ ಮಾಡುವಂತೆ ಈಶ್ವರ ಖಂಡ್ರೆ ಸೂಚಿಸಿದರು.

ವನ್ಯಜೀವಿಗಳ ಸಂಚಾರ ಮಾಹಿತಿ ರವಾನಿಸಲು, ಅಕ್ರಮ ಮರ ಕಡಿತಲೆ ಮತ್ತು ವನ್ಯಜೀವಿ ಕಳ್ಳಬೇಟೆ ನಿಗ್ರಹಿಸಲು ಬಲಿಷ್ಠ ನಿಸ್ತಂತು ಜಾಲ (ವೈರ್ ಲೆಸ್ ನೆಟ್ ವರ್ಕ್) ಕಾರ್ಯಾರಂಭಕ್ಕೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳುವಂತೆಯೂ ಸಚಿವರು ಹಿರಿಯ ಅಧಿಕಾರಿಗಳಿಗೆ ತಿಳಿಸಿದರು.

**ವನ್ಯಜೀವಿ ಸಂಚಾರದ ಮಾಹಿತಿ ನೀಡಲು ಆದೇಶ**

ಕೊಡಗು ಜಿಲ್ಲೆಯಲ್ಲಿನ ಪ್ರತಿ ವಲಯದಲ್ಲಿರುವ ತೋಟಗಳಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ಎಂಬ ಬಗ್ಗೆ ದತ್ತಾಂಶ ಕಲೆ ಹಾಕಿ, ಆಯಾ ವಲಯದಲ್ಲಿ ವನ್ಯಜೀವಿಗಳು ಅದರಲ್ಲೂ ಆನೆಗಳು ಜನ ವಸತಿ, ತೋಟಗಳ ಬಳಿ ಬಂದಾಗ ಆ ಕಾರ್ಮಿಕರಿಗೆ ತಕ್ಷಣವೇ ವಾಟ್ಸ್ ಅಪ್ ಮೂಲಕ ಮತ್ತು ಮೈಕ್ ಅಳವಡಿಸಿದ ವಾಹನಗಳ ಮೂಲಕ ಮಾಹಿತಿ ರವಾನಿಸಲು ಕ್ರಮ ವಹಿಸುವಂತೆಯೂ ಸೂಚಿಸಿದರು.

**ಬೇಸಿಗೆಯಲ್ಲಿ ನೀರಿನ ಕೊರತೆ ನೀಗಿಸಲು ಸೂಚನೆ**

ಮಾರ್ಚ್ ಕೊನೆಯ ವಾರದಿಂದ ಮೇ ತಿಂಗಳವರೆಗೆ ಬಿರು ಬಿಸಿಲು ಇರುವ ಕಾರಣ ಕಾಡಿನಲ್ಲಿ ವನ್ಯಜೀವಿಗಳಿಗೆ ನೀರಿನ ಮತ್ತು ಮೇವಿನ ಕೊರತೆ ಬಾರದಂತೆ ಕ್ರಮ ವಹಿಸಲು ಮತ್ತು ಕಾಡಿನೊಳಗಿರುವ ಜಲಗುಂಡಿಗಳಲ್ಲಿ ಇರುವ ನೀರಿನ ಪ್ರಮಾಣದ ಬಗ್ಗೆ ಸಾರ್ವಜನಿಕರಿಗೆ ಮತ್ತು ಸ್ಥಳೀಯ ಜನ ಪ್ರತಿನಿಧಿಗಳಿಗೆ ಮಾಹಿತಿ ನೀಡಲು ಈಶ್ವರ ಖಂಡ್ರೆ ತಿಳಿಸಿದರು.

ಸ್ಥಳೀಯ ಜನರೊಂದಿಗೆ ಅರಣ್ಯ ಅಧಿಕಾರಿಗಳು ಸೌಹಾರ್ದಯುತವಾಗಿ ವರ್ತಿಸಬೇಕು. ಅವರೊಂದಿಗೆ ಉತ್ತಮ ಬಾಂಧವ್ಯ ಇದ್ದಾಗ, ಅವರ ಸಹಕಾರವೂ ಲಭಿಸುತ್ತದೆ. ಸಮಸ್ಯೆಗಳಿಗೆ ಪರಿಹಾರ ಲಭಿಸುತ್ತದೆ ಎಂದು ಸಚಿವರು ಕಿವಿಮಾತು ಹೇಳಿದರು.

ಸಭೆಯಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್, ಹಿರಿಯ ಅರಣ್ಯಾಧಿಕಾರಿಗಳಾದ ಮನೋಜ್ ರಾಜನ್, ಮನೋಜ್ ಕುಮಾರ್, ಸೋನಾಲ್ ವ್ರಿಸ್ನಿ ಮತ್ತಿತರರು ಪಾಲ್ಗೊಂಡಿದ್ದರು.

## ದೇಶ ಕಟ್ಟುವವರು ಶಿಕ್ಷಕರು: ಎಸ್ಪಿ ಲಕ್ಷ್ಮಣ್ ನಿಂಬರಗಿ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**

ದೇಶ ಕಾಯುವ ಸೈನಿಕರು ಜೈ ಜವಾನ್. ಅನ್ನ ನೀಡುವ ರೈತರು ಜೈ ಕಿಸಾನ್. ಅದೇ ರೀತಿ ದೇಶ ಕಟ್ಟುವ ಶಿಕ್ಷಕರು ಜೈ ಶಿಕ್ಷಕ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಹೇಳಿದ್ದಾರೆ.

ಇಂದು ಬುಧವಾರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ನಗರದ ಬಿ. ಎಲ್.ಡಿ.ಇ.ಸಂಸ್ಥೆಯ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿ ಸಂಘವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶ ಕಟ್ಟುವುದು ಮತ್ತು ದೇಶದ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಪಾಲಕರನ್ನು ಹೊರತುಪಡಿಸಿದರೆ ಮಕ್ಕಳು ಶಿಕ್ಷಕರ ಹತ್ತಿರವೇ ಹೆಚ್ಚು ಬೆಳೆಯುತ್ತವೆ. ರಾಜ್ಯದಲ್ಲಿ ಶಿಕ್ಷಣವು ಅತ್ಯುನ್ನತ ಸ್ಥಾನದಲ್ಲಿರಲು ಬಿ.ಎಲ್.ಡಿ.ಇ.ಸಂಸ್ಥೆಯೂ ಮಹತ್ವದ ಕೊಡುಗೆ ನೀಡಿದೆ ಎಂದು ಅವರು ಹೇಳಿದರು.

ಬಿ.ಎಲ್.ಡಿ.ಇ.ಸಂಸ್ಥೆಯ ಎಸ್.ಎಸ್.ಅವರಣದ ಆಡಳಿತಾಧಿಕಾರಿ ಐ.ಎಸ್.ಕಾಳಪ್ಪನವರ ಮಾತ.ನಾಡಿ, ಶಿಕ್ಷಕ ವೃತ್ತಿಯು ಅತ್ಯಂತ ಪವಿತ್ರವಾಗಿದ್ದು, ಬಯಸಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಉತ್ತಮ ಶಿಸ್ತು, ಆರೋಗ್ಯ, ಪ್ರಯತ್ನ ಮತ್ತು ಕರ್ತವ್ಯಶೀಲ ಗುಣಗಳನ್ನು ಅಳವಡಿಸಿಕೊಂಡು ಆದರ್ಶ ಶಿಕ್ಷಕರಾಗಿ ಬೆಳೆಯಬೇಕು ಎಂದು ಹೇಳಿದರು. ಕಾಲೇಜಿನ ಪ್ರಾಚಾರ್ಯೆ ಡಾ. ಭಾರತಿ ವೈ. ಖಾಸನೀಸ ಅವರು ವಿದ್ಯಾರ್ಥಿ ಪ್ರತಿನಿಧಿಗಳಿಗೆ ಪ್ರಮಾಣ ವಚನ ಬೋಧಿಸಿದರು.



ಈ ಸಂದರ್ಭದಲ್ಲಿ ಸಹಪ್ರಾಧ್ಯಾಪಕ ಡಾ. ಎಂ. ಎಸ್. ಹಿರೇಮಠ, ಡಾ.ಜ್ಯೋತಿ ಪಟ್ಟಣಶೆಟ್ಟಿ, ವಿದ್ಯಾ ಭಮಗೊಂಡ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ಆರೋಗ್ಯ ವಿಚಾರಿಸಿದ ಮಾಜಿ ಸಚಿವರು

• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್**

ಸಿಡಿಲು ಬಡಿದು ಗಂಭೀರವಾಗಿ ಗಾಯಗೊಂಡ ಚಿಟಗುಪ್ಪ ತಾಲೂಕಿನ ಶಾಮತಾಬಾದ್ ಗ್ರಾಮದ ಚಂದ್ರಕಾಂತ ಕಲ್ಲಪ್ಪ ಆಸ್ಪತ್ರೆಗೆ ದಾಖಲಾದ ಹಿನ್ನಲೆ, ನಗರದ ಸಾರ್ವಜನಿಕ ಆಸ್ಪತ್ರೆಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಭೇಟಿ ನೀಡಿ ಗಾಯಾಳು ಚಂದ್ರಕಾಂತ ಆರೋಗ್ಯ ವಿಚಾರಿದರು.

ಪ್ರಸ್ತುತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯಬೇಕಾಗಿದ್ದ, ಚಂದ್ರಕಾಂತ ಸಿಡಿಲು ಬಡಿತಕ್ಕೆ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾನೆ. ಈ ಮಾಹಿತಿ ತಿಳಿದು ಹುಮನಾಬಾದ್ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ, ಗಾಯಗೊಂಡ ಚಂದ್ರಕಾಂತ ಅವರ ಆರೋಗ್ಯ ವಿಚಾರಿಸಿ, ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯಾಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಮುಖ್ಯ ವೈದ್ಯಾಧಿಕಾರಿ ಡಾ. ನಾಗನಾಥ ಹುಲಸೂರೆ, ಡಾ. ಮುಸ್ತಾಫಾ, ಡಾ. ರೋಹಿತ ರಘೋಜಿ, ಜೀವನ ಪೋಲೆ, ಶಿವಕುಮಾರ ಬೇಳಕೇರಾ, ತಾನಾಜಿ ಪಾಟೀಲ್, ಶಂಕರನಾಗ ಸಾಹುಕಾರ, ಫಯಾಜ ಗುತ್ತೇದಾರ ಸೇರಿ ಅನೇಕರಿದ್ದರು.



# ಹಸುಗೂಸಿನ ತಾಯಿ ಸಾಬಮ್ಮ ಪರೀಕ್ಷೆ ಬರೆದಳು..!

• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**

ರಾಜ್ಯದಾದ್ಯಂತ ಇಂದು ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ಆರಂಭವಾಗಿವೆ. ಆದರೆ ಇಲ್ಲಿನ ಫ್ರಂಟ್ ಲೈನ್ ಶಾಲೆಯಲ್ಲಿ ಪ್ರಥಮ ಭಾಷೆ ಕನ್ನಡ, ಇಂಗ್ಲಿಷ್ ಹಾಗೂ ಹಿಂದಿ ವಿಷಯದ ಪರೀಕ್ಷೆಗಳು ಶಾಂತಿಯುತವಾಗಿ ನಡೆದಿವೆ. 300 ವಿದ್ಯಾರ್ಥಿಗಳಲ್ಲಿ 292 ಮಂದಿ ಪರೀಕ್ಷೆಗೆ ಹಾಜರಾಗಿದ್ದರು.

ಈ ನಡುವೆ ಪರೀಕ್ಷಾ ಕೇಂದ್ರಕ್ಕೆ 5 ತಿಂಗಳ ಹಸುಗೂಸು ಜತೆಗೆ ಆಗಮಿಸಿದ ವಿದ್ಯಾರ್ಥಿನಿ ಸಾಬಮ್ಮ ( 20) ಎಲ್ಲರ ಗಮನ ಸೆಳೆದಿದ್ದಾರೆ. ತಾಯಿ ಆಗಿದ್ದರೂ ವಿದ್ಯಾಭ್ಯಾಸದ ಮೇಲಿನ ಅವರ ಆಸಕ್ತಿ ಹಾಗೂ ಹಠ ಎಲ್ಲರಿಗೂ ಪ್ರೇರಣೆ ಕೂಡ. ಪರೀಕ್ಷೆ ಬರೆಯಲು ಬಂದ ಅವರು, ಪರೀಕ್ಷಾ ಕೊಠಡಿಗೆ ಪ್ರವೇಶಿಸುವ ಮೊದಲು ತನ್ನ 5 ತಿಂಗಳ ಕೂಸನ್ನು ಹೊರಗಡೆ ಕಾಯುತ್ತಿದ್ದ ಗಂಡನಿಗೆ ಒಪ್ಪಿಸಿ, ಆತ್ಮವಿಶ್ವಾಸದಿಂದ ಪರೀಕ್ಷೆ ಬರೆದಿದ್ದಾರೆ.



ಯಾರಿವರು..?: ನೆರೆಯ ತೆಲಂಗಾಣ ರಾಜ್ಯದ ಮಹಬೂಬ್ ನಗರದ ವಾಸವಿರುವ ಸಾಬಮ್ಮ ತಂದೆಯ ಆಸರೆ ಇಲ್ಲದೆ ತಾಯಿಯೊಂದಿಗೆ ಯಾದಗಿರಿ ನಗರದಲ್ಲಿ ಪ್ರಾಥಮಿಕ ಶಿಕ್ಷಣ ಮುಗಿಸಿದ್ದಾರೆ. ಊರೂರು ಅಲೆಯುವ ಸಣ್ಣ ವ್ಯಾಪಾರ ಮಾಡುವ ವೆಂಕಟೇಶ್ ಜೊತೆಗೆ ಎರಡು ವರ್ಷಗಳ ಹಿಂದೆ ವಿವಾಹವಾಗಿದ್ದರು. 6ನೇ ತರಗತಿ ವರೆಗೆ ಓದಿ, ಅನಿವಾರ್ಯ ಕಾರಣಗಳಿಂದ ವಿದ್ಯಾಭ್ಯಾಸ ನಿಲ್ಲಿಸಿದ್ದ ಅವರು, ಇದೀಗ ತಮ್ಮ ಪತಿಯ ಪ್ರೋತ್ಸಾಹದೊಂದಿಗೆ ಮತ್ತೆ ಓದು ಮುಂದುವರಿಸಲು ನಿರ್ಧರಿಸಿ ಪರೀಕ್ಷೆ ಬರೆಯುತ್ತಿರುವುದು ಗಮನಾರ್ಹ.

### ರಾಜ್ಯದ 2,870 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ

**ರಾಜ್ಯದ 2,870 ಪರೀಕ್ಷಾ ಕೇಂದ್ರಗಳಲ್ಲಿ 2026ರ ಎಸ್ಎಸ್ಎಲ್ಸಿ ಪರೀಕ್ಷೆ–1 ಇಂದಿನಿಂದ ಆರಂಭವಾಗಿದೆ. ಏ.2 ರವರೆಗೆ ಎಸ್ಎಸ್ಎಲ್ಸಿ ಪರೀಕ್ಷೆ ನಡೆಯಲಿದೆ. ಏ.24 ರಂದು ಫಲಿತಾಂಶ ಪ್ರಕಟಿಸುವುದಾಗಿ ತಿಳಿಸಲಾಗಿದೆ.ರಾಜ್ಯಾದ್ಯಂತ ಒಟ್ಟು 8,65,988 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿತ್ತು.**

**ನನ್ನ ಮಡದಿ ಸಾಬಮ್ಮ ಓದುವ ಇಚ್ಛೆಯನ್ನು ನನ್ನ ಮುಂದೆ ತಿಳಿಸಿದಾಗ ನಾನು ಅದಕ್ಕೆ ಸಹಮತಿ ನೀಡಿದ್ದೇನೆ, ಆರ್ಥಿಕವಾಗಿ ತೊಂದರೆಯಾದರೂ ನಾನು ಆಕೆ ಎಲ್ಲಿಯವರೆಗೆ ಓದಿದರೆ ನಾನು ಅಲ್ಲಿಯವರೆಗೆ ಓದಿಸುತ್ತೇನೆ**

**–ವೆಂಕಟೇಶ್, ಸಾಬಮ್ಮಳ ಪತಿ**

# ಆಸಕ್ತಿಗಳು ಹಲವಾರಾದರೂ ಸಾಧನೆಗೆ ಗುರಿ ಒಂದೇ ಇರಲಿ




ಸ್ಪರ್ಧಾತ್ಮಕ ಜಗತ್ತಿನಲ್ಲಿ ಮಕ್ಕಳನ್ನು ಓಟದ ಕುದುರೆಗಳನ್ನಾಗಿ ಮಾಡುತ್ತಿರುವ ಇಂದಿನ ಪೋಷಕರು, ಮಕ್ಕಳ ಸಹಜ ಆಸಕ್ತಿಗಳನ್ನು ಮರೆಯುತ್ತಿದ್ದಾರೆಯೇ? ಸಾಧನೆಯ ಹಾದಿಯಲ್ಲಿ ಗುರಿ ಸ್ಪಷ್ಟವಾಗಿರಬೇಕು ನಿಜ, ಆದರೆ ಆ ಆಯ್ಕೆ ಹೇಗಿರಬೇಕು? ಶಿಕ್ಷಣ ಮತ್ತು ವೃತ್ತಿ ಬದುಕಿನ ನಿರ್ಧಾರಗಳ ಕುರಿತು ಒಂದು ವಿಶ್ಲೇಷಣಾತ್ಮಕ ನೋಟ ಇಲ್ಲಿದೆ.

ಇಂದಿನ ಮೊಬೈಲ್ ಯುಗದಲ್ಲಿ ಕಂಡದ್ದನ್ನೆಲ್ಲ ನಾವೂ ಮಾಡೋಣ ಎನ್ನುವ ಮನಸ್ಥಿತಿ ಮನೆಮಾಡಿದೆ. ಬದುಕು 'ರಿಯಲ್' ಆಗಿರುವುದಕ್ಕಿಂತ ಹೆಚ್ಚಾಗಿ 'ರೀಲ್' ಮಾಯೆಯಾಗಿದೆ. ಮಕ್ಕಳ ಮನಸ್ಸನ್ನು ಅರ್ಥಮಾಡಿಕೊಳ್ಳದ ಪೋಷಕರು, ಅವರು ಆಟವಾಡುವ ವಯಸ್ಸಿನಲ್ಲೇ ಸ್ವಲ್ಪವೂ ಬಿಡುವಿಲ್ಲದಂತೆ ಮಕ್ಕಳನ್ನು ಬ್ಯುಸಿ ಮಾಡುತ್ತಿದ್ದಾರೆ. ಮಕ್ಕಳ ತುಂಟಾಟ, ತರ್ಲೆ–ಚೇಷ್ಟೆಗಳನ್ನು ಸಹಿಸದ ಎಷ್ಟೋ ತಾಯಂದಿರು ನಾನಾ ಟ್ಯೂಷನ್ ಕ್ಲಾಸ್‌ಗಳಿಗೆ ಸೇರಿಸುತ್ತಿದ್ದಾರೆ. ಅವರ ಇಷ್ಟ–ಕಷ್ಟಗಳ ಗೋಜಿಗೆ ಹೋಗದೆ, ತಮ್ಮ ರಿಲ್ಯಾಕ್ಸೇಶನ್‌ಗಾಗಿ ಮಕ್ಕಳಿಗೆ ಬೇಕೋ ಬೇಡವೋ, ಆಸಕ್ತಿ ಇದೆಯೋ ಇಲ್ಲವೋ ಎಂಬುದನ್ನು ಗಮನಿಸದೆ ಟಿವಿ ಶೋಗಳು, ಕರಾಟೆ, ಸಂಗೀತ, ಚಿತ್ರಕಲೆ ಹೀಗೆ ನಾನಾ ತರಗತಿಗಳಿಗೆ ಸೇರಿಸಿ ವಾರಪೂರ್ತಿ ಮಕ್ಕಳು ಕ್ಲಾಸ್‌ಗಳಲ್ಲೇ ಕಳೆಯುವಂತೆ ಮಾಡುತ್ತಿದ್ದಾರೆ.



ಇದರಿಂದಾಗಿ ಮಕ್ಕಳು ತಂದೆ–ತಾಯಿಯ ಜೊತೆಗೆ ಕಳೆಯುವ ಸಮಯ ಕಡಿಮೆಯಾಗಿದೆ. ಮಕ್ಕಳ ಮನಸ್ಸಿನ ಮೇಲೆ ಬೀರುವ ಒತ್ತಡವನ್ನು ಗಮನಿಸದೆ ಪೋಷಕರು ನಡೆದುಕೊಳ್ಳುತ್ತಿದ್ದಾರೆ. ಎಲ್ಲವನ್ನೂ 'ಫಾಸ್ಟ್' ಆಗಿ ಕಲಿತು, ಒಮ್ಮೆಲೇ ಅತಿ ಬುದ್ಧಿವಂತರಾಗಬೇಕು ಎನ್ನುವ ಹಪಾಹಪಿ ಬಹಳ ಮಂದಿಯಲ್ಲಿ ಶುರುವಾಗಿದೆ. ಮಕ್ಕಳು ಚಿಕ್ಕವರಿದ್ದಾಗ ನಾವು ಏನು ಹೇಳುತ್ತೇವೋ ಹಾಗೆಯೇ ಕಲಿಯುತ್ತಾರೆ, ಹಾಗಾಗಿ ಮಕ್ಕಳ ಭವಿಷ್ಯದ ನಿರ್ಧಾರಗಳನ್ನು ನಾವೇ ಮಾಡಬೇಕು ಎಂಬುದು ನಿಜವಾದರೂ, ಅವರು ಇಷ್ಟಪಟ್ಟು ಮಾಡುವ ಚಟುವಟಿಕೆಗಳತ್ತ ಗಮನಹರಿಸುವುದು ಅತಿ ಮುಖ್ಯ.

ಅವರಿಗೆ ಇಷ್ಟವಾದುದನ್ನು ಕಲಿಸಿದರೆ ಮಕ್ಕಳು ಉತ್ಸಾಹದಿಂದ ಕಲಿಯುತ್ತಾರೆ. ಸರಿಯಾದ ಸಮಯದಲ್ಲಿ ಸರಿಯಾದ ಆಯ್ಕೆ ಮಾಡುವುದು ನಮ್ಮ ಜವಾಬ್ದಾರಿ. ಉತ್ತಮ ಆಯ್ಕೆಯು ಅತ್ಯುನ್ನತವಾದ ಫಲಿತಾಂಶವನ್ನು ನೀಡುತ್ತದೆ. ದಿಢೀರ್ ನಿರ್ಧಾರಗಳು ಮುಂದೆ ಹಲವಾರು ಗೊಂದಲಗಳನ್ನು ತಂದೊಡ್ಡಬಹುದು. ಯಾವುದೇ ಕಲಿಕೆ ಅಥವಾ ವ್ಯವಹಾರವಾಗಿರಲಿ, ಆಯ್ಕೆ ಬಹು ಮುಖ್ಯ. ಆಯ್ಕೆ ಮಾಡುವಲ್ಲಿ ದೃಢ ನಿರ್ಧಾರವಿರಲಿ. ನಿಮ್ಮ ಸಾಧನೆಗೆ ಯಾವುದು ಸೂಕ್ತವೆಂದು ನೀವೇ ನಿರ್ಧರಿಸಿ ಆಯ್ಕೆ ಮಾಡಿಕೊಳ್ಳಿ. ನಂತರ ಅದರ ಆಗುಹೋಗುಗಳ ಹಾಗೂ ಅನುಕೂಲ–ಅನಾನುಕೂಲಗಳ ಬಗ್ಗೆ ಯೋಚಿಸಬೇಕು.

ಮಕ್ಕಳ ಮನಸ್ಸು ಹಂತ ಹಂತವಾಗಿ ಬದಲಾಗುತ್ತದೆ. ಮಕ್ಕಳು ಪದವಿ ಪೂರ್ವ ಹಂತದಲ್ಲಿರುವಾಗ ಸಾರಾಸಗಟು ವಿಚಾರ ಮಾಡಿ ನಿರ್ಧಾರ ತೆಗೆದುಕೊಳ್ಳಬೇಕು. ಕಲಿಕೆ ಅಷ್ಟು ಸುಲಭವಲ್ಲ; ಒಂದು ಕೋರ್ಸ್‌ಗೆ ಲಕ್ಷಾಂತರ ರೂಪಾಯಿ ಫೀಸು ಇರುತ್ತದೆ. ಅದರಲ್ಲಿ ಅವರ ಭವಿಷ್ಯ ಅಡಗಿರುತ್ತದೆ. ಹಾಗಾಗಿ ಮಕ್ಕಳು ಓದುವಾಗ ಅವರ ಮನಸ್ಸಿನ ಅನಿಸಿಕೆಗಳನ್ನು ಕೇಳುವುದು ಸೂಕ್ತ. ಕೆಲವು ಸಲ ಆತುರದ ನಿರ್ಧಾರಗಳಿಂದ ಮಕ್ಕಳ ಭವಿಷ್ಯ ಹಾಳಾಗುವುದು ಖಚಿತ. ಎಷ್ಟೋ ಮನೆಗಳಲ್ಲಿ ತಾವೇ ಸರಿಯಾಗಿ ತಿಳಿದುಕೊಳ್ಳದೆ, ಪೋಷಕರು ತಮ್ಮ ಮೂಗಿನ ನೇರಕ್ಕೆ ಮಾತನಾಡಿ, ತಮ್ಮ ಕಾಲಮಾನದ ಗುಂಗಿನಲ್ಲಿ ಅರ್ಧಮರ್ಧ ಕೇಳಿ ತಿಳಿದುಕೊಂಡು ಸೂಕ್ತವಲ್ಲದ ಕೋರ್ಸ್ ಕೊಡಿಸಿದರೆ ಅದು ಮಕ್ಕಳಿಗೆ ಮುಳುವಾಗಬಹುದು.

ಮಕ್ಕಳ ಬುದ್ಧಿವಂತಿಕೆ ಮತ್ತು ಸಾಮರ್ಥ್ಯವನ್ನು ತಿಳಿದು, ಅದಕ್ಕನುಗುಣವಾಗಿ ಇಂದಿನ ಕಾಲಮಾನಕ್ಕೆ ತಕ್ಕ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಳ್ಳುವುದರಿಂದ ಅವರಿಗೂ ನೆಮ್ಮದಿ, ನಮಗೂ ಯಾವುದೇ ಆತಂಕ ಇರುವುದಿಲ್ಲ. ಆಯ್ಕೆಯ ಪ್ರಕ್ರಿಯೆ ಚುರುಕಾಗಿರಲಿ. ಬದುಕಿನ ಬಗ್ಗೆ ನಿರ್ಧಾರಗಳನ್ನು ತೆಗೆದುಕೊಳ್ಳುವಾಗ ಇತರರ ಸಲಹೆಗಳು ಮುಖ್ಯ. ನಮ್ಮವರಿಗೆ ಹೆಚ್ಚಿನ ಪ್ರಾಮುಖ್ಯತೆ ಕೊಟ್ಟು ಅವರ ಅಭಿಪ್ರಾಯ ಹಾಗೂ ಅನಿಸಿಕೆಗಳನ್ನೆಲ್ಲ ಸ್ವ–ವಿಮರ್ಶೆ ಮಾಡಿಕೊಂಡು, ಸ್ವತಂತ್ರವಾಗಿ ನಿರ್ಧರಿಸಿ ಆಯ್ಕೆ ಮಾಡಿಕೊಳ್ಳಬೇಕು. ಆಯ್ಕೆ ಮಾಡಿಕೊಂಡ ಮೇಲೆಯೂ ಒಂದು ಸಲ ನುರಿತ ವ್ಯಕ್ತಿಗಳ ಅಥವಾ ಸಹಪಾಠಿಗಳ ಜೊತೆ ಸಂವಹನ ನಡೆಸಿ ನಿರ್ಧಾರ ತೆಗೆದುಕೊಂಡರೆ ನಷ್ಟ ಹಾಗೂ ಆತಂಕಗಳು ಕಡಿಮೆಯಾಗಬಹುದು.

ಬಿಸಿನೆಸ್ ವ್ಯವಹಾರಗಳು ಜನರೊಂದಿಗೆ ಬೆರೆತು ಮಾಡುವುದರಿಂದ, ಅದರ ಆಗುಹೋಗುಗಳ ಬಗ್ಗೆ ಅರಿವಿರುವ ವ್ಯಕ್ತಿಯೊಂದಿಗೆ ಕೂಲಂಕಷವಾಗಿ ಚರ್ಚಿಸಿ, ಪೂರ್ವಾಪರ ತಿಳಿದು ಅಂತಿಮವಾಗಿ ಸ್ಥಿರವಾದ ನಿರ್ಧಾರ ತೆಗೆದುಕೊಳ್ಳಿ. ಆಯ್ಕೆ ಸ್ವತಂತ್ರವಾಗಿರಲಿ. ಜೀವನದಲ್ಲಿ ಉತ್ತಮ ಆಸಕ್ತಿ ಬೆಳೆಸಿಕೊಂಡು ಮುಂದುವರಿದು ಗುರಿ ತಲುಪಬೇಕಲ್ಲವೇ?

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)